ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ   Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 149 ಸಂಚಿಕೆ- 149 | PAGE-8 ಪುಟ-8 | ಬುಧುವಾರ 23.07.2025 | RS.2/- ಬೆಲೆ 2/-

# ರಾಜ್ಯದ ಅರಣ್ಯಗಳಲ್ಲಿ ದನಕರು ಮೇಯಿಸುವುದನ್ನು ನಿಷೇಧಿಸಲು ಸಚಿವ ಖಂಡ್ರೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಜು.22:ರಾಜ್ಯದಲ್ಲಿರುವ ಎಲ್ಲಾ ಅರಣ್ಯಪ್ರದೇಶದೊಳಗೆ ದನಕರು, ಮೇಕೆ, ಕುರಿ ಮೇಯಿಸುವುದನ್ನು ನಿಷೇಧಿಸಲು ನಿಯಮಾನುಸಾರ ಕ್ರಮ ವಹಿಸುವಂತೆ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.

ಈ ಸಂಬಂಧ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಸೂಚನೆ ನೀಡಿರುವ ಅವರು, ದೊಡ್ಡ ಸಂಖ್ಯೆಯಲ್ಲಿ ಜಾನುವಾರುಗಳನ್ನು ಅರಣ್ಯಪ್ರದೇಶದೊಳಗೆ ಮೇಯಲು ಬಿಡುವುದರಿಂದ ಕಾಡಿನಲ್ಲಿ ಆಗಷ್ಟೇ ಮೊಳಕೆ ಒಡೆದ ಚಿಕ್ಕಪುಟ್ಟ ಸಸಿಗಳು ಸಾಕು ಪ್ರಾಣಿಗಳಿಗೆ ಆಹಾರವಾಗಿ, ಅರಣ್ಯದಲ್ಲಿ ಹೊಸಗಿಡಗಳು ಬೆಳೆಯದೇ ಅರಣ್ಯ ಸಂವರ್ಧನೆಗೆ ಅಡ್ಡಿಯಾಗುತ್ತಿದೆ ಎಂದು ಪರಿಸರಪ್ರೇಮಿಗಳು ಅಭಿಪ್ರಾಯಪಟ್ಟಿರುವುದಾಗಿ ತಿಳಿಸಿದ್ದಾರೆ.

ದೊಡ್ಡ ಸಂಖ್ಯೆಯ ಸಾಕುಪ್ರಾಣಿಗಳು ಕಾಡಿನಲ್ಲಿ ಮೇಯುವುದರಿಂದ ಕಾಡಿನಲ್ಲಿರುವ ಸಸ್ಯಹಾರಿ ಪ್ರಾಣಿಗಳಿಗೂ ಮೇವಿನ ಕೊರತೆ ಉಂಟಾಗುತ್ತದೆ. ಮಿಗಿಲಾಗಿ ಊರಿನಿಂದ ಕಾಡಿಗೆ ಮೇಯಲು ಹೋಗುವ ಪ್ರಾಣಿಗಳಿಂದ ವನ್ಯಜೀವಿಗಳು ಸಾಂಕ್ರಾಮಿಕ ರೋಗಗಳಿಗೆ ತುತ್ತಾಗುವ ಸಾಧ್ಯತೆಯೂ ಇರುತ್ತದೆ ಎಂಬ ಅಂಶವನ್ನೂ ಉಲ್ಲೇಖಿಸಿದ್ದಾರೆ. ಅರಣ್ಯ ಸಂವರ್ಧನೆಯಾಗದಿದ್ದರೆ ಅದು ಆ ಅರಣ್ಯದಲ್ಲಿ ಹರಿಯುವ ನದಿಗಳ ಮೇಲೂ ಪರಿಣಾಮ ಬೀರುತ್ತದೆ. ಇದರಿಂದ ವನ್ಯಜೀವಿ-ಮಾನವ ಸಂಘರ್ಷ ಹೆಚ್ಚಳವಾಗುತ್ತದೆ.

ಕಾಡಿನೊಳಗೆ ಹೋಗುವ ದನಗಾಹಿಗಳು ವನ್ಯಜೀವಿ ದಾಳಿಯಿಂದ ಮೃತಪಟ್ಟರೆ ಪರಿಹಾರ ನೀಡಲೂ ನಿಯಮದಲ್ಲಿ ಅವಕಾಶ ಇರುವುದಿಲ್ಲ. ಹೀಗಾಗಿ ಕೂಡಲೇ ಅಭಯಾರಣ್ಯಗಳಲ್ಲಿ ಮೇಕೆ, ಕುರಿ, ದನಕರುಗಳನ್ನು ಮೇಯಿಸುವುದನ್ನು ನಿಷೇಧಿಸಬೇಕು ಎಂದು ವನ್ಯಜೀವಿ ಪ್ರೇಮಿಗಳು, ಪರಿಸರವಾದಿಗಳು ಅಭಿಪ್ರಾಯಪಟ್ಟಿರುವ ಹಿನ್ನೆಲೆಯಲ್ಲಿ ಈ ಬಗ್ಗೆ ಪರಿಶೀಲಿಸಿ ಕಾನೂನು ರೀತಿಯ ಕ್ರಮವಹಿಸಲು



ಸೂಚಿಸಿದ್ದಾರೆ.

ಕಾಡಿನಲ್ಲಿರುವ ವನ್ಯಜೀವಿಗಳು ಮೇಯಲು ಹೋದ ದನಕರುಗಳನ್ನು ಕೊಂದಾಗ, ಆಕ್ರೋಶಗೊಂಡು ಕೆಲವರು ಮೃತ ಜಾನುವಾರುಗಳಿಗೆ ವಿಷಹಾಕುವ ಕಾರಣ ವನ್ಯಜೀವಿಗಳು ಸಾವಿಗೀಡಾಗುತ್ತವೆ. ಇದಕ್ಕೆ ಇತ್ತೀಚೆಗೆ ಹೂಗ್ಯಂ ವಲಯದಲ್ಲಿ ಒಂದು ತಾಯಿ ಹುಲಿ ಮತ್ತು ನಾಲ್ಕು ಮರಿ ಹುಲಿಗಳು ಸಾವಿಗೀಡಾಗಿರುವುದೇ ಸಾಕ್ಷಿಯಾಗಿದೆ ಎಂದು ಪರಿಸರ ಪ್ರೇಮಿಗಳು ಅಭಿಪ್ರಾಯಪಟ್ಟಿರುತ್ತಾರೆ ಎಂದು ಟಿಪ್ಪಣಿಯಲ್ಲಿ ಉಲ್ಲೇಖಿಸಿದ್ದಾರೆ.

ಮಿಗಿಲಾಗಿ ಮದ್ರಾಸ್ ಹೈಕೋರ್ಟ್ ತಮಿಳುನಾಡಿನ ಅರಣ್ಯದೊಳಗೆ ಸಾಕು ಪ್ರಾಣಿಗಳನ್ನು ಮೇಯಿಸುವುದರ ವಿರುದ್ಧ ನೀಡಿದ ತೀರ್ಪಿನ ಬಳಿಕ, ನೆರೆಯ ರಾಜ್ಯದಿಂದಲೂ ನಮ್ಮ ರಾಜ್ಯಕ್ಕೆ ದನಕರುಗಳನ್ನು ತಂದು ಕಾಡಿನಲ್ಲಿ ಮೇಯಿಸಲಾಗುತ್ತಿದೆ. ಹೀಗಾಗಿ ಕರ್ನಾಟಕ ರಾಜ್ಯದ ಅರಣ್ಯಗಳ ಸಂರಕ್ಷಣೆ ಮತ್ತು ಸಂವರ್ಧನೆಯ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲ ಅರಣ್ಯಪ್ರದೇಶದೊಳಗೆ ಸಾಕು ಪ್ರಾಣಿಗಳನ್ನು ಮೇಯಲು ಬಿಡುವುದನ್ನು ನಿರ್ಬಂಧಿಸಲು ಮತ್ತು ನಿಷೇಧಿಸಲು ನಿಯಮಾನುಸಾರ ಕ್ರಮವಹಿಸಲು ಸೂಚಿಸಿದ್ದಾರೆ.

# ಸಣ್ಣ ವ್ಯಾಪಾರಸ್ಥರಿಗೆ ಜಿಎಸ್‌ಟಿ ನೋಟಿಸ್ ಕೇಂದ್ರದ್ದಲ್ಲ: ಪ್ರಹ್ಲಾದ್ ಜೋಶಿ

ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಜು.22: ರಾಜ್ಯದಲ್ಲಿ ಸಣ್ಣಪುಟ್ಟ ವ್ಯಾಪಾರಿಗಳಿಗೆ ತೆರಿಗೆ ಬಾಕಿ ನೋಟಿಸ್ ನೀಡುತ್ತಿರುವುದು ರಾಜ್ಯ ಸರ್ಕಾರವೇ ಹೊರತು ಕೇಂದ್ರ ಸರ್ಕಾರವಲ್ಲ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಸ್ಪಷ್ಟಪಡಿಸಿದ್ದಾರೆ.

'ತೆರಿಗೆ ನೋಟಿಸ್ ನೀಡುವಲ್ಲಿ ರಾಜ್ಯ ಸಾರ್ಕಾರದ ಪಾತ್ರವೇನಿಲ್ಲ' ಎಂದಿರುವ ಡಿಸಿಎಂ ಡಿಕೆ ಶಿವಕುಮಾರ್ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ರಾಜ್ಯ ಸರ್ಕಾರ ಮಾಡುವುದೆಲ್ಲ ಮಾಡಿಬಿಟ್ಟು ಈಗ ತನಗೇನೂ ಸಂಬಂಧವಿಲ್ಲ ಎನ್ನುತ್ತಿರುವುದು ನಿಜಕ್ಕೂ ಹಾಸ್ಯಾಸ್ಪದ ಎಂದು ಹೇಳಿದರು. ಕರ್ನಾಟಕದಲ್ಲಿ ಸಣ್ಣಪುಟ್ಟ ವ್ಯಾಪಾರಿಗಳಿಗೆ ತೆರಿಗೆ ಬಾಕಿ ನೋಟಿಸ್ ಕೊಟ್ಟಿರುವುದು ರಾಜ್ಯ ಸರ್ಕಾರದ ತೆರಿಗೆ ಇಲಾಖೆ ಅಧಿಕಾರಿಗಳು. ಹಾಗಿದ್ದರೂ ಇದೀಗ ರಾಜ್ಯ ಸರ್ಕಾರಕ್ಕೂ, ಜಿಎಸ್‌ಟಿ ನೋಟಿಸ್‌ಗೂ ಸಂಬಂಧವಿಲ್ಲ ಎನ್ನುತ್ತ ಜನರ ಕಣ್ಣಿಗೆ ಮಣ್ಣೆರಚೋ ಕೆಲಸ ಮಾಡುತ್ತಿದ್ದಾರೆ. ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಿದ್ದಾರೆ ಎಂದು ಟೀಕಿಸಿದರು.

ಕೇಂದ್ರ ಸರ್ಕಾರ ಕ್ರಮ ಕೈಗೊಂಡಿ-ದ್ದರೆ ಬಹುತೇಕ ಎಲ್ಲ ರಾಜ್ಯಗಳಿಗೂ ಅನ್ವಯಿಸುತ್ತಿತ್ತು. ಆದರೆ ಬೇರೆ ಯಾವುದೇ ರಾಜ್ಯಗಳಲ್ಲೂ ತೆರಿಗೆ ಇಲಾಖೆ ಅಧಿಕಾರಿಗಳಿಂದ ಸಣ್ಣಪುಟ್ಟ ವ್ಯಾಪಾರಸ್ಥರಿಗೆ ಜಿಎಸ್‌ಟಿ ನೋಟಿಸ್ ನೀಡಲಾಗಿಲ್ಲ. ಕರ್ನಾಟಕದಲ್ಲಿ ಮಾತ್ರ ಇದಾಗಿದೆ ಎಂದರು.

ಜನರ ಜೊತೆಗೆ ಸಣ್ಣ ವ್ಯಾಪಾರಸ್ಥರಿಗೂ ಕಿರುಕುಳ:

ರಾಜ್ಯ ಕಾಂಗ್ರೆಸ್ ಸರ್ಕಾರ ಬೆಲೆ ಏರಿಕೆ ಮಾಡಿ ಜನಸಾಮಾನ್ಯರ ಗೋಳು ಹೊಯ್ದುಕೊಳ್ಳುವ ಜೊತೆಗೆ ಇದೀಗ ಹಣ್ಣು, ಹಾಲು, ತರಕಾರಿ ಸೇರಿದಂತೆ ದಿನನಿತ್ಯದ ಅಗತ್ಯ ಸರಕು ಸೇವಾ ವ್ಯಾಪಾರಿಗಳಿಗೆ ನೋಟಿಸ್ ನೀಡಿ ಕಿರುಕುಳ ಕೊಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇದರಲ್ಲಿ ಕೇಂದ್ರದ ಪಾತ್ರವಿಲ್ಲ: ಜಿಎಸ್‌ಟಿಯಲ್ಲಿ ಕೇಂದ್ರ ಸರ್ಕಾರದ ಅಡಿಯಲ್ಲಿ 'ಸಿಜಿಎಸ್‌ಟಿ' ಮತ್ತು ರಾಜ್ಯ ಸರ್ಕಾರಗಳ ಅಡಿಯಲ್ಲಿ 'ಎಸ್‌ಜಿಎಸ್‌ಟಿ' ಎಂದು ಎರಡು ಭಾಗವಿದೆ.

(2ನೇ ಪುಟ ನೋಡಿ)

# ಕಾಂಗ್ರೆಸ್ ಪಕ್ಷಕ್ಕೆ ಆಘಾತ: 199 ಕೋಟಿ ರೂ ತೆರಿಗೆ ವಿನಾಯಿತಿ ಮನವಿ ತಿರಸ್ಕಾರ

ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಜು.22: ಬೃಹತ್ ಮೊತ್ತದ ದೇಣಿಗೆಗಳ ಮೇಲಿನ ಆದಾಯ ತೆರಿಗೆ ವಿನಾಯಿತಿ ಕೋರಿದ್ದ ಕಾಂಗ್ರೆಸ್ ಮನವಿಯನ್ನು ಆದಾಯ ತೆರಿಗೆ ಮೇಲ್ಮನವಿ ನ್ಯಾಯಮಂಡಳಿ ತಿರಸ್ಕರಿಸಿದೆ. ಆದಾಯ ತೆರಿಗೆ ಮೇಲ್ಮನವಿ ನ್ಯಾಯಮಂಡಳಿ 199 ಕೋಟಿ ಮೌಲ್ಯದ ದೇಣಿಗೆಗಳ ಮೇಲಿನ ಆದಾಯ ತೆರಿಗೆ ವಿನಾಯಿತಿ ನೀಡಲು ನಿರಾಕರಿಸಿದೆ. 2017-18ನೇ ಸಾಲಿನ ತೆರಿಗೆಗೆ ವಿನಾಯಿತಿ ನೀಡಬೇಕೆಂದು ಕಾಂಗ್ರೆಸ್ ಮನವಿ ಸಲ್ಲಿಸಿತ್ತು.

2018-19 ರಿಂದ ಬಾಕಿ ಇರುವ ಪಕ್ಷದ ನಿಧಿಯಲ್ಲಿ 199 ಕೋಟಿ ರೂ.ಗಳವರೆಗಿನ ಆದಾಯ ತೆರಿಗೆ ಬೇಡಿಕೆಗೆ ಕಾಂಗ್ರೆಸ್ ಯಾವುದೇ ಪರಿಹಾರವನ್ನು ಪಡೆಯುವುದಿಲ್ಲ.

ಐಟಿ ರಿಟರ್ನ್ಸ್‌ಗಳನ್ನು ತಡವಾಗಿ ಸಲ್ಲಿಸುವುದು ಮತ್ತು ನಗದು ದೇಣಿಗೆ ಮಿತಿಗಳನ್ನು ಉಲ್ಲಂಘಿಸಿದ್ದಕ್ಕಾಗಿ ವಿನಾಯಿತಿಗಾಗಿ ಪಕ್ಷದ ಹಕ್ಕನ್ನು ಆದಾಯ ತೆರಿಗೆ ಮೇಲ್ಮನವಿ ನ್ಯಾಯಮಂಡಳಿ ಅಥವಾ ಐಟಿಎಟಿ ವಜಾಗೊಳಿಸಿದೆ."02.02.2019ರಂದು ಸಲ್ಲಿಸಲಾದ ಮೌಲ್ಯಮಾಪಕರ ರಿಟರ್ನ್‌ನ್ನು ಆಕ್ಷೇಪಾರ್ಹ ವಿನಾಯಿತಿಗೆ ಅರ್ಹಗೊಳಿಸಲು 'ಗಡುವು' ದಿನಾಂಕದೊಳಗೆ ಇಲ್ಲ" ಎಂದು ಐಟಿಎಟಿ ಹೇಳಿದೆ.

# ಮಗುವಿನ ಕತ್ತು ಕೊಯ್ದು ಹತ್ಯೆ

ಮಲ್ಲಮ್ಮನುಡಿವಾರ್ತೆ ಬಾಗಲಕೋಟೆ,ಜು.22- ಮೂರು ವರ್ಷದ ಮಗುವಿನ ಕತ್ತು ಕೊಯ್ದು ಹತ್ಯೆ ಮಾಡಿದ ಅಮಾನವೀಯ ಘಟನೆ ಜಿಲ್ಲೆಯ ಹುನಗುಂದ ತಾಲೂಕಿನ ಬೆನಕನವಾರಿ ಗ್ರಾಮದಲ್ಲಿ ಮಂಗಳವಾರ ನಡೆದಿದೆ. ಮಗು ಅಂಗನವಾಡಿಗೆ ಹೋಗುವ ಸಮಯದಲ್ಲಿ ಭೀಮಪ್ಪ ಹನಮಪ್ಪ ವಾಲೀಕಾರ ಎಂಬಾತ ತನ್ನ ಸಂಬಂಧಿ ಸಹೋದರನ ಮೂರುವರ್ಷದ ಪುತ್ರನಿಗೆ ಚಾಕುವಿನಿಂದ ಕೊರಳಿಗೆ ಇರಿದು ಸಾಯಿಸಿದ್ದಾನೆ. ಘಟನಾ ಸ್ಥಳಕ್ಕೆ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು ಸೇರಿದಂತೆ ಹಿರಿಯ ಪೋಲಿಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಹತ್ಯೆಗೈದ ಭೀಮಪ್ಪನನ್ನು ಅಮೀನಗಡ ಪೋಲಿಸರು ಬಂಧಿಸಿದ್ದು, ಪ್ರಕರಣವನ್ನು ಪಿಎಸ್‌ಐ ಜ್ಯೋತಿ ವಾಲಿಕಾರ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

# ಯುವಕನ ಕಿರುಕುಳ: ಯುವತಿ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ,ಜು.22-ಯುವಕನೊಬ್ಬ ನಿರಂತರ ಮಾನಸಿಕ ಹಿಂಸೆ ನೀಡುತ್ತಿದ್ದಾನೆ ಎಂದು ಬೇಸರಗೊಂಡು ಯುವತಿಯೊಬ್ಬಳು ಬೆಣ್ಣೆತೊರಾ ಡ್ಯಾಂ ಹಿನ್ನೀರಿಗೆ ಜಿಗಿದು ಆತ್ಮಹತ್ಯೆ ಮಾಡಿಕೊಂಡ ಘಟನೆ ಕಮಲಾಪುರ ತಾಲೂಕಿನ ಕುರಿಕೋಟ ಗ್ರಾಮದ ಬಳಿ ಸಂಭವಿಸಿದೆ. ಸಾಕ್ಷಿ ತಂದೆ ಮನೋಜ್ ಉಪ್ಪಾರ್ (22) ಆತ್ಮಹತ್ಯೆ ಮಾಡಿಕೊಂಡಿರುವ ಯುವತಿ ಎಂದು ಪೊಲೀಸರು ತಿಳಿಸಿದ್ದಾರೆ. ಈಕೆಗೆ ಮಾನಸಿಕ ಹಿಂಸೆ ನೀಡುತ್ತಿದ್ದ ಯುವಕ ಪ್ರಸ್ತುತ ದುಬೈನಲ್ಲಿ ಇದ್ದಾನೆ ಎಂದು ಹೇಳಲಾಗಿದೆ. ಕಮಲಾಪುರ



ತಾಲೂಕಿನ ಘೋಷಣೆಗೆ ಗ್ರಾಮದ ಯುವತಿ ಸಾಕ್ಷಿ ಉಪ್ಪಾರ್ ತನಗೆ ಅಭಿಷೇಕ್ ಮಾಳಿಗೆ ಎಂಬ ಯುವಕ ಕಿರುಕುಳ ನೀಡುತ್ತಿದ್ದಾನೆ ಎಂದು ಆಕೆ ಬೇಸರಗೊಂಡಿದ್ದಳು.

ಸಾಕ್ಷಿಯ ಜೊತೆಯಲ್ಲಿರುವ ಫೊ?ಟೋಗಳನ್ನು ಅಭಿಷೇಕ್ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಮಾಡಿದ್ದ ಎನ್ನಲಾಗಿದೆ. ಇದರಿಂದ ಬೇಸತ್ತಿದ್ದ ಸಾಕ್ಷಿ ನಿನ್ನೆ ಬೆಣ್ಣೆತೊರಾ ಡ್ಯಾಂ ಹಿನ್ನೀರಿಗೆ ಜಿಗದು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಅಗ್ನಿಶಾಮಕ ದಳದ ಸಿಬ್ಬಂದಿ ಮೃತ ದೇಹಕ್ಕಾಗಿ ಹಿನ್ನೀರಿನಲ್ಲಿ ಹುಡುಕಾಟ ಆರಂಭಿಸಿದ್ದಾರೆ. ಮಹಾಗಾಂವ್ ಪೊಲೀಸ್ ಠಾಣೆಯಲ್ಲಿ ಈ ಕುರಿತು ಪ್ರಕರಣ ದಾಖಲಾಗಿದೆ.

# ಜಿಲ್ಲಾಧಿಕಾರಿಗಳ ದಿಢೀರ್ ಭೇಟಿ: ಅಧಿಕಾರಿಗಳಲ್ಲಿ ತಳಮಳ

ಮಲ್ಲಮ್ಮನುಡಿವಾರ್ತೆ
ಯಾದಗಿರಿ:,ಜು.22 ಜಿಲ್ಲೆಗೆ ಇತ್ತೀಚೆಗಷ್ಟೇ ನೇಮಕಗೊಂಡಿರುವ ನೂತನ ಜಿಲ್ಲಾಧಿಕಾರಿಗಳಾದ ಹರ್ಷಲ್ ಬೋಯರ್ ಅವರು ದಿಢೀರ್ ಭೇಟಿ ನೀಡುತ್ತಿರುವ ಕ್ರಮದಿಂದ ಜಿಲ್ಲೆಯಲ್ಲಿ ಅಧಿಕಾರಿ ವರ್ಗದಲ್ಲಿ ತೀವ್ರ ಚರ್ಚೆಗೆ ಕಾರಣವಾಗುತ್ತಿದೆ.



ಹರ್ಷಲ್ ಬೋಯರ್ ಅವರು ಯಾವುದೇ ಪೂರ್ವ ಸೂಚನೆ ಇಲ್ಲದೇ ಅನಿರೀಕ್ಷಿತವಾಗಿ ವಿವಿಧ ಇಲಾಖೆ ಹಾಗೂ ಸಾರ್ವಜನಿಕ ಸೇವಾ ಕಚೇರಿಗಳಿಗೆ ಭೇಟಿ ನೀಡುತ್ತಿದ್ದು, ಸಮಯ, ಸ್ಥಳ ಹೇಳದೆ ಬರುತ್ತಿರುವುದರಿಂದ ಅಧಿಕಾರಿಗಳು ಆತಂಕಕ್ಕೆಓಳಗಾಗಿದ್ದಾರೆ. ಕಾರ್ಯಾಲಯಗಳ ಶಿಸ್ತು, ದಾಖಲೆಗಳ ಪ್ರಾಮಾಣಿಕತೆ, ಹಾಗೂ ಸಾರ್ವಜನಿಕರ ಅಹವಾಲುಗಳಿಗೆ ಸ್ಪಂದನೆ ಬಗ್ಗೆ ನಿಕಟದಿಂದ ಪರಿಶೀಲನೆ ನಡೆಸುತ್ತಿರುವ ಜಿಲ್ಲಾಧಿಕಾರಿಗಳ ಈ ನಡೆ ಸಾಮಾನ್ಯ ಜನರಲ್ಲಿ ಮೆಚ್ಚುಗೆಗೆ ಪಾತ್ರವಾಗಿದ್ದು, ಆಫೀಸರಲ್ಲಿ ಜವಾಬ್ದಾರಿಯ ಭಾವ ಹೆಚ್ಚಿಸಿದೆ. ಜಿಲ್ಲಾಡಳಿತಕ್ಕೆ ಹೊಸ ಶಕ್ತಿ ನೀಡುವ ಈ ಕಣ್ಗಾವಲು ತಂತ್ರದಿಂದ ಶಿಸ್ತಿನ ಆಡಳಿತಕ್ಕೆ ಬುನಾದಿ ಬೀಳಲಿದೆ ಎಂಬ ಸಾರ್ವಜನಿಕರಲ್ಲಿ ನಂಬಿಕೆ ಹೆಚ್ಚಾಗಿದೆ.


# ಭಾರಿ ಮಳೆಗೆ ಹಲವು ಗ್ರಾಮಗಳ ಸಂಪರ್ಕ ಕಡಿತ

ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ: ಜಿಲ್ಲೆಯ ಚಿಂಚೋಳಿ ತಾಲೂಕಿನಲ್ಲಿ ತಡರಾತ್ರಿ ಸುರಿದ ಭಾರಿ ಮಳೆಯಿಂದಾಗಿ ತಾಲೂಕಿನ ವಿವಿಧೆಡೆ ಹಳ್ಳ-ಕೊಳ್ಳಗಳು ತುಂಬಿ ಹರಿಯುತ್ತಿರುವ ಕಾರಣ ಹಲವು ಗ್ರಾಮಗಳ ಸಂಪರ್ಕ ಕಡಿದು ಹೋಗಿದೆ. ತಾಲೂಕಿನ ಭೂತ್ಪುರ ಗ್ರಾಮದಿಂದ ಚಿಂಚೋಳಿ,

ಕಾಳಗಿ, ಸೇಡಂ ಮಧ್ಯೆ ಸಂಪರ್ಕ ಕಲ್ಪಿಸುವ ರಸ್ತೆ ನೀರಿನಲ್ಲಿ ಸಂಪೂರ್ಣವಾಗಿ ಮುಳುಗಿ ಹೋಗಿದೆ.

ಹೀಗಾಗಿ ಈ ಗ್ರಾಮಗಳಿಂದ ಸೇಡಂಗೆ ಸಂಪರ್ಕ ಕಡಿದು ಹೋಗಿದೆ. ಇನ್ನೊಂದೆಡೆ ತಾಲೂಕಿನ

(2ನೇ ಪುಟ ನೋಡಿ)



# ಸಮಗ್ರ ಮತ್ತು ಸುಸ್ಥಿರ ಅಭಿವೃದ್ಧಿಗೆ ಡಿ. 15ಕ್ಕೆ ಸರ್ಕಾರಕ್ಕೆ ವರದಿ ಸಲ್ಲಿಕೆ:ಬಿ.ಆರ್.ಪಾಟೀಲ



ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ,ಜು.22:ರಾಜ್ಯದಲ್ಲಿ ಮಾನವ ಅಭಿವೃದ್ಧಿ ಹಾಗೂ ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ ರೂಪಿಸಲು ವಿವಿಧ ಹಂತಗಳ ಪ್ರಕ್ರಿಯೆ ಮುಗಿಸಿದ ನಂತರ ಡಿಸೆಂಬರ್ 15 ರೊಳಗೆ ಯೋಜನಾ ಆಯೋಗದಿಂದ ಸರ್ಕಾರಕ್ಕೆ ದೂರದೃಷ್ಟಿ ಯೋಜನೆ-2031ಕ್ಕೆ ಅನುಗುಣವಾಗಿ ವರದಿ ಸಲ್ಲಿಸಲಾಗುವುದು ಎಂದು ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್.ಪಾಟೀಲ ಹೇಳಿದರು.

ಮಂಗಳವಾರ ಇಲ್ಲಿನ ಡಿ.ಸಿ.ಕಚೇರಿ ಸಭಾಂಗಣದಲ್ಲಿ ಕಲ್ಯಾಣ ಕರ್ನಾಟಕ ಭಾಗದ 7 ಜಿಲ್ಲೆಗಳ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ನಿಟ್ಟಿನಲ್ಲಿ ಮೊದಲನೇ ಹಂತವಾಗಿ ಇದೇ ಮಾಹೆಯಲ್ಲಿ ಇಲಾಖಾವಾರು ಮಾಹಿತಿ ಸಂಗ್ರಹಣೆ ಮತ್ತು ವಾಸ್ತವ ಸ್ಥಿತಿಯ ವಿಶ್ಲೇಷಣೆ ಮಾಡುವುದು ಅಗತ್ಯವಾಗಿದೆ ಎಂದರು.

ನಂತರ ಎರಡನೇ ಹಂತದಲ್ಲಿ 15ನೇ ಆಗಸ್ಟ್‌ರೊಳಗಾಗಿ ಗ್ರಾಮೀಣ ಮತ್ತು ನಗರ ಭಾಗದಲ್ಲಿ ವಾರ್ಡ್ ಮತ್ತು ಗ್ರಾಮವಾರು ಸಭೆ, 3ನೇ ಮತ್ತು 4ನೇ ಹಂತದಲ್ಲಿ ಕ್ರಮವಾಗಿ ಗ್ರಾಮ ಪಂಚಾಯತ್ ಸಭೆ ಮತ್ತು ತಾಲೂಕ ಪಂಚಾಯತ್-ಪೌರ ಸಂಸ್ಥೆಗಳ ಸಭೆ ಸೆಪ್ಟೆಂಬರ್ 15ರೊಳಗೆ ಹಾಗೂ 5ನೇ ಹಂತದಲ್ಲಿ ತಾಲೂಕಾ ಯೋಜನಾ ಮತ್ತು ಅಭಿವೃದ್ಧಿ ಸಮಿತಿ ನಡೆಸಿ ತಾಲೂಕಿನ ಸಮಗ್ರ ವರದಿ ಸಿದ್ದಪಡಿಸಬೇಕು. ತದನಂತರ ಸೆಪ್ಟೆಂಬರ್ 30ರೊಳಗೆ 6ನೇ ಹಂತದಲ್ಲಿ ಜಿಲ್ಲಾ ಪಂಚಾಯತ್ ಸಭೆ, 7ನೇ ಹಂತವಾಗಿ ಅಕ್ಟೋಬರ್ 10 ರೊಳಗೆ ಜಿಲ್ಲಾ ಯೋಜನಾ ಸಮಿತಿ ಸಭೆ ಕರೆಯಬೇಕು. ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ

(2ನೇ ಪುಟ ನೋಡಿ)

# ನಿಮಿಷಾ ಪ್ರಿಯಾಳ ಮರಣದಂಡನೆ ಶಿಕ್ಷೆ ರದ್ದು

ಯೆಮೆನ್:ಜು.22: ಕೊಲೆ ಪ್ರಕರಣದಲ್ಲಿ ಮರಣದಂಡನೆ ಎದುರಿಸುತ್ತಿದ್ದ ಕೇರಳದ ನರ್ಸ್ ನಿಮಿಷಾ ಪ್ರಿಯಾ ಅವರಿಗೆ ಈಗ ನಿರಾಳತೆ ಸಿಕ್ಕಿದೆ ಎಂದು ಕಾಣುತ್ತಿದೆ. ಅಲ್ಲಿನ ಸರ್ಕಾರ ಅವರಿಗೆ ನೀಡಲಾದ ಮರಣದಂಡನೆಯನ್ನು ರದ್ದುಪಡಿಸಿದೆ ಎಂದು ಕ್ರಿಶ್ಚಿಯನ್ ಧಾರ್ಮಿಕ ನಾಯಕ ಡಾ. ಕೆ.ಎ. ಪಾಲ್ ಘೋಷಿಸಿದ್ದಾರೆ.

ಮಂಗಳವಾರ ರಾತ್ರಿ ಯೆಮೆನ್ ರಾಜಧಾನಿ ಸನಾದಿಂದ ಬಿಡುಗಡೆ-ಯಾದ ವೀಡಿಯೊ ಸಂದೇಶದಲ್ಲಿ ಅವರು ಇದನ್ನು ಬಹಿರಂಗಪಡಿಸಿದರು. ಭಾರತೀಯ ರಾಜತಾಂತ್ರಿಕ ಅಧಿಕಾರಿಗಳು ಮತ್ತು ಯೆಮೆನ್ ನಾಯಕರೊಂದಿಗೆ ಹತ್ತು ದಿನಗಳ ಹಗಲು ರಾತ್ರಿ ಚರ್ಚೆಯ ನಂತರವೇ ಈ ಯಶಸ್ಸು ಸಾಧಿಸಲಾಗಿದೆ. ಇದು ದೇವರ ದಯೆಯಿಂದ ಸಾಧ್ಯ. ನಿಮಿಷಾ ಪ್ರಿಯಾ ಶೀಘ್ರದಲ್ಲೇ ಭಾರತಕ್ಕೆ ಮರಳಲಿದ್ದಾರೆ. ಭಾರತ ಸರ್ಕಾರವು ಅವರ ಸುರಕ್ಷಿತ ವರ್ಗಾವಣೆಗೆ ಈಗಾಗಲೇ ಲಾಜಿಸ್ಟಿಕಲ್ ವ್ಯವಸ್ಥೆಗಳನ್ನು ಮಾಡುತ್ತಿದೆ ಎಂದು ಕೆ.ಎ.ಪಾಲ್ ಹೇಳಿದರು.

ಕೆಎ ಪಾಲ್ ತಮ್ಮ ಎಕ್ಸ್ ವೇದಿಕೆಯಲ್ಲಿ ತಮ್ಮೊಂದಿಗೆ ಯೆಮೆನ್ ನಾಯಕರ ವೀಡಿಯೊವನ್ನು ಪೋಸ್ಟ್ ಮಾಡಿದ್ದು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಭಾರತ ಸರ್ಕಾರ ವಿದೇಶಾಂಗ ಸಚಿವಾಲಯದ ಮೂಲಕ ಕಾನೂನು ನೆರವು ನೀಡಿದೆ. ನಿಮಿಷಾ ಅವರ ಕುಟುಂಬಕ್ಕೆ ಕಾನೂನು ಬೆಂಬಲ ನೀಡಲು ವಕೀಲರನ್ನು ನೇಮಿಸಲಾಗಿದೆ ಎಂದು ಎಂಇಎ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. ಸರ್ಕಾರವು ಶರಿಯಾ ಕಾನೂನಿನಡಿಯಲ್ಲಿ ಕ್ಷಮಾದಾನ ಅಥವಾ ಪರಿಹಾರ (ದಿಯಾ) ನಂತಹ ಆಯ್ಕೆಗಳನ್ನು ಸಹ ಪರಿಗಣಿಸಿದೆ.



ಮೃತ ಮಹ್ದಿ ಅವರ ಕುಟುಂಬವು ರಕ್ತದ ಹಣವನ್ನು ಸ್ವೀಕರಿಸದ ಕಾರಣ ಪ್ರಕರಣವು ಮತ್ತಷ್ಟು ಜಟಿಲವಾಗಿತ್ತು. ಖಾಂತಪುರಂ ಎಪಿ ಅಬುಬಕ್ಕರ್ ಮುಸ್ಲಿಂ ಯುವಾರ್ ಯೆಮೆನ್ ಧಾರ್ಮಿಕ ಮುಖಂಡರೊಂದಿಗೆ ಮಾತುಕತೆ ನಡೆಸಿದ್ದರೂ, ಮೃತರ ಕುಟುಂಬವು "ನಮಗೆ ನ್ಯಾಯ ಬೇಕು, ಕ್ಷಮೆಯಲ್ಲ" ಎಂದು ಹೇಳಿಕೊಂಡಿತ್ತು. ಇನ್ನು ಜುಲೈ 16 ರಂದು ನಿಗದಿಯಾಗಿದ್ದ ಮರಣದಂಡನೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿತ್ತು.

2008ರಲ್ಲಿ ನರ್ಸ್ ಆಗಿ ಯೆಮೆನ್‌ಗೆ ಹೋದ ನಿಮಿಷಾ ಪ್ರಿಯಾ ಅಲ್ಲಿ ತನ್ನದೇ ಆದ ಕ್ಲಿನಿಕ್ ಅನ್ನು ನಡೆಸುತ್ತಿದ್ದರು ಮತ್ತು ಸ್ಥಳೀಯ ಮಹ್ದಿಯೊಂದಿಗೆ ಪಾಲುದಾರಿಕೆಯನ್ನು ಸ್ಥಾಪಿಸಿದರು. ಆದರೆ ಆತ ಪ್ರಿಯಾಳಿಗೆ ಕಿರುಕುಳ ನೀಡಲು ಶುರು ಮಾಡಿದ್ದರಿಂದ ನಿಮಿಷಾ ಅವನಿಗೆ ಮಾದಕ ದ್ರವ್ಯಗಳ ಚುಚ್ಚುಮದ್ದು ನೀಡಿದ್ದಳು. ಅದು ಓವರ್ ಡೋಸ್ ಆಗಿ ಮಹ್ದಿ ಮೃತಪಟ್ಟಿದ್ದನು. ಪರಿಣಾಮವಾಗಿ ನಿಮಿಷಾ ಪ್ರಿಯಾ ವಿರುದ್ಧ ಕೊಲೆ ಪ್ರಕರಣ ದಾಖಲಾಗಿ, ಯೆಮೆನ್ ನ್ಯಾಯಾಲವು ಆಕೆಗೆ ಮರಣದಂಡನೆ ವಿಧಿಸಿತ್ತು. ನಂತರ ವಿಚಾರಣಾ ನ್ಯಾಯಾಲಯವು 2020ರಲ್ಲಿ ಶಿಕ್ಷೆಯನ್ನು ಎತ್ತಿಹಿಡಿಯಿತು. ಆ ಬಳಿಕ 2023ರಲ್ಲಿ ಸುಪ್ರೀಂ ಕೋರ್ಟ್ ಸಹ ಶಿಕ್ಷೆಯನ್ನು ಎತ್ತಿಹಿಡಿಯಿತು. ನಿಮಿಷಾ ಪ್ರಿಯಾ ಪ್ರಸ್ತುತ ಸನಾ ಜೈಲಿನಲ್ಲಿ ಶಿಕ್ಷೆ ಅನುಭವಿಸುತ್ತಿದ್ದಾರೆ. ನಿಮಿಷಾ ಪ್ರಿಯಾ ಅವರ ಮರಣದಂಡನೆಯನ್ನು ಕಡಿಮೆ ಮಾಡಲಾಗಿದೆ ಎಂದು ಡಾ. ಕೆ.ಎ. ಪಾಲ್ ಘೋಷಿಸಿದರೂ, ಯೆಮೆನ್ ಸರ್ಕಾರ ಇನ್ನೂ ಅಧಿಕೃತ ಹೇಳಿಕೆ ನೀಡಿಲ್ಲ. ಆದಾಗ್ಯೂ, ಈ ಸುದ್ದಿಗೆ ಸಾಮಾಜಿಕ ಮಾಧ್ಯಮದಲ್ಲಿ ಭಾರಿ ವೈರಲ್ ಆಗುತ್ತಿದೆ. ಈ ಯಶಸ್ಸಿಗೆ ಭಾರತ ಮತ್ತು ಯೆಮೆನ್ ಸರ್ಕಾರಗಳ ಸಹಕಾರ, ಧಾರ್ಮಿಕ ನಾಯಕರ ಉಪಕ್ರಮ ಮತ್ತು ಕೆ.ಎ. ಪಾಲ್ ಅವರಂತಹ ಜನರ ನಿರಂತರ ರಾಜತಾಂತ್ರಿಕತೆ ಕಾರಣವೆಂದು ಹೇಳಬಹುದು. ಪ್ರಸ್ತುತ, ದೇಶಾದ್ಯಂತ ಅನೇಕ ಜನರು ನಿಮಿಷಾ ಪ್ರಿಯಾ ಮನೆಗೆ ಮರಳಲು ಕಾಯುತ್ತಿದ್ದಾರೆ.

## ಒಂದನೇ ಪುಟದಿಂದ

# ಸರ್ಕಾರಕ್ಕೆ ವರದಿ ಸಲ್ಲಿಕೆ:ಬಿ.ಆರ್.ಪಾಟೀಲ

ಮತ್ತು ಅಭಿವೃದ್ಧಿ ಸಮಿತಿಯು 20ನೇ ಅಕ್ಟೋಬರ್ ದೊಳಗೆ, ಕೊನೆಯದಾಗಿ ರಾಜ್ಯ ನೀತಿ ಮತ್ತು ಯೋಜನಾ ಆಯೋಗವು ನವೆಂಬರ್ 30 ರೊಳಗೆ ಸಭೆ ನಡೆಸಿ ಅಂತಿವಾಗಿ ಡಿಸೆಂಬರ್ 15ಕ್ಕೆ ಮಾನವ ಅಭಿವೃದ್ಧಿ ಸೂಚ್ಯಂಕ ಹೆಚ್ಚಳ ನಿಟ್ಟಿನಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗುತ್ತದೆ ಎಂದು ವಿವಿಧ ಹಂತಗಳ ಕುರಿತು ಮಾಹಿತಿ ನೀಡಿದರು.

ಹೀಗಾಗಿ ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಅಧಿಕಾರಿಗಳು ತಮ್ಮ ಹಂತದಲ್ಲಿನ ಸಮಗ್ರ ಮಾಹಿತಿಯನ್ನು ಸಂಬಂಧಪಟ್ಟ ಸಮಿತಿಗಳಿಗೆ ಸಲ್ಲಿಸಬೇಕು. ಈ ಪ್ರಕ್ರಿಯೆ ತ್ವರಿತವಾಗಿ ಅಂದುಕೊಂಡಂತೆ ಡಿಸೆಂಬರ್ ಒಳಗೆ ಸರ್ಕಾರಕ್ಕೆ ಪಂಚ ವಾರ್ಷಿಕ ಯೋಜನೆಯ ವರದಿ ಸಲ್ಲಿಸಿದಲ್ಲಿ ಮುಂದಿನ ಆಯವ್ಯಯದಲ್ಲಿ ಯೋಜನೆ ರೂಪಿಸಲು ಸಹಾಯವಾಗಲಿದೆ. ಈ ಕುರಿತು ಸಿ.ಎಂ. ಅವರು ಕಾಲಮಿತಿಯಲ್ಲಿಯೇ ವರದಿ ಸಲ್ಲಿಸಲು ತಮಗೆ ಸೂಚನೆ ನೀಡಿದ್ದಾರೆ ಎಂದರು.

ತಾವು ಅಧಿಕಾರ ವಹಿಸಿದ ನಂತರ ನಾಲ್ಕು ಬಾರಿ ಯೋಜನಾ ಆಯೋಗದ ಸಭೆ ನಡೆಸಿದ್ದೇನೆ. ವಿಭಾಗವಾರು ಸಭೆ ಕಲಬುರಗಿ ಮೊದಲನೇಯದಾಗಿದೆ ಎಂದ ಅವರು, ಕೆ.ಕೆ.ಆರ್.ಡಿ.ಬಿ. ಮಂಡಳಿ ಇರುವುದರಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅನುದಾನ ಕೊರತೆ ಇಲ್ಲ. ನಿರ್ದಿಷ್ಟ ಯೋಜನೆಗೆ ಕಾರ್ಯಕ್ರಮ ರೂಪಿಸಬಹುದಾಗಿದೆ ಎಂದರು.

ಅಪೂರ್ಣ ಯೋಜನೆ ತಪ್ಪಿಸಿ,ಸುಸ್ಥಿರ ಅಭಿವೃದ್ಧಿಗೆ ಯೋಜನೆ ರೂಪಿಸಿ: ಶಾಸನ ಸಭೆಯು ನೀತಿ ನಿರೂಪಿಸಿ ಬಿಡುತ್ತದೆ. ವಾಸ್ತವಾಗಿ ಕಾರ್ಯಕ್ರಮಗಳಿಗೆ ಅನುದಾನ ಸೇರಿ ನಾನಾ ಕಾರಣದಿಂದ ನಿರೀಕ್ಷಿತ ಮಟ್ಟದಲ್ಲಿ ಅದು ಕಾರ್ಯಸಾಧ್ಯ ವಾಗುವುದಿಲ್ಲ. ಇನ್ನು ಅಗತ್ಯ ಇದ್ದ ಕಡೆ ಹೊರತುಪಡಿಸಿ ಬೇರೆಡೆಗೆ ಅನುದಾನ ಖರ್ಚು ಮಾಡುತ್ತಿದ್ದೇವೆ. ಉದಾಹರಣೆಗೆ ಜಿಲ್ಲಾ ಪಂಚಾಯತ್ ವಾರ್ಷಿಕ ಸಭೆಯಲ್ಲಿ ಕಲಬುರಗಿ–ಬೀದರ ಭಾಗದಲ್ಲಿ ಒಳನಾಡು ಮೀನುಗಾರಿಕೆಗೆ ಅನುದಾನ ಮೀಸಲಿಡಲಾಗುತ್ತಿದ್ದು, ಇದು ಅನಗತ್ಯ ಅನ್ಸುತ್ತೆ. ಇದರ ಬದಲಾಗಿ ಶಿಕ್ಷಣ, ಆರೋಗ್ಯ, ಅಪೌಷ್ಟಿಕತೆ ನಿವಾರಣೆಗೆ ಅನುದಾನ ವರ್ಗಾಯಿಸುವುದು ಒಳ್ಳೆಯದು. ಇಲ್ಲಿನ ಮಕ್ಕಳಲ್ಲಿ ಇನ್ನು ಅರೋಗ್ಯ ಸುಧಾರಣೆ ಕಂಡಿಲ್ಲ. ಸರ್ವ ಶಿಕ್ಷಣ ಅಭಿಯಾನದಡಿ ಶಾಲಾ ಕೊಠಡಿಗಳು ನಿರ್ಮಿಸಿದ್ದೇವೆ, ಮಕ್ಕಳಿಲ್ಲದೆ ಅವು ಖಾಲಿ ಉಳಿದಿವೆ. ಈ ಬಗ್ಗೆ ಯೋಚಿಸಿ ಕಾರ್ಯಕ್ರಮ ರೂಪಿಸಬೇಕು. ನೀತಿ, ಕಾರ್ಯಕ್ರಮಗಳು ಹಾಗೂ ಅನುಷ್ಠಾನ ಒಂದಕ್ಕೊಂದು ಸಮನ್ವಯತೆ ಇಲ್ಲದಕ್ಕಾಗಿ ಅನೇಕ ಯೋಜನೆಗಳು ಅಪೂರ್ಣವಾಗುತ್ತಿವೆ. ಅಧಿಕಾರಿಗಳು ಇದನ್ನು ತಪ್ಪಿಸಬೇಕು ಮತ್ತು ಸುಸ್ಥಿರ ಅಭಿವೃದ್ಧಿಗೆ ಯೋಜನೆ ರೂಪಿಸಿ ಅದನ್ನು ಕಾರ್ಯಾನುಷ್ಠಾನಕ್ಕೆ ತರಬೇಕು ಎಂದು ಬಿ.ಆರ್.ಪಾಟೀಲ ತಿಳಿಸಿದರು.

ಶಾಲಾ ನಿರ್ವಹಣೆ ಇಲಾಖೆ ಮಾಡಲಿ: ಕೆ.ಕೆ.ಆರ್.ಡಿ.ಬಿ. ಮಂಡಳಿಯಿಂದ ಕಲ್ಯಾಣ ಕರ್ನಾಟಕಭಾಗದಲ್ಲಿ ಆರೋಗ್ಯ, ಶಿಕ್ಷಣ ಸೇರಿದಂತೆ ವಿಚಿಥ ಕ್ಷೇತ್ರದಲ್ಲಿ ಮೂಲಸೌಕರ್ಯ ಬಲವರ್ಧನೆ ಬಂಡವಾಳ ಹಾಕಲಾಗುತ್ತಿದೆ, ಆದರೆ ಸರ್ಕಾರಿ ಸಂಸ್ಥೆಗಳ ನೌಕರರಿಗೆ ಸಂಬಳ, ನಿರ್ವಹಣೆ ವ್ಯವಸ್ಥೆ ಮಂಡಳಿಯಿಂದ ಮಾಡುವುದು ಕಷ್ಟಸಾಧ್ಯ. ಶಾಲೆಗಳಿಗೆ ವಿದ್ಯುತ್, ಶೌಚಾಲಯ, ಸ್ವಚ್ಚತೆಗೆ ವಾರ್ಷಿಕ 5–10 ಸಾವಿರ ರೂ. ನಿರ್ವಹಣೆಗೆ ನೀಡಲಾಗುತ್ತಿದೆ. ಅದು ಸಾಕಾಗುವುದಿಲ್ಲ. ಶಿಕ್ಷಣ ಇಲಾಖೆ ಶಾಲೆಗಳ ನಿರ್ವಹಣೆಗೆ ಅನುದಾನ ನೀಡಬೇಕು ಎಂದು ಕೆ.ಕೆ.ಆರ್.ಡಿ.ಬಿ ಮಂಡಳಿ ಕಾರ್ಯದರ್ಶಿ ನಲಿನ್ ಅತುಲ್ ಹೇಳಿದರು.

ಜಿಲ್ಲಾ ಮಾನವ ಅಭಿವೃದ್ಧಿ ಹಾಗೂ ಸಮಗ್ರ ಹಾಗೂ ಸುಸ್ಥಿರ ಅಭಿವೃದ್ಧಿ ಯೋಜನೆ ಕುರಿತು ಯೋಜನಾ ಇಲಾಖೆಯ ಹಿರಿಯ ನಿರ್ದೇಶಕ ಬಸವರಾಜ, ವಿಕೇಂದ್ರಿಕೃತ ಯೋಜನೆ ಕುರಿತು ಡಾ.ಜಿ.ಎಸ್. ಗಣೇಶ ಪ್ರಸಾದ, ಸರ್ಕಾರಕ್ಕೆ ಸಂಬಂಧಿಸಿದ ಮೂಲಸೌಕರ್ಯ ಅಭಾವ ಕುರಿತು ಅಜೀಂ ಪ್ರೇಮಜಿ ಫೌಂಡೇಶನ್ ಸಂಸ್ಥೆಯ ಮೀರಜ್ ಅವರು ಪ್ರಾತ್ಯಕ್ಷಿಕೆ ಮೂಲಕ ವಿಷಯವನ್ನು ಮಂಡಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ. ಗಳಾದ ಭಂವರ್ ಸಿಂಗ್ ಮೀನಾ, ಡಾ. ಗಿರೀಶ ಡಿ. ಬದೋಲೆ, ಲವೀಶ್ ಒರಡಿಯಾ, ವರ್ನಿತ್ ನೇಗಿ, ಎಂ.ಡಿ.ಹ್ಯಾರಿಸ್ ಸುಮೈರ್ ಸೇರಿದಂತೆ ಏಳು ಜಿಲ್ಲೆಗಳ ಜಿಲ್ಲಾ ಪಂಚಾಯತ್ ಸಿ.ಪಿ.ಓ, ಕೃಷಿ, ತೋಟಗಾರಿಕೆ, ಪಶುಸಂಗೋಪನೆ, ಆರೋಗ್ಯ, ಪಂಚಾಯತ್ ರಾಜ್, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಕೌಶಲ್ಯಾಭಿವೃದ್ಧಿ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಡಿ.ಯು.ಡಿ.ಸಿ ಯೋಜನಾ ನಿರ್ದೇಶಕರು ಭಾಗವಹಿಸಿದ್ದರು.

# ಗ್ರಾಮಗಳ ಸಂಪರ್ಕ ಕಡಿತ

ರುದ್ನೂರು ಗ್ರಾಮದ ಸುತ್ತಮುತ್ತ ನೀರು ತುಂಬಿ ಹರಿಯುತ್ತಿರುವ ಕಾರಣ ರುದ್ನೂರು ಸಮೀಪದ ತೆ–ೞಂಟದಾರ್ಯ ಸಿದ್ದೇಶ್ವರ ಮಠದ ಸುತ್ತ ನೀರು ಆವರಿಸಿಕೊಂಡಿದೆ. ಇದರಿಂದಾಗಿ ಮಠಕ್ಕೆ ಹೋಗಿ ಬರುವ ಭಕ್ತಾದಿಗಳು ತೊಂದರೆ ಅನುಭವಿಸುವಂತಾಗಿದೆ.

ಈ ಮಧ್ಯೆ ಕಾಳಗಿ ತಾಲೂಕಿನಲ್ಲಿಯೂ ಸಹ ಕೆಲವು ಹಳ್ಳಗಳು ತುಂಬಿ ಹರಿಯುತ್ತಿರುವ ಹಿನ್ನೆಲೆಯಲ್ಲಿ ಗ್ರಾಮಗಳ ಮಧ್ಯದ ಸಂಪರ್ಕ ಕಡಿತಗೊಂಡಿದೆ. ಇದರಿಂದಾಗಿ ರೈತರು, ವಾಹನ ಸವಾರರು ಹಾಗೂ ಶಾಲಾ–ಕಾಲೇಜುಗಳಿಗೆ ಹೋಗಬೇಕಾದ ವಿದ್ಯಾರ್ಥಿಗಳು ತೊಂದರೆ ಅನುಭವಿಸುವಂತಾಗಿದೆ.

# ನೋಟಿಸ್ ಕೇಂದ್ರದ್ದಲ್ಲ: ಪ್ರಹ್ಲಾದ್ ಜೋಶಿ

ಆದರಂತೆ ಕರ್ನಾಟಕದಲ್ಲಿ ಸಣ್ಣಪುಟ್ಟ ವ್ಯಾಪಾರಿಗಳಿಗೆ ನೋಟಿಸ್ ನೀಡಿರುವುದು ರಾಜ್ಯ ಸರ್ಕಾರದ ವಾಣಿಜ್ಯ ತೆರಿಗೆ ಇಲಾಖೆ. ಇದರಲ್ಲಿ ಕೇಂದ್ರ ಸರ್ಕಾರದ ಯಾವುದೇ ಪಾತ್ರವಿಲ್ಲ ಎಂದು ಸ್ಪಷ್ಟನೆ ನೀಡಿದರು.

ಜಿಎಸ್‌ಟಿ ಕೌನ್ಸಿಲ್‌ನಲ್ಲಿ ಯಾವುದೇ ತೀರ್ಮಾನ ತಗೆದುಕೊಳ್ಳಲು ಮಹತ್ವದ ಪಾತ್ರ ವಹಿಸಿರುವುದು ರಾಜ್ಯ ಸರ್ಕಾರಗಳು. ಕೇಂದ್ರ ಸರ್ಕಾರಕ್ಕೆ ಕೇವಲ 3ನೇ ಒಂದು ಭಾಗ ಮಾತ್ರ ಅಧಿಕಾರವಿದೆ. ಉಳಿದ ಅಧಿಕಾರ ರಾಜ್ಯ ಸರ್ಕಾರದ ಕೈಯಲ್ಲಿದೆ. 3ನೇ ಎರಡು ಭಾಗದಷ್ಟು ಅಧಿಕಾರ ಹೊಂದಿರುವ ರಾಜ್ಯ ಸರ್ಕಾರಗಳ ನಿರ್ಣಯವೇ ಇದರಲ್ಲಿ ಅಂತಿಮವಾಗಿರಲಿದೆ ಎಂಬ ಮಾಹಿತಿ ಹಂಚಿಕೊಂಡರು.

ಯುಪಿಐ ಹದಗೆಡಿಸೋ ದುಸ್ಸಾಹಸ:

ರಾಜ್ಯದಲ್ಲಿ ಸಣ್ಣಪುಟ್ಟ ವ್ಯಾಪಾರಸ್ಥರಿಗೆ ಜಿಎಸ್‌ಟಿ ನೋಟಿಸ್ ನೀಡುವ ಮೂಲಕ ಡಿಜಿಟಲ್, ಯುಪಿಐ ವಹಿವಾಟು ಹದಗೆಡಿಸುವ ದುಸ್ಸಾಹಸಕ್ಕೆ ರಾಜ್ಯ ಕಾಂಗ್ರೆಸ್ ಸರ್ಕಾರ ಕೈ ಹಾಕಿದೆ ಎಂದು ಗಂಭೀರ ಆರೋಪ ಮಾಡಿದರು.

ಯುಪಿಐ ವಹಿವಾಟು ವಿಶ್ವಕ್ಕೇ ಮಾದರಿಯಾಗಿದೆ. ಆದರೆ, ರಾಜ್ಯದಲ್ಲಿ ಈ ಪಾರದರ್ಶಕ ವ್ಯವಸ್ಥೆಗೆ ಸಂಚಕಾರ ತರಲೆತ್ನಿಸುತ್ತಿದ್ದು, ರಾಜ್ಯ ಸರ್ಕಾರದ ಈ ಕ್ಷುಲ್ಲಕ ರಾಜಕಾರಣ ನಿಜಕ್ಕೂ ದುರಂತವೇ ಸರಿ ಎಂದು ತೀವ್ರವಾಗಿ ಖಂಡಿಸಿದರು.

# ಜಿಲ್ಲಾ ಬೆಳೆ ಸಮೀಕ್ಷೆದಾರರ ಸಂಘ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ
ಬೀದರ. ಜು. 22 : ಬೀದರ್ ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಮಂಗಳವಾರ ಬೆಳೆ ಸಮೀಕ್ಷೆದಾರರ ಸಂಘದ ಜಿಲ್ಲಾ ಘಟಕ ಉದ್ಘಾಟನೆ ಹಾಗೂ ಪದಾಧಿಕಾರಿಗಳ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮ ಜರುಗಿತು.

ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಸ್ವಾಮಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, 'ರೈತರಿಗೆ ಬೆಳೆ ವಿಮೆ ಸೇರಿದಂತೆ ಅನೇಕ ಸೌಲಭ್ಯಗಳು ದಕ್ಕಬೇಕಾದರೆ ಬೆಳೆ ಸಮೀಕ್ಷೆ ಕಾರ್ಯ ಪ್ರಮುಖ ಪಾತ್ರವಹಿಸುತ್ತದೆ. ಬಿಸಿಲು, ಮಳೆ ಎನ್ನದೆ ರೈತರ ಜಮೀನುಗಳಿಗೆ ತೆರಳಿ ಬೆಳೆ ಸಮೀಕ್ಷೆ ನಡೆಸುವ ಗಣತಿ–ದಾರರತುಂಬಾ ಮುಖ್ಯವಾಗಿದೆ. ಸರ್ಕಾರ, ಕೃಷಿ ಇಲಾಖೆ ಅವರ ಬೇಡಿಕೆಗಳಿಗೆ ಸ್ಪಂದಿಸಿ ವಿಶೇಷ ಸೌಲಭ್ಯ ಒದಗಿಸಬೇಕು' ಎಂದು ತಿಳಿಸಿದರು.

ಬೆಳೆ ಸಮೀಕ್ಷೆದಾರರು ಜಮೀನಿಗೆ ಬಂದು ಸಮೀಕ್ಷೆ ನಡೆಸುವ ವೇಳೆ ರೈತರು ಸಹಕರಿಸಬೇಕು. ರೈತರ ಬೆಳೆದ ಬೆಳೆಗೆ ಖರೀದಿ ನಿಗದಿಯಾಗುವುದು ಸಮೀಕ್ಷೆ ಆಧಾರದಲ್ಲಿ, ಹೀಗಾಗಿ ರೈತರ ಹಿತದೃಷ್ಟಿಯಿಂದ ನಿಖರವಾಗಿ ಸಮೀಕ್ಷೆ ನಡೆಸಿ ಮಾಹಿತಿ ನೀಡಬೇಕು' ಎಂದು ಸಲಹೆ ನೀಡಿದರು.

ಭಾಲ್ಕಿ ತಾಲೂಕು ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ ಬಿ.ಎಂ. ಮಾತನಾಡಿ, 'ಬೀದರ್ ಜಿಲ್ಲೆಯ ಬೆಳೆ ಸಮೀಕ್ಷೆದಾರರು ಅತ್ಯಂತ ಪ್ರಾಮಾಣಿಕತೆಯಿಂದ ಗಣತಿ ಕಾರ್ಯ ನಡೆಸುತ್ತಿದ್ದಾರೆ. ಕೃಷಿ ಇಲಾಖೆಯಿಂದ ಈಗಾಗಲೇ ಕೆಲವು ಬೇಡಿಕೆಗಳು ಈಡೇರಿಸಲಾಗಿದೆ. ಸಮೀಕ್ಷೆ ಕಾರ್ಯದೊಂದಿಗೆ ಕೃಷಿ ಇಲಾಖೆಯ ಯೋಜನೆಗಳ ಕುರಿತು ರೈತರಿಗೆ ಮಾಹಿತಿ ನೀಡುವ ಕೆಲಸ ಆಗಬೇಕಿದೆ' ಎಂದರು.

ಜಿಲ್ಲಾ ಬೆಳೆ ಸಮೀಕ್ಷೆದಾರರ ಸಂಘದ ಪ್ರಧಾನ ಕಾರ್ಯದರ್ಶಿ ಲೋಕೇಶ ಕಾಂಬಳೆ ಮಾತನಾಡಿ, 'ರೈತರ ಹಿತದೃಷ್ಟಿ,ಕಾಳಜಿಯಿಂದ ಅತ್ಯಂತ ಕಡಿಮೆ ಗೌರವಧನದಲ್ಲಿ ಸಮೀಕ್ಷೆ ಕಾರ್ಯ ನಡೆಸುತ್ತಿದ್ದೇವೆ. ಈ ಕಾರ್ಯದಿಂದ ನಮಗೆ ತೃಪ್ತಿಯಿದೆ. ಮುಂದಿನ ದಿನಗಳಲ್ಲಿ ಸಂಘಟನೆ ಬಲಪಡಿಸಿ ವಿವಿಧ ಬೇಡಿಕೆಗಳಿಗೆ ಹೋರಾಟ ರೂಪಿಸಲಾಗುವುದು' ಎಂದರು.

ರಾಜ್ಯ ಬೆಳೆ ಸಮೀಕ್ಷೆದಾರರ ಸಂಘದ ಸಂಸ್ಥಾಪಕ, ಪ್ರಧಾನ ಕಾರ್ಯದರ್ಶಿ ರಾಜು ಡಿಫರೆಂಟ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಘದ ಜಿಲ್ಲಾಧ್ಯಕ್ಷ ಮೋಹನ್ ಮಾನೆಗಾದಗಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು.

ಕರ್ನಾಟಕ ಬೆಳೆ ಸಮೀಕ್ಷೆದಾರರ ಸಂಘದ ಸಂಘಟನಾ ಕಾರ್ಯದರ್ಶಿ ಸುಂದರ್ ಹಲಗೆ, ರೈತ ಸಂಘದ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಶಾಂತಮ್ಮ ಮೂಲಗೆ, ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ವಿನಯ ಮಾಳಗೆ ರೈತ ಸಂಘದ ನಾಗಶೆಟ್ಟಿ ನಂಜವಾಡೆ, ವೀರಾರೆಡ್ಡಿ ಪಾಟೀಲ್, ಹೋರಾಟಗಾರ ಕೊಂಡಿಬಾರಾವ್ ಹಾಗೂ ಬೆಳೆ ಸಮೀಕ್ಷೆದಾರರ ಸಂಘದ ಭಾಲ್ಕಿ ತಾಲೂಕಾಧ್ಯಕ್ಷ ಏಕನಾಥ್ ಮೇತ್ರೆ, ಹುಮನಾಬಾದ್ ತಾಲೂಕಾಧ್ಯಕ್ಷ ಭೀಮಶಾ ಮೇಲಕೇಡಿ, ಬೀದರ್ ತಾಲೂಕಾಧ್ಯಕ್ಷ ಶಿವಕುಮಾರ್ ಶಿವಗೊಂಡ್, ಚಿಟಗುಪ್ಪಾ ತಾಲೂಕಾಧ್ಯಕ್ಷ ವಿನೋದ್ ಉಡಬಾಳ್, ಬಸವಕಲ್ಯಾಣ ತಾಲೂಕಾಧ್ಯಕ್ಷ ಶಂಕರಲಿಂಗ, ಹುಲಸೂರ ತಾಲೂಕಾಧ್ಯಕ್ಷ ಪರಮೇಶ್ವರ ಕಾದೆಪೂರ, ಔರಾದ್ ತಾಲೂಕಿನ ಜನಾರ್ಧನ ಸೇರಿದಂತೆ ಸಂಘದ ಪದಾಧಿಕಾರಿಗಳು, ಸದಸ್ಯರು, ರೈತ ಸಂಘದ ಮುಖಂಡರು ಪಾಲ್ಗೊಂಡಿದ್ದರು.

# ರಾಯಚೂರು ಜಿಲ್ಲಾ ಪೊಲೀಸ್ ಇಲಾಖೆಯಿಂದ ಮನೆಮನೆಗೆ ಪೋಲಿಸ್ ಕಾರ್ಯಕ್ರಮಕ್ಕೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ
ರಾಯಚೂರು ಜು 22: ಪೊಲೀಸ್ ವ್ಯವಸ್ಥೆಯನ್ನು ಸಾರ್ವಜನಿಕ ಸ್ನೇಹಿಯನ್ನಾಗಿಸುವ ದಿಸೆಯಲ್ಲಿ ಮನೆ ಮನೆಗೆ ಪೊಲೀಸರು ಎಂಬ ವಿನೂತನ ಪರಿಕಲ್ಪನೆಯ ಮಹತ್ವದ ಕಾರ್ಯಕ್ರಮಕ್ಕೆ ರಾಯಚೂರ ಜಿಲ್ಲಾ ಪೊಲೀಸ್ ಇಲಾಖೆಯಿಂದ ಜುಲೈ 22ರಂದು ಚಾಲನೆ ಸಿಕ್ಕಿತು.

ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರ್ ಸ್ವಾಮಿ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ವೇಳೆ ಅವರು ಮಾತನಾಡಿ, ಪೊಲೀಸರನ್ನು ಸಮಾಜದ ಭದ್ರತಾ ಪ್ರತಿನಿಧಿಗಳೆಂದು, ನಾಗರೀಕರ ಮೂಲಭೂತ ಹಕ್ಕುಗಳ ರಕ್ಷಕರೆಂದು ಸಂಬೋಧಿಸಲಾಗುತ್ತದೆ. ಸಮಾಜದ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡುವುದು, ಅಪರಾಧಗಳ ತಡೆ ಹಾಗೂ ಪತ್ತೆ, ಸಮಾಜದಲ್ಲಿ ನಿರ್ಭಯ ವಾತಾವರಣವನ್ನು ಸೃಜಿಸುವ ಜೊತೆಗೆ ರಕ್ಷಣೆ ಮತ್ತು ಸುರಕ್ಷತೆ ಒದಗಿಸುವ ಕರ್ತವ್ಯ ಮತ್ತು ಗುರುತರ ಜವಾಬ್ದಾರಿಗಳು ಪೊಲೀಸ್ ಇಲಾಖೆಯ ಮೇಲಿವೆ ಎಂದರು.

ಪೊಲೀಸ್ ವ್ಯವಸ್ಥೆಯು ಸಮಾಜಸ್ನೇಹಿಯಾಗಿಸಿಕೊಳ್ಳುವುದರಿಂದ ಪೊಲೀಸ್ ಮೂಲಭೂತ ಕರ್ತವ್ಯದ ಪರಿಣಾಮಕತೆಯನ್ನು ಹೆಚ್ಚಿಸಿಕೊಳ್ಳಬಹುದಾಗಿದೆ. ಪೊಲೀಸ್ ಸೇವೆಗಳ ಪ್ರತಿಯೊಂದು ಸ್ಥರದಲ್ಲೂ, ಸಾರ್ವಜನಿಕರ ಬೆಂಬಲ ಮತ್ತು ಸಹಭಾಗಿತ್ವವನ್ನು ಸಾಧಿಸಿಕೊಳ್ಳುವುದರಿಂದ ಮಾತ್ರವೇ ಸಾರ್ವಜನಿಕರಿಗೆ ಉತ್ಕೃಷ್ಟ ಸೇವೆಯನ್ನು ಒದಗಿಸಲು ಸಾಧ್ಯ. ಪೊಲೀಸರು ಸಮಾಜದ ಸೇವಕರು ಎಂಬುದನ್ನು ಎಂದಿಗೂ ಮರೆಯಕೂಡದು. ಜನರಿಗೆ ಅತ್ಯುತ್ತಮ ಸೇವೆ ಒದಗಿಸುವುದೇ ನಮ್ಮ ಗುರಿ ಮತ್ತು ಮೂಲ ಧ್ಯೆಯ ಎಂಬುದನ್ನು ಸದಾ ನೆನಪಿನಲ್ಲಿಡಬೇಕು ಎಂದರು.

ಸಾರ್ವಜನಿಕ ಹಿತರಕ್ಷಣೆಗೆ ಪೊಲೀಸ್ ಇಲಾಖೆಯು ತುಂಬಾ ನಿಗಾವಹಿಸುತ್ತಿದೆ ಎಂದು ತಿಳಿಸಿದ ಅವರು, ಜನರು ಒಂದು ಮೊಬೈಲ್ ಫೋನ್ ಸಲುವಾಗಿ ಎಷ್ಟೆಲ್ಲಾ ಹಣ ಖರ್ಚು ಮಾಡುತ್ತಾರೆ. ಆದರೆ, ತಮ್ಮ ಹಿತರಕ್ಷಣೆ ಮಾಡುವ ಹೆಲ್ಮೆಟ್‌ಗೋಸ್ಕರ ಯಾಕೆ ಹಣವನ್ನು ಖರ್ಚು ಮಾಡುವುದಿಲ್ಲ ಎಂದು ನೆರದಿದ್ದ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಪ್ರಶ್ನಿಸಿ ಹೇಲ್ಮೇಟನ ಮಹತ್ವ ತಿಳಿಸಿದರು.

ಪೊಲೀಸ್ ವ್ಯವಸ್ಥೆಯನ್ನು ಸಾರ್ವಜನಿಕಸ್ನೇಹಿಯಾಗಿಸಬೇಕು ಎನ್ನುವ ಉದ್ದೇಶದೊಂದಿಗೆ ಮನೆ–ಮನೆಗೆ ಪೊಲೀಸ್ ಪರಿಕಲ್ಪನೆಯಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯು ಕರ್ತವ್ಯ ನಿರ್ವಹಿಸುವುದು ಅವಶ್ಯಕತೆ ಇರುತ್ತದೆ ಎಂದು ಹೇಳಿದರು.

ಪ್ರತಿಯೊಂದು ಮನೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಸಾರ್ವಜನಿಕರಿಗೆ ಪೊಲೀಸ್ ಠಾಣೆಯ ದೂರವಾಣಿ ಸಂ–ಖ್ಯೆ ಪೊಲೀಸ್ ಅಧಿಕಾರಿಗಳ ದೂರವಾಣಿ ಸಂಖ್ಯೆ, ನಿಯಂತ್ರಣ ಕೋಣೆ–112 ಸಂಖ್ಯೆ ಹಿರಿಯ ಅಧಿಕಾರಿಗಳ ದೂರವಾಣಿ ಸಂಖ್ಯೆಗಳನ್ನು ಹಂಚಿಕೊಳ್ಳುವುದು ಹಾಗೂ ಎಂತಹದ್ದೇ ಪರಿಸ್ಥಿತಿಯಲ್ಲಿ ಪೊಲೀಸ್ ಇಲಾಖೆಗೆ ಕರೆ ಮಾಡುವಂತೆ ಉತ್ತೇಜಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

ಈ ವೇಳೆ ಅತಿಥಿಗಳಾಗಿ ರಾಯಚೂರು ಡಿವೈಎಸ್ಪಿ ಶಾಂತವೀರ ಅವರು ಮಾತನಾಡಿ, ಪೊಲೀಸ್ ಇಲಾಖೆಯು ಸಾರ್ವಜನಿಕರ ಹಿತಕ್ಕಾಗಿ ಹಲವಾರು ಎಚ್ಚರಿ–ಕೆಯ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ಸಾರ್ವಜನಿಕರ ಹಿತರಕ್ಷಣೆಯಿಂದ ಸಾರ್ವಜನಿಕರು ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ಯಾವುದೇ ಘಟನೆಯ ಕುರಿತು ದೂರು ನೀಡಿದಲ್ಲಿ ಅವರ ಹೆಸರು ಮತ್ತು ಅವರ ವಿವರಗಳನ್ನು ಯಾರಿಗೂ ಹೇಳದಂತೆ ರಕ್ಷಣೆ ನೀಡುತ್ತೇವೆ. ಮತ್ತು ಅಂತಹ ವ್ಯಕ್ತಿಗಳಿಗೆ ಬಹುಮಾನಗಳನ್ನು ಸಹ ವಿತರಿಸಲಾಗುವುದು ಎಂದು ಹೇಳಿದರು.

ವಿವಿಧಬಹುಮಾನಗಳು: ವಿವಿಧ ಘಟನೆಗಳ ಕುರಿತು ಪೊಲೀಸ್ ಇಲಾಖೆಗೆ ಸಾರ್ವಜನಿಕರು ಮಾಹಿತಿ ನೀಡಿದಲ್ಲಿ ಅತ್ಯುತ್ತಮ ಪೊಲೀಸ್ ಇಲಾಖೆಯ ಸಲಹೆಗಾರ ಹಾಗೂ ಅತ್ಯುತ್ತಮ ಪೊಲೀಸ್ ಇಲಾಖೆಯ ಸ್ನೇಹಿತ ಎನ್ನುವ ಬಹುಮಾನಗಳನ್ನು ನೀಡುವುದಾಗಿ ರಾಯಚೂರು ಡಿವೈಎಸ್ಪಿ ಶಾಂತವೀರ ಅವರು ಪ್ರಕಟಿಸಿದರು. ಇದೇ ಸಂದರ್ಭದಲ್ಲಿ ಸಿಪಿಐಗಳಾದ ನಾಗರಾಜ, ನಿಂಗಪ್ಪ, ಟ್ರಾಫಿಕ್ ಪೊಲೀಸ್ ಇಲಾಖೆಯ ಪಿಎಸ್ಐ ಸಣ್ಣ ಈರೇಶ್ ಸೇರಿದಂತೆ ಪೊಲೀಸ್ ಇಲಾಖೆಯ ಸಿಬ್ಬಂದಿ ಹಾಗೂ ವಿವಿಧ ಕಾಲೇಜು ವಿದ್ಯಾರ್ಥಿಗಳು ಹಾಗೂ ಆಟೋ ಚಾಲಕರು ಇದ್ದರು.

# ಮೊಬೈಲ್ ಕ್ಯಾಂಟಿನ ತೆರೆಯಲು ಪ್ರವಾಸೋದ್ಯಮ ಇಲಾಖೆಯಿಂದ ಸಹಾಯಧನ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ
ಬೀದರ.ಜು.22:ಪ್ರವಾಸೋದ್ಯಮ ಇಲಾಖೆ ವತಿಯಿಂದ 2024–25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ಯಮಿದಾರರನ್ನು (Entrepreneurship) ಉತ್ತೇಜಿಸಲು ಒಂದು ತಿಂಗಳ ಉದ್ಯಮಶೀಲತೆ ತರಬೇತಿ ಹಾಗೂ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟಿನ್ ನಡೆಸಲು 5 ಲಕ್ಷವರೆಗೆ ಸಹಾಯಧನ ನೀಡಲು ಉದ್ದೇಶಿಸಲಾಗಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಈದರ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೀದರ ಜಿಲ್ಲೆಗೆ ಪರಿಶಿಷ್ಟ ಜಾತಿಗೆ 06 ಅಭ್ಯರ್ಥಿಗಳ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 04 ಅಭ್ಯರ್ಥಿಗಳ ಗುರಿಯನ್ನು ನೀಡಲಾಗಿರುತ್ತದೆ. ಪರಿಶಿಷ್ಟ ಜಾತಿಗೆ 03 ಮತ್ತು ಪರಿಶಿಷ್ಟ ಪಂಗಡದ 03 ಅಭ್ಯರ್ಥಿಗಳ ಗುರಿಯನ್ನು ಸಾಧಿಸಲಾಗಿರುತ್ತದೆ.

ಪ್ರಯುಕ್ತ ಬೀದರ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿಗೆ 03 ಮತ್ತು ಪರಿಶಿಷ್ಟಪಂಗಡಕ್ಕೆ 01 ಗುರಿಗಳು ಬಾಕಿ ಉಳಿದಿರುತ್ತವೆ. ವಿದ್ಯಾರ್ಹತೆ ಎ???ಎಸ್.ಎಲ್.ಸಿ. ಉತ್ತೀರ್ಣರಾಗಿರಬೇಕು.

ನಿಗಧಿಪಡಿಸಿದ ಅರ್ಜಿಗನ್ನು ಪ್ರವಾಸೋದ್ಯಮ ಇಲಾಖೆಯ ಕಚೇರಿಯಲ್ಲಿ

ಪಡೆದುಕೊಂಡು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ದ್ವಿ ಪ್ರತಿಯಲ್ಲಿ ಎಲ್ಲಾ ಅಗತ್ಯ ಪ್ರಮಾಣ ಪತ್ರಗಳ ಸ್ವಯಂ ದೃಢೀಕೃತ ಪತ್ರಗಳೊಂದಿಗೆ 2025ನೇ ಜುಲೈ.30 ರ ಸಂಜೆ 5 ಗಂಟೆಯೊಳಗೆ ಸಹಾಯಕ ನಿರ್ದೇಸಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಕನ್ನಡ ಭವನ ಚಿಕ್ಕಪೇಟ ಬೀದರಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಪ್ರವಾಸೋದ್ಯಮ ಇಲಾಖೆ ಬೀದರಗೆ ಸಂಪರ್ಕಿಸಬೇಕೆಂದು ಅವರು ತಿಳಿಸಿದ್ದಾರೆ.

# ರೋಟರಿ ಇಂಡಿಯಾ ವತಿಯಿಂದ ಗರ್ಭಕೋಶ ಹಾಗೂ ಸ್ಥನ ಕ್ಯಾನ್ಸರ್‌ಗೆ ಉಚಿತ ಚಿಕಿತ್ಸೆ ಮತ್ತು ವಿದ್ಯಾರ್ಥಿಗಆಗೆ 10 ಲಕ್ಷ ಕಂಪ್ಯೂಟರ್ ವಿತರಿಸುವ ಗುರಿ: ಡಾ. ತ್ರಿವಿಕ್ರಮ್ ಜೋಶಿ




ಬೀದರ.ಜು.22: ರೋಟರಿ ಇಂಡಿಯಾ ವತಿಯಿಂದ ದೇಶ್ಯಾದ್ಯಂತ ಗರ್ಭಕೋಶ ಹಾಗೂ ಸ್ಥನ ಕ್ಯಾನ್ಸರ್ ನಿಂದ ಬಳಲುತ್ತಿರುವ ಮಹಿಳೆಯರ ಉಚಿತ ಚಿಕಿತ್ಸೆ ಮತ್ತು ಪ್ರತಿರಕ್ಷಣೆ ಕುರಿತು ಉಚಿತ ಚುಚ್ಚುಮದ್ದು ಮತ್ತು ವಿದ್ಯಾರ್ಥಿಗಳಿಗೆ 10 ಲಕ್ಷ ಉಚಿತ ಕಂಪ್ಯೂಟರ್ ನೀಡುವ ಮಹತ್ವದ ಯೋಜನೆಗೆ ದೇಶದ ನೆಚ್ಚಿನ ಪ್ರಧಾನಿ ಶ್ರೀ ನರೇಂದ್ರ ಮೋದಿ ಅವರು ನವೆಂಬರನಲ್ಲಿ ಚಾಲನೆ ನೀಡಲಿದ್ದಾರೆ ಎಂದು 3160 ಆರ್ ಐ ಡಿಸ್ಟ್ರಿಕ್ಟ್ ನ ಡಿಜಿಎನ್ ರೋ. ಡಾ. ತ್ರಿವಿಕ್ರಮ್ ಜೋಶಿ ರಾಯಚೂರು ಅವರು ರೋಟರಿ ಕ್ಲಬ್ ಬೀದರ ವತಿಯಿಂದ ಸರಕಾರಿ ಆಸ್ಪತ್ರೆಯಲ್ಲಿ ( ಬ್ರಿಮ್ಸ್ ) ಸ್ಥಾಪಿಸಿರುವ ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟಿಸಿ ಮಾತನಾಡಿದರು

ಸಮಾರಂಭದ ಮುಖ್ಯ ಅತಿಥಿಗಳಾಗಿ ಬ್ರಿಮ್ಸ್ ನ ನಿರ್ದೇಶಕರಾದ ಡಾ ಶಿವಕುಮಾರ ಶಟಕಾರ ಅವರು ಮಾತನಾಡಿ ದಿನಾಲೂ ಸಾಕಷ್ಟು ಜನ ರೋಗಿಗಳು ಮತ್ತು ಸಾವಿರಾರು ಸಂಖ್ಯೆಯಲ್ಲಿ ಬರುವ ಅವರ ಸಂಭಂಧಿಕರಿಗಾಗಿ ರೋಟರಿ ಕ್ಲಬ್ ಸಂಸ್ಥೆ ಅವರು ಈ ಹಿಂದೆಯೂ ಕೂಡ ಕೋವಿಡ್ ಸಂಧರ್ಭದಲ್ಲಿ ಒಂದು ನೀರಿನ ಘಟಕ ಸ್ಥಾಪಿಸಿದ್ದು ಮತ್ತೆ ನೀರಿನ ಅವಶ್ಯಕತೆಗಳನ್ನು ಗಮನಿಸಿ ಇನ್ನೊಂದು ಘಟಕ ಸ್ಥಾಪಿಸಿದ್ದು ಮಾನವೀಯ ಕಾರ್ಯವಾಗಿದೆ ಎಂದು ನುಡಿದರು

ಬ್ರಿಮ್ಸ್ ನ ಮುಖ್ಯ ಆಡಳಿತಾಧಿಕಾರಿಗಳಾದ ಕು ಸುರೇಖಾ ಅವರು ಮಾತನಾಡಿ ರೋಟರಿ ಕ್ಲಬ್ ನವರು ಸುಮಾರು ಐದು ದಶಕಗಳಿಂದ ಸ ಮಾ ಜ ಮು ಖಿ ಯಾ ಗಿ ಕಾರ್ಯನಿರ್ವಹಿಸುತಿದ್ದು ಅದರಲ್ಲಿ ವಿಶೇಷವಾಗಿ ಸೋಮಶೇಖರ ಪಾಟೀಲ ಅವರ ಕಳೆದ ವರ್ಷದ ಅವಧಿಯಲ್ಲಿ ಅನೇಕ ಸಾಂಧರ್ಭಿಕ ದಿನಾಚರಣೆಗಳ ಜೊತೆಗೆ ಉಚಿತ ಆರೋಗ್ಯ ಶಿಬಿರ , ಪರಿಸರ ಸಂರಕ್ಷಣೆ , ಮಹಿಳಾ ಸಬಲಿಕರಣ , ವಿದ್ಯಾರ್ಥಿಗಳಿಗಾಗಿ ಉಚಿತ ಸೈಕಲ್ ವಿತರಣೆ ಹಾಗೂ ಸ್ಪರ್ಧೆ ,ಶಾಲಾ ಮಕ್ಕಳಿಗೆ ಬಟ್ಟೆ ಪುಸ್ತಕ ಕಂಪ್ಯೂಟರ್ ವಿತರಣೆ, ಶೌಚಾಲಯ ನಿರ್ಮಾಣ ಸೇರಿದಂತೆ ಜನಮುಖಿಯಾಗಿ ಹಲವಾರು ಕಾರ್ಯಮಾಡುತ್ತಿರುವುದು ಸಂತಸ ತಂದಿದೆ ಈ ಕಾರ್ಯ ಹೀಗೆ ಮುಂದುವರೆಯಲಿ ಎಂದು ಶುಭ ಹಾರೈಸಿದರು.

ರೋಟರಿ ಕ್ಲಬ್ ನ ನಿಕಟಪೂರ್ವ ಅಧ್ಯಕ್ಷರಾದ ಸೋಮಶೇಖರ ಪಾಟೀಲ ಅವರು ಮಾತನಾಡಿ ನನ್ನ ಒಂದು ವರ್ಷದ ಅವಧಿಯಲ್ಲಿ ದಾನಿಗಳ ಮತ್ತು ಕ್ಲಬ್ ಪದಾಧಿಕಾರಿಗಳ ಸಹಕಾರದಿಂದ ಅನೇಕ ಕಾರ್ಯಗಳು ಮಾಡಿದ್ದು ಸಂತೃಪ್ತಿ ತಂದಿದೆ ಅವುಗಳಲ್ಲಿ ವಿಶೇಷವಾಗಿ ನೀರಿನ ಮಹತ್ವ ಮತ್ತು ಅದರ ಅಗತ್ಯತೆಗಳನ್ನು ಮನಗಂಡು ಬೀದರಿನ ನಾನಾಕಡೆ ಬ್ರಿಮ್ಸ್, ಬರಿದಶಾಹಿ ಗಾರ್ಡನ್ , ಬಸವ ಮಂಟಪ, ಕನ್ನಡ ಭವನ ಮುಂತಾದ ಕಡೆಗಳಲ್ಲಿ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ಎಂದು ನುಡಿದರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ರೋಟರಿ ಕಲ್ಯಾಣ ಝೋನ್ ಸಹಾಯಕ ಗವರ್ನರ್ ಹಾವಶೆಟ್ಟಿ ಪಾಟೀಲ ಅವರು ಮಾತನಾಡಿ ಬರುವ ದಿನಗಳಲ್ಲಿ ಅನೇಕ ವಿನೂತನ ಕಾರ್ಯಕ್ರಮಗಳನ್ನು ಮತ್ತು ಹೊಸ ಹೊಸ ಯೋಜನೆಗಳನ್ನು ಹಮ್ಮಿಕೊಂಡಿದ್ದು ಅವುಗಳನ್ನು ಕಾರ್ಯರೂಪಕ್ಕೆ ತರಲಾಗುವುದು ಎಂದು ತಿಳಿಸಿದರು

ನೀರಿನ ಘಟಕಕ್ಕೆ ಸಂಪೂರ್ಣ ದಾಸೋಹ ನೀಡಿದ ಉದ್ಯಮಿ ಶಿವಾನಂದ ಕೆ ಪಾಟೀಲ ಮತ್ತು ಜಗದೀಶ್ ಖೂಬಾ ಅವರನ್ನು ಗೌರವಿಸಲಾಯಿತು ರೋಟರಿ ಕ್ಲಬ್ ನ ಅಧ್ಯಕ್ಷರಾದ ಬಸವಕುಮಾರ ಪಾಟೀಲ ಅವರು ಸ್ವಾಗತಿಸಿದರು ಡಾ ಸುರೇಶ ಪಾಟೀಲ ನಿರೂಪಿಸಿದರೆ ಕಾರ್ಯದರ್ಶಿ ಅನೀಲಕುಮಾರ ಬಿರಾದಾರ ವಂದಿಸಿದರು ಕಾರ್ಯಕ್ರಮದಲ್ಲಿ ಅನೇಕ ವೈದ್ಯರು ಬ್ರಿಮ್ಸ್ ನ ಸಿಬ್ಬಂದಿಗಳು ಮತ್ತು ರೋಟರಿ ಕ್ಲಬ್ ನ ಪದಾಧಿಕಾರಿಗಳು ಭಾಗವಹಿಸಿದರು .

## ನಕಲಿ ಪತ್ರಕರ್ತರ ಹಾವಳಿ ತಡೆಯಬೇಕು, ಎದೆಗಾರಿಕೆಯಿಂದ ವರದಿ ಮಾಡಿ – ಶಿವಾನಂದ ತಗಡೂರು



(ವರದಿ. ಡಿ. ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಜು 22 ಹೆಚ್ಚುತ್ತಿರುವ ನಕಲಿ ಪತ್ರಕರ್ತರ ಹಾವಳಿಯ ನಡುವೆ ನೈಜ ಪತ್ರಕರ್ತರು, ನೈಜ ಪತ್ರಿಕೋದ್ಯಮ ಉಳಿಸಿಕೊಂಡು ಹೋಗುವ ಸಂದರ್ಭ ಎದುರಾಗಿದೆ, ಪತ್ರಕರ್ತರು ನಿಜವಾಗಿಯೂ ಸುಳ್ಳು ಸುದ್ದಿಗಳಿಗೆ ಅವಕಾಶ ನೀಡದೆ. ಧೈರ್ಯದಿಂದ ಎದೆಗಾರಿಕೆಯಿಂದ ಸಾರ್ವಜನಿಕರು ಸಮಸ್ಯೆಯನ್ನು ನಮ್ಮ ಹತ್ತಿರ ತೆಗೆದುಕೊಂಡು ಬಂದಾಗ ನಾವು ನಿಜವಾಗಿಯೂ ಅವರಿಗೆ ನ್ಯಾಯ ಒದಗಿಸಿಕೊಡಬೇಕು ಅಂದಾಗ ಮಾತ್ರ ಮಾಧ್ಯಮದ ಘನತೆ ಗೌರವ ಹೆಚ್ಚುತ್ತದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹೇಳಿದರು.

ನಗರದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕಾ ಘಟಕದಿಂದ ತ್ರಿಪುರಾಂತ ಯಾತ್ರಿ ನಿವಾಸದಲ್ಲಿ ಅಯೋಜಿಸಲಾಗಿದ್ದ ಪತ್ರಿಕಾ ದಿನಾಚರಣೆ ಮತ್ತು ಶಂಕರಪ್ರಸಾದ ದುಬೆ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಾನು ಪತ್ರಕರ್ತ ಎಂದು ಹೇಳಿಕೊಂಡು ಬರುವವರ ಸಂಖ್ಯೆ ಹೆಚ್ಚಾಗುತ್ತಿದೆ. ಅಸಲಿ ಪತ್ರಕರ್ತರಿಗಿಂತ ನಕಲಿ ಪತ್ರಕರ್ತರ ಸಂಖ್ಯೆ ಜಾಸ್ತಿ ಆಗಿದೆ. ಬ್ಲಾಕ್ ಮೇಲ್ ಪತ್ರಕರ್ತರ, ವಿಜಿಟಿಂಗ್ ಕಾರ್ಡ್ ಹಿಡಿದು ಬರುವ ನಕಲಿ ಪತ್ರಕರ್ತರ ಹಾವಳಿ ಹೆಚ್ಚಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಮಾದ್ಯಮದಲ್ಲಿ ಕೆಲಸ ಮಾಡುವರ ಜವಾಬ್ದಾರಿ ಮಹತ್ವದ್ದಾಗಿದೆ. ವೃತ್ತಿಗೆ ಬದ್ಧತೆಯಿಂದ ಪ್ರಾಮಾಣಿಕವಾಗಿ ಕೆಲಸ ಮಾಡುವ ಪತ್ರರ್ತರ ಸಂಖ್ಯೆಯಲ್ಲಿ ಹೆಚ್ಚಾಗಬೇಕಿದೆ. ಸಮಾಜ ನಮ್ಮನ್ನು ಗಮನಿಸುತ್ತಿದೆ ಎನ್ನುವ ಎಚ್ಚರಿಕೆಯಿಂದ ಸದಾ ಕಾರ್ಯನಿರ್ವಹಿಸಸಬೇಕಿದೆ. ವೃತ್ತಿಗೆ ಕಳಂಕ ಬಾರದ ರೀತಿಯಲ್ಲಿ ನಡೆದುಕೊಳ್ಳಬೇಕಿದೆ. ಕಾರ್ಯ ನಿರತರಿಗೆ ಮಾತ್ರ ನಮ್ಮ ಸಂಘಟನೆ ಇದೆಯೇ ಹೊರತು ಮರೆತವರಿಗಲ್ಲ ಎಂದರು.

ಸಮಾಜದ ಬದ್ಧತೆಗಾಗಿ ಈ ವೃತ್ತಿಗೆ ಬಂದಿದ್ದೇವೆ. ಈ ವೃತ್ತಿಗೆ ಬಂದ ಮೇಲೆ ಏನು ಮಾಡುತ್ತಿದ್ದೇವೆ ಎನ್ನುವದು ಮುಖ್ಯವಾಗುತ್ತದೆ. ನಡೆ–ನುಡಿ ಮುಖ್ಯವಾಗುತ್ತದೆ. ಸತ್ಯದ ಕಡೆಗೆ ಶೋಧನೆ ಪತ್ರಕರ್ತರ ನೈಜ ಜವಾಬ್ದಾರಿ. ಅನ್ಯಾಯವಾದಾಗ ಜನ ಪತ್ರಕರ್ತರ ಬಳಿಗೆ ಬರುತ್ತಾರೆ. ಕಷ್ಟದಲ್ಲಿರುವವರ ಧ್ವನಿಯಾಗಿ ಅವರು ಕಣ್ಣೀರು ಒರೆಸುವವರೇ ನಿಜವಾದ ಪತ್ರಕರ್ತರು. ಜನಮುಖಿ ಪತ್ರಿಕೋದ್ಯಮದಲ್ಲಿ ಸಾರ್ಥಕತೆ ಅಡಗಿದೆ ಎಂದರು.

ಪ್ರಶಸ್ತಿ ಪ್ರದಾನ ಶಾಸಕರಾದ ಶರಣು ಸಲಗರ ಮಾಡಿ ಮಾತನಾಡಿ, ಪತ್ರಿಕೋದ್ಯಮದ ಮೆರಗು ಹೆಚ್ಚಿಸುವ ಕೆಲಸ ಪತ್ರಕರ್ತರಿಂದ ಆಗಬೇಕು. ಸಮಾಜದ ಓರೆ ಕೊರೆಗಳನ್ನು, ಅಂಕು–ಡೊಂಕುಗಳನ್ನು ತಿದ್ದುವ ಕೆಲಸ ಆಗಬೇಕು. ಪತ್ರಿಕಾ ಭವನ ಸೇರಿ ಅಗತ್ಯವಿರುವ ಕೆಲಸವನ್ನು ಮಾಡಲು ಪ್ರಯತ್ನಿಸುತ್ತೇನೆ ಎಂದು ಭರವಸೆ ನೀಡಿದರು.

ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ಅಧ್ಯಕ್ಷರಾದ ಬಿ.ವಿ.ಮಲ್ಲಿಕಾರ್ಜುನಯ್ಯ ಮಾತನಾಡಿ, ವರ್ಷದಲ್ಲಿ ನಾವು ಮಾಡಿದ ಕೆಲಸದ ಬಗ್ಗೆ ಆತ್ಮಾವಲೋಕನ ಮಾಡಿಕೊಂಡು ತಪ್ಪುಗಳನ್ನು ತಿದ್ದಿಕೊಳ್ಳುವದೇ ಪತ್ರಿಕಾ ದರ್ಮ. ಇದು ಪತ್ರಿಕಾ ದಿನ ಆಚರಣೆಯ ಉದ್ದೇಶವೂ ಆಗಿದೆ. ನಿಷ್ಪಕ್ಷಪಾತವಾಗಿ ಪ್ರಮಾಣಿಕವಾಗಿ ಕೆಲಸ ಮಾಡಲು ಮುಂದಾಗಬೇಕು ಎಂದರು.

ಜಿಲ್ಲಾ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಮಾತನಾಡಿ, ಕೋವಿಡ್ ಕಾಲದಲ್ಲಿ ಪ್ರಾಣ ಕಳೆದುಕೊಂಡ 52 ಜನ ಪತ್ರಕರ್ತರ ಕುಟುಂಬಕ್ಕೆ ಸಿಎಂ ಪರಿಹಾರ ನಿಧಿಯಿಂದ ತಲಾ 5 ಲಕ್ಷ ಪರಿಹಾರ, ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ಇತರ ಸೌಲಭ್ಯವನ್ನು ಕೊಡಿಸುವಲ್ಲಿಯಶಸ್ವಿಯಾದ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಅವರಿಗೆ ಅಭಿನಂದಿಸುವದದಾಗಿ ತಿಳಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ, ನಗರಸಭೆ ಅಧ್ಯಕ್ಷ ಎಂಡಿ ಸಗೀರೋದ್ದಿನ್, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಭವಾನಿಸಿಂಗ್ ಠಾಕೂರ, ಜಿಲ್ಲಾಧ್ಯಕ್ಷ ಡಿ.ಕೆ.ಗಣಪತಿ, ರಾಜ್ಯ ಪ್ರತಿನಿಧಿ ಬಸವರಾಜ ಕಾಮಶೆಟ್ಟಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷರಾದ ದಿಲೀಪಕುಮಾರ ಉತ್ತಮ, ನಿವೃತ್ತ ಅಭಿಯಂತರ ಚಂದ್ರಶೇಖರ್ ದುಬೆ ಸೇರಿದಂತೆ ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿದ ಸಂಘದ ತಾಲೂಕು ಅಧ್ಯಕ್ಷರಾದ ಮಾರ್ಥಂಡ್ ಜೋಶಿ ಪ್ರಾಸ್ತಾವಿಕ ಮಾತನಾಡಿದರೆ. ಪ್ರಧಾನ ಕಾರ್ಯದರ್ಶಿ ಉದಯಕುಮಾರ ಮುಳೆ ಸ್ವಾಗತಿಸಿದರು. ಉಪಾಧ್ಯಕ್ಷರಾದ ಡಿ.ಕೆ.ಪ್ರಹ್ಲಾದ ವಂದಿಸಿದರು. ಪತ್ರಕರ್ತ ದೀಪಕ ಠಮಕೆ ನಿರೂಪಿದರು.

ಇದೆ ಸಂದರ್ಭದಲ್ಲಿ ಕಲಬುರಗಿಯ ಹಿರಿಯ ಪತ್ರಕರ್ತ ಚಂದ್ರಕಾಂತ ಹುಣಸಗಿ ಅವರಿಗೆ ನೀಡಲಾಗುವ ಶಂಕರಪ್ರಸಾದ ದುಬೆ ವಿಭಾಗ ಮಟ್ಟದ ಪ್ರಶಸ್ತಿಯನ್ನು ಪ್ರಧಾನ ಮಾಡಿ ಗೌರವಿಸಲಾಯಿತು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರತಿಭಾ ಪುರಸ್ಕಾರ ಪಡೆದ ಪ್ರತಿಭಾನ್ವಿತ ವಿದ್ಯಾರ್ಥಿನಿ ಕೃತಿ ಕಲ್ಯಾಣರಾವ ಮದರಗಾಂವಕರ್ ಅವರಿಗೆ ವಿಶೇಷ ಸನ್ಮಾನ ಮಾಡಲಾಯಿತು.

## ಶಂಕರಪ್ರಸಾದ ದುಬೆ ಪ್ರಶಸ್ತಿ ಪ್ರದಾನ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ಪತ್ರಿಕಾ ರಂಗದಲ್ಲಿ ಅಪರೂಪದ ಸೇವೆ ಸಲ್ಲಿಸಿ, ಜಿಲ್ಲೆಯ ಪ್ರಗತಿಯಲ್ಲಿ ಅನನ್ಯ ಕೊಡುಗೆ ನೀಡಿದ ಸ್ವ. ಶಂಕರಪ್ರಸಾದ ದುಬೆ ಅವರ ಸ್ಮರಣಾರ್ಥ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ(ರಿ) ತಾಲೂಕು ಘಟಕ ಬಸವಕಲ್ಯಾಣದಿಂದ ನೀಡಲಾಗುವ ಶಂಕರಪ್ರಸಾದ ದುಬೆ ವಿಭಾಗ ಮಟ್ಟದ ಪ್ರಶಸ್ತಿಯನ್ನು ಕಲಬುರಗಿಯ ಹಿರಿಯ ಪತ್ರಕರ್ತ ಚಂದ್ರಕಾಂತ ಹುಣಸಗಿ ಅವರಿಗೆ ಪ್ರಧಾನ ಮಾಡಿ ಗೌರವಿಸಲಾಯಿತು.

## ದೀನ್ ದಯಾಳ ಉಪಾಧ್ಯಾಯ ವಸತಿ ನಿಲಯ ಸಮುಚ್ಛಯ ಕಾಮಗಾರಿ ಪರಿಶೀಲಿಸಿದ ಡಿ.ಸಿ.: ಒಂದು ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.22–ಗುಲಬರ್ಗಾ ವಿಶ್ವವಿದ್ಯಾಲಯದ ಅವರಣದಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ತಂಗಲು ಬಾಲಕ–ಬಾಲಕೀಯರಿಗೆ ತಲಾ 500 ಸಂಖ್ಯೆ ಸಾಮರ್ಥ್ಯದ ದೀನ್ ದಯಾಳ ಉಪಾಧ್ಯಾಯ ವಸತಿ ನಿಲಯ ಸಮುಚ್ಚಯ ಕಾಮಗಾರಿ ಮಂಗಳವಾರ ಪರಿಶೀಲಿಸಿದ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಮುಂದಿನ ಒಂದು ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚಿಸಿದರು.



ಸಮಾಜ ಕಲ್ಯಾಣ, ಹಿಂದುಲಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ಲೋಕೋಪಯೋಗಿ ಇಲಾಖೆಯ ಸುಮಾರು 82 ಕೋಟಿ ರೂ. ಹಂಚಿಕೆ ಅನುದಾನದಲ್ಲಿ ನಿರ್ಮಿಸಲಾಗುತ್ತಿರುವ 1,000 ನಿಲಯಾರ್ಥಿಗಳ ಪ್ರವೇಶಾವಕಾಶ ಕಲ್ಪಿಸುವ ವಸತಿ ನಿಲಯ ಕೆಲಸ ಗುಣಮಟ್ಟದಿಂದ ಕೂಡಿರಬೇಕು. ಅಂತಿಮಹಂತದ ಕೆಲಸ ಕಾರ್ಯಗಳನ್ನು ಬೇಗ ಮುಗಿಸಿ ಉದ್ಘಾಟನೆಗೆ ಸಜ್ಜುಗೊಳಿಸಬೇಕೆಂದರು.

ಇದಕ್ಕು ಮುನ್ನ ಎಸ್.ಟಿ.ಬಿ.ಟಿ ಬಳಿ ಪ್ರಜ್ಞಾ ಆಂಗ್ಲ ಪ್ರೌಢ ಶಾಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಅನುದಾನದಡಿ ನಡೆಯುತ್ತಿರುವ ಸಭಾಂಗಣ, ಡೈನಿಂಗ್ ಹಾಲ್, ಶಾಲಾ ಕೊಠಡಿ ಮುಂದುವರೆದ ಕಾಮಗಾರಿ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮಹಾವಿದ್ಯಾಲಯದಲ್ಲಿ ನಡೆಯುತ್ತಿರುವ ಸಭಾಂಗಣ ನಿರ್ಮಾಣ ಕಾರ್ಯ ಸಹ ಡಿ.ಸಿ. ಪರಿಶೀಲಿಸಿದರು.

ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತ ಸುಭಾಷ ಬಿರಾದಾರ, ಎ.ಇ.ಇ ಸೇರಿದಂತೆ ಇತರೆ ಸಿಬ್ಬಂದಿಗಳು ಇದ್ದರು.

## ಕ್ಯಾಂಟಿನ್ ನಡೆಸಲು ಟೆಂಡರ್ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.22––ಕರ್ನಾಟಕ ಉಚ್ಚನ್ಯಾಯಾಲಯ ಕಲಬುರಗಿ ಪೀಠದ ಆವರಣದಲ್ಲಿ ಕ್ಯಾಂಟಿನ್ ನಡೆಸಲು ಆಹ್ವಾನಿಸಲಾಗಿದ್ದ ಟೆ–ಂಡರ್ ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕವನ್ನು 2025ರ ಜುಲೈ 19 ರಿಂದ ಜುಲೈ 31ರ ಸಂಜೆ 04.30 ರವರೆಗೆ ವಿಸ್ತರಿಸಲಾಗಿದೆ ಕರ್ನಾಟಕ ಉಚ್ಚನ್ಯಾಯಾಲಯ ಕಲಬುರಗಿ ಪೀಠದ ಹೆಚ್ಚುವರಿ ರಿಜಿಸ್ಟ್ರಾರ್ ಜನರಲ್ ಬಸವರಾಜ ಚೇಂಗಟಿ ಅವರು ತಿಳಿಸಿದ್ದಾರೆ.

ಈ ಟೆಂಡರ್ ಅರ್ಜಿಗಳನ್ನು 2025ರ ಆಗಸ್ಟ್ 1ರಂದು ಸಂಜೆ 04.30 ಗಂಟೆಗೆ ಕರ್ನಾಟಕ ಉಚ್ಚ ನ್ಯಾಯಾಲಯ ಕಲಬುರಗಿ ಪೀಠದ ಅಪರ ಮಹಾ ವಿಲೇಖನಾಧಿಕಾರಿಗಳ ಕಚೇರಿಯಲ್ಲಿ ತೆರೆಯಲಾಗುತ್ತದೆ.

ಆಸಕ್ತರು, ಟೆಂಡರ್ ಅಧಿಸೂಚನೆ, ಷರತ್ತುಗಳು ಮತ್ತು ಇನ್ನಿತರ ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಉಚ್ಚನ್ಯಾಯಾಲಯದ ಅಧಿಕೃತ ಜಾಲತಾಣ https://judiciary.karnataka.gov.inರಲ್ಲಿನÀ Notifications-Tenders ಗೆ ಭೇಟಿ ನೀಡಲು ಹಾಗೂ ದೂರವಾಣಿ ಸಂಖ್ಯೆ 08472–264124, 264164 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ (ಖಕಖಇಇ) 2025

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜುಲೈ.22 – ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ (SPREE) 2025 ಕಾರ್ಮಿಕರ ರಾಜ್ಯ ವಿಮಾ ನಿಗಮವು ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಅನುಮೋದಿಸಿದ ಒಂದು ವಿಶೇಷ ಉಪಕ್ರಮವಾಗಿದೆ, ದಿನಾಂಕ 1 ನೇ ಜುಲೈನಿಂದ 31 ಡಿಸೆಂಬರ್ 2025 ರಿಂದ ಸಕ್ರಿಯವಾಗಿದ್ದು, ಗುತ್ತಿಗೆ ಹಾಗೂ ತಾತ್ಕಾಲಿಕ ಕಾರ್ಮಿಕರು ಸೇರಿದಂತೆ ಇಎಸ್ಐ ಅಡಿಯಲ್ಲಿ ಇನ್ನೂ ನೋಂದಾವಣೆಯಾಗದ ಉದ್ಯೋಗದಾತರು ಮತ್ತು ಉದ್ಯೋಗಿಗಳ ಯಾವುದೇ ಪರಿಶೀಲನೆ ಅಥವಾ ಹಿಂದಿನ ಅವಧಿಯ ಯಾವುದೇ ಬಾಕಿಯ ಬೇಡಿಕೆ ಇಲ್ಲದೇ ನೋಂದಾಯಿಸಲು ಒಂದು ಬಾರಿಯ ಅವಕಾಶವನ್ನು ಕಲ್ಪಿಸಲಾಗಿದೆ. (SPREE) 2025 ರ ಅಡಿಯಲ್ಲಿ ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಎಸ್ಐಸಿ ಪೋರ್ಟಲ್, ಶ್ರಮ್ ಸುವಿಧಾ ಮತ್ತು ಎಂಸಿಎ (ESIC Portal, Shram Suvidhaa, MCA) ಪೊರ್ಟಲ್ ಮೂಲಕ ಡಿಜಿಟಲ್ ನೋಂದಾಯಿಸಿಕೊಳ್ಳಬಹುದು. ತಾವು ಘೋಷಿಸಿದ ದಿನಾಂಕದಿಂದ ನೋಂದಣಿಯನ್ನು ನಡೆಸಲಾಗಿದೆ, ನೋಂದಣಿಯ ಪೂರ್ವ ಅವಧಿಗೆ ಯಾವುದೇ ವಂತಿಗೆ ಮತ್ತು ಸೌಲಭ್ಯವನ್ನು ಹೊಂದಿದೆ ಅನ್ವಯಿಸುವುದಿಲ್ಲ, ನೋಂದಣಿಯ ಪೂರ್ವ ಅವಧಿ ಯಾವುದೇ ದಾಖಲೆಗಳ ಪರಿಶೀಲನೆ ಅಥವಾ ಬೇಡಿಕೆ ಇರುವುದಿಲ್ಲ.

ಈ ಯೋಜನೆಯು ಸ್ವಯಂ ಪ್ರೇರಿತವಾದ ಅನುಸರಣೆಯನ್ನು ಪ್ರೋತ್ಸಾಹಿಸಿ, ಹಿಂದಿನ ಅವಧಿಗೆ ದಂಡ ವಿಧಿಸಬೇಕಾದ ಭಯವನ್ನು ಹೋಗಲಾಡಿಸಿ . ನೋಂದಾವಣಿಯ ಲಕ್ಷಣವನ್ನು ಸರಳೀಕರಿಸಲಾಗಿದೆ. SPREE 2025 ನ್ನು ಅನುಮೋದಿಸುವ ಮೊದಲು ನಿಗಧಿತ ಅವಧಿಯಲ್ಲಿ ನೋಂದಾವಣೆ ಮಾಡಲಾಗಿತ್ತು ಕಾನೂನು ಕ್ರಮ ಹಾಗೂ ಹಿಂದಿನ ಅವಧಿಯ ಬಾಕಿ ಬೇಡಿಕೆ ಕಾರಣವಾಗುತ್ತಿತ್ತು. SPREE 2025 ಈ ಅಡೆತಡೆಗಳನ್ನು ನಿವಾರಿಸಿ ನೋಂದಾವಣೆಯಿಂದ ಬಿಟ್ಟುಹೋದ ಘಟಕಗಳು ಮತ್ತು ಕಾರ್ಮಿಕರನ್ನು ಇಎಸ್ಐ ವ್ಯಾಪ್ತಿಯೊಳಗೆ ಸಾಮಾಜಿಕವಾಗಿ ಸೇರಿಸಿ ಭದ್ರತೆಯನ್ನು ಖಚಿತಪಡಿಸುತ್ತದೆ.

SPREE 2025ರ ಪ್ರಾರಂಭವು ಕಾರ್ಮಿಕರ ರಾಜ್ಯ ವಿಮಾ ನಿಗಮದ ಒಂದು ಪ್ರಗತಿಪರ ಹೆಜ್ಜೆಯಾಗಿದ್ದು, ಸರಳ ಮತ್ತು ಹಿಂದಿನ ಅವಧಿಯ ಬಾಕಿಯ ಬೇಡಿಕೆಯಿಲ್ಲ ನೋಂದಾವಣೆಯಾಗಿ ಸುಲಭವಾಗಿ ಸಾಮಾಜಿಕ ಭದ್ರತೆಗೆ ಒಳಪಡುವ ಯೋಜನೆಯಾಗಿದೆ. ಈ ಯೋಜನೆಯು ಉದ್ಯೋಗದಾತರು ಕೇವಲ ತಮ್ಮ ಕಾರ್ಯಪಡೆಯ ಕ್ರಮಬದ್ಧಗೊಳಿಸುವಿಕೆ ಪ್ರೋತ್ಸಾಹಿಸುವುದಲ್ಲದೆ, ಇನ್ನೂ ಹೆಚ್ಚಿನ ಕಾರ್ಮಿಕರನ್ನು ವಿಶೇಷವಾಗಿ ಗುತ್ತಿಗೆ ವಲಯದ ಕಾರ್ಮಿಕರು ಇಎಸ್ಐ ಕಾಯ್ದೆಯಡಿಯಲ್ಲಿ ದೊರೆಯುವ ಅಗತ್ಯ ಆರೋಗ್ಯ ರಕ್ಷಣೆ ಹಾಗೂ ಸಾಮಾಜಿಕ ಸೌಲಭ್ಯಗಳನ್ನು ಪಡೆಯುವುದನ್ನು ಉತ್ತೇಜಿಸುತ್ತದೆ. ಇದರೊಂದಿಗೆ ಇಎಸ್ಐಸಿಯು ಅಗತ್ಯ ಆರೋಗ್ಯ ರಕ್ಷಣೆ ಮತ್ತು ಸಾಮಾಜಿಕ ಭದ್ರತೆಯನ್ನು ತಲುಪಿಸುವ ತನ್ನ ಬದ್ಧತೆಯನ್ನು ಉಳಿಸಿಕೊಂಡು ಭಾರತ ಕಾರ್ಮಿಕ ಕಲ್ಯಾಣ ಕೇಂದ್ರಿತ ದೃಷ್ಟಿಕೋನಕ್ಕೆ ಅನುಗುಣವಾಗಿ ಎಂದು ಕಾರ್ಮಿಕರ ರಾಜ್ಯ ವಿಮಾ ನಿಗಮದ ಶಾಖಾ ಕಚೇರಿ ಬೀದರನ ಶಾಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಕಲಚೇತನರ ರಾಷ್ಟ್ರ ಪ್ರಶಸ್ತಿ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ


ಬೀದರ. ಜುಲೈ.22– ಭಾರತ ಸರ್ಕಾರದ ಸಾಮಾಜಿಕ ನ್ಯಾಯಮತ್ತು ಸಬಲೀಕರಣ ಮಂತ್ರಾಲಯ ನವದೆಹಲಿ ಇವರ ವತಿಯಿಂದ ಪ್ರಸಕ್ತ ಸಾಲಿನಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿ ಮತ್ತು ಸಂಸ್ಥೆಗಳಿಂದ ರಾಷ್ಟ್ರ ಪ್ರಶಸ್ತಿಗಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹರು ದಿನಾಂಕ: 31–07–2025 ರೊಳಗಾಗಿ ವೆಬ್‌ಸೈಟ್ www.depwd.gov.in ಮತ್ತು ರಾಷ್ಟ್ರೀಯ ಪುರಸ್ಕಾರ ಪೋರ್ಟಲ್ www. awards.gov.in ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಹಿತಿಗಾಗಿ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಬೀದರ ದೂರವಾಣಿ ಸಂಖ್ಯೆ: 08482–234647 ಗೆ ಸಂಪರ್ಕಿಸುವಂತೆ ಅವರು ತಿಳಿಸಿದ್ದಾರೆ.

### ಇದೇ 25 ರಂದು ಅನುಭವ ಮಂಟಪ ಪರಿಸರದಲ್ಲಿ
## ಒಂದು ತಿಂಗಳ ಪರಿಯಂತ ಶ್ರಾವಣ ಮಾಸದ ನಿಮಿತ್ಯ ಆತ್ಮ ಚರಿತ್ರೆ ಪ್ರವಚನ.

(ವರದಿ. ಡಿ. ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ



ಬಸವಕಲ್ಯಾಣ :– ಜು 22 ಇಲ್ಲಿನ ಅನುಭವ ಮಂಟಪದ ಪರಿಸರದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಇದೇ 25 ರಿಂದ ಮುಂದಿನ 28 ರವರೆಗೆ ರಂದು ಒಂದು ತಿಂಗಳ ಪರಿಯಂತ ಶ್ರಾವಣ ಮಾಸದ ನಿಮಿತ್ಯ ಪೂಜ್ಯಶ್ರೀ ನಾಡೋಜ ಡಾ. ಬಸವಲಿಂಗ ಪಟ್ಟದೇವರು ಮಾರ್ಗದರ್ಶನದಲ್ಲಿ ಅನುಭವ ಮಂಟಪ ಸಂಚಾಲಕರಾದ ಪೂಜ್ಯ ಶ್ರೀ ಶಿವಾನಂದ ಮಹಾಸ್ವಾಮಿಜಿಗಳು ಅವರಿಂದ ಅಮರಗಣಂಗಳ ಆತ್ಮ ಚರಿತ್ರೆ ಪ್ರವಚನ ಪ್ರತಿ ದಿನ ಸಾಯಂಕಾಲ 6. ಗಂಟೆಗೆ ನಡೆಯುವುದು ಆದರಿಂದ ಸಕಲ ಸದ್ಭಕ್ತರು ಪ್ರತಿ ದಿನ ಆಲಿಸಲು ಆಗಮಿಸಬೇಕಾಗಿ ಶ್ರಾವಣ ಮಾಸದ ಪ್ರವಚನ ಸೇವಾ ಸಮಿತಿ ಅಧ್ಯಕ್ಷರಾದ ಶಿವಪುತ್ರಪ್ ಔಸೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಡೀನಿಯಂ ಬೆಳವಣಿಗೆಯಲ್ಲಿ ವೈಜ್ಞಾನಿಕ ನಿರ್ವಹಣಾ ತಂತ್ರಗಳು –ಒಂದು ಅನುಭವಾಧಾರಿತ ವಿಶ್ಲೇಷಣೆ
## ಅಡೀನಿಯಂ ನನ್ನ ಜೀವನದಲ್ಲಿ ಪ್ರವೇಶಿಸಿದ ಕ್ಷಣ

2020ರ ಲಾಕ್‌ಡೌನ್ ಸಮಯ. ಬೆಳಗಿನ ಜಾವ 4:30ಕ್ಕೆ ವಾಕಿಂಗ್‌ಗೆ ಹೋಗುತ್ತಿದ್ದಾಗ, ಮನೆಯೊಂದರ ಮುಂದೆ ಅದ್ಭುತ ಬಣ್ಣದ ಹೂವಿನೊಂದಿಗೆ ನಿಂತಿದ್ದ ಅಡೀನಿಯಂ (Adenium obesum) ಗಿಡವೊಂದು ನನ್ನ ಕಣ್ಣಿಗೆ ಬಂತು. ಅದರ ಬಣ್ಣದ ಹೂಗಳು, ಗಂಭೀರವಾಗಿ ನಿಂತ ಕಾಂಡ ಮತ್ತು ಅದ್ಭುತ ಶೈಲಿ ನನಗೆ ತಕ್ಷಣವೇ ಮೆಚ್ಚುಗೆಯಾಯಿತು. ಆದರೆ ಆಗ ಅದನ್ನು ಖರೀದಿಸುವ ಧೈರ್ಯ ನನಗೆ ಇರಲಿಲ್ಲ. ಆದರೂ ಆ ಹೂವಿನ ಚಿಲುಮೆಯು ನನ್ನ ಮನಸ್ಸಿಗೆ ಅಂಟಿಕೊಂಡಿತು. ಇಂಟರ್‌ನೆಟ್‌ನಲ್ಲಿ "ಅಡೀನಿಯಂ ಅನ್ನು ಕಟಿಂಗ್ ಮೂಲಕ ಹೇಗೆ ಬೆಳೆಸಬಹುದು?" ಎಂಬುದರ ಕುರಿತು ಅಧ್ಯಯನ ಮಾಡಿ, ಎರಡು ಶಾಖೆಗಳನ್ನು ಕತ್ತರಿಸಿ ನನ್ನ ತೋಟದಲ್ಲಿ ನೆಟ್ಟೆ. ಅದರಿಂದ ಒಂದು ಬೇಟೆ ಆರಂಭವಾಯಿತು. ಇಂದು ಅದೇ ಗಿಡ ನನ್ನ ಧ್ಯಾನದ ಭಾಗವಾಗಿದೆ. ಅದರಲ್ಲಿಂದು ಅರಳಿದ ಮೊದಲ ಹೂವಿನ ಕ್ಷಣವನ್ನು ನಾನು ಎಂದಿಗೂ ಮರೆತಿಲ್ಲ.



**ಅಡೀನಿಯಂಗಿಡದ ವೈಶಿಷ್ಟತೆಗಳು:** ಅಡೀನಿಯಂ ಪೌಢಶಾಖೆಯ ಗಿಡವಾಗಿದ್ದು, ಇದನ್ನು "ಡೆಜ–ರ್ಟ್ ರೋಸ್" (ಮರಳುಗಾಡಿನ ಗುಲಾಬಿ) ಎಂದು ಸಹ ಕರೆ–ಯುತ್ತಾರೆ. ಇದು ಮಾದಕರ ಹೂವುಗಳುಳ್ಳ, ದಪ್ಪ ಕಾಂಡವಿರುವ ಗಿಡವಾಗಿದ್ದು, ಗರಿಷ್ಠ ಸಮಯ ನೀರು ಇರದಿದ್ದರೂ ಸಹ ಬೆಳೆಯಬಲ್ಲದು. ಇದು CAM (Crassulacean Acid Metabolism) ಪ್ರಕ್ರಿಯೆ ಮೂಲಕ ನೀರನ್ನು ಸಂಗ್ರಹಿಸಿಕೊಳ್ಳುತ್ತದೆ ಮತ್ತು ಬೆಳಗಿನ ಸಮಯದಲ್ಲಿ ಮಾತ್ರ stomata (ರಂಧ್ರಗಳು) ತೆರೆದು ಉಸಿರಾಟ ನಡೆಸುತ್ತದೆ. ಇದರ ಗಡ್ಡೆ root system (ಮೂಲವ್ಯವಸ್ಥೆ) ದಪ್ಪವಾಗಿದ್ದು, ಉರಿಯುವ ಅಡಚಣೆಗೆ ತಡೆಯನ್ನು ನೀಡುತ್ತದೆ. ಇದನ್ನು "ಬೋನ್ಸಾಯ್" ಗಿಡವಾಗಿ ಬೆಳೆಸಬಹುದಾಗಿದೆ.

**ವೈಜ್ಞಾನಿಕ ನಿರ್ವಹಣಾ ತಂತ್ರಗಳು, ಮಣ್ಣು ಮತ್ತು ಕುಡಿಯುವ ನೀರಿನ ನಿರ್ವಹಣೆ:**

ಅಡೀನಿಯಂ ಬೆಳೆಯಲು ತುರಿ ಮಣ್ಣು (well-drained soil) ಅತ್ಯಂತ ಅಗತ್ಯ. ಈ ಗಿಡವು root rot (ಮೂಲ ಕೊಳೆಯುವಿಕೆ) ಗೆ ಬಹಳ ಯಾತನೆಯಾಗುತ್ತದೆ. ಹೀಗಾಗಿ ಮಣ್ಣಿನಲ್ಲಿ ಕಬ್ಬಿಣದ ರಭಸ, ನದಿ ಮಣ್ಣು, ಮರಳು ಮತ್ತು ಇಟ್ಟಿಗೆ ಪುಡಿ ಸೇರಿಸಬೇಕು. ಮಣ್ಣು ದೋಣಿ ಮಾದರಿಯಲ್ಲಿ ಹರಿದು ಹೋಗುವಂತಿರಬೇಕು. ಕುಡಿಯುವ ನೀರನ್ನು ದಿನಕ್ಕೊಂದು ಸಲ ಅಥವಾ ಎರಡು ದಿನಕ್ಕೊಮ್ಮೆ ಮಾತ್ರ ನೀಡಬೇಕು.

ಧಾರ್ಮಿಕ ಬೆಳವಣಿಗೆಗಾಗಿ ಪೋಷಕಾಂಶಗಳು: ಅಡೀನಿಯಂ ಗಿಡಕ್ಕೆ ಸರಿಯಾದ ಪ್ರಮಾಣದಲ್ಲಿ NPK (ನೈಟ್ರೋಜನ್, ಫಾಸ್ಫೊರಸ್, ಪೊಟ್ಯಾಸಿಯಂ) ಕೊಡುವುದು ಮುಖ್ಯ. ವಿಶೇಷವಾಗಿ ಫಾಸ್ಫೊರಸ್ ಹೆಚ್ಚಾದ ಹೆಚ್ಚು ಹೂಗಳು ಬರುತ್ತವೆ. ತಿಂಗಳಿಗೆ ಒಮ್ಮೆ ಮಳೆ ನೀರಿನಲ್ಲಿ ಕರಿದಿರುವ ಪೋಷಕಾಂಶ ಹಾಕಿದರೆ ಉತ್ತಮ ಫಲಿತಾಂಶ ದೊರೆಯುತ್ತದೆ.

ಕಟಿಂಗ್ ಮತ್ತು ಹೋರ್ಮೋನ್ ಬಳಕೆ: ಹಳೆಯ ಶಾಖೆಗಳನ್ನು ಸರಿಯಾಗಿ ಕತ್ತರಿಸಿ, ಅದರಲ್ಲಿ rooting hormone (ಮೂಲಹೊಂದುವ ಹಾರ್ಮೋನ್ – ಇಂದೋಲ್ ಬ್ಯೂಟಿರಿಕ್ ಆಸಿಡ್) ಬಳಸಿ, ಉತ್ತಮವಾಗಿ ಬೆಳೆಯಬಹುದಾಗಿದೆ. ಇದು ಬೇರು ಸೃಷ್ಟಿಯ ವೇಗವನ್ನು ಹೆಚ್ಚಿಸುತ್ತದೆ. ಸೂರ್ಯನ ಬೆಳಕು: ಅಡೀನಿಯಂ ಗೆ ದಿನಕ್ಕೆ ಕನಿಷ್ಠ 6–8 ಗಂಟೆಗಳ ನೇರ ಸೂರ್ಯ ಬೆಳಕು ಬೇಕಾಗುತ್ತದೆ. ಅದು ಬೆಳೆಯುವ ಗತಿಗೆ ಸಹಕಾರಿ.

ಹುಲ್ಲು, ಕೀಟ ನಿಯಂತ್ರಣ: aphids (ಚುಟ್ಟುಗಣ್ಣು) ಮತ್ತು mealy bugs (ಜೇನು ಹುಳುಗಳು) ನಿಯಂತ್ರಣ–ಕ್ಕೆ ನಿಂಬೆನೀರು, ನೀಟೆಲ್ ಎಕ್ಸ್‌ಟ್ರಾಕ್ಟ್ ಅಥವಾ ನೀಮ್ ಆಯಿಲ್ (ಅರಿಶಿನ ಎಣ್ಣೆ) ಶಿಫಾರಸು ಮಾಡಲಾಗುತ್ತದೆ.

ಬೀಜಗಳಿಂದ ಬೆಳವಣಿಗೆ ಮತ್ತು ವಿಶೇಷ ಅನುಭವ

ಹೈದ್ರಾಬಾದ್ ಪ್ರವಾಸದ ವೇಳೆ ಎನ್‌ಟಿಆರ್ ತೋಟದಲ್ಲಿ ಅಡೀನಿಯಂ ಗಿಡದ ಮೇಲಿದ್ದ ಬೀಜ ಪೊಟ್ಟಣ ನನ್ನ ಗಮನ ಸೆಳೆಯಿತು. ಅದನ್ನು ತರಲು ಮನಸ್ಸಾಯಿತು. ಪುಡಿ ಹಾಗು ಒಣಬಟ್ಟೆಯಲ್ಲಿ ಜಾಗೃತಿಯಿಂದ ಬೀಜಗಳನ್ನು ತಂದೆ. ಅದರಲ್ಲಿ ಎರಡು ಮೊಳೆಯಿದ್ದು, ಇಂದು ನನ್ನ ತೋಟದಲ್ಲಿರುವ ಅತ್ಯಂತ ಭಾವಪೂರ್ಣ ಸಂಬಂಧ ಹೊಂದಿರುವ ಗಿಡಗಳಾಗಿ ಬೆಳೆದಿವೆ. ಬೀಜಗಳಿಂದ ಬೆಳೆಯುವ ಗಿಡಗಳು ತಾಯಿ ಗಿಡದಿಂದ ಬೇರೆಯಾಗಿರುವ ಕಾರಣ ವಿಭಿನ್ನ ಶೈಲಿ ಹೊಂದಿರುತ್ತವೆ.

**ಮನುಷ್ಯತ್ವವನ್ನು ಪ್ರೇರೇಪಿಸುವ ಅಡೀನಿಯಂ:** ಇಂದಿನ ತಂತ್ರಜ್ಞಾನ ಗಟ್ಟಿದ ಯುಗದಲ್ಲಿ, ಯುವಜನತೆ ಬಹುಪಾಲು ಸಮಯವನ್ನು ಮೊಬೈಲ್, ಚಿಕ್ಕ ವಿಡಿಯೋ, ಆಟಗಳಲ್ಲಿ ಕಳೆಯುತ್ತಿದ್ದಾರೆ. ಮನಸ್ಸಿಗೆ ಪೋಷಣೆ ನೀಡದ, ನೈಸರ್ಗಿಕತೆಯಿಂದ ದೂರವಿರುವ ಜೀವನದ ನಡುವೆ, ಒಂದು ಗಂಟೆ ನೈಸರ್ಗಿಕತೆಯ ಜೊತೆ ಕಳೆದರೆ ಅದು ತಲೆಮಾರಿಗೆ ಹಸಿರು ದಾರಿ ತೋರಿಸುತ್ತದೆ. ಅಡೀನಿಯಂ ಬೆಳೆಸುವುದು ನನಗೆ ಆತ್ಮಸಂತೋಷ, ನೆಮ್ಮದಿ ಮತ್ತು ನೆನೆಪಿನ ಔಷಧಿಯಾಗಿದೆ. ಅದರಲ್ಲಿರುವ ಚಿಗುರು, ಹೂವಿನ ಮೊಳಕೆ, ಬದಲಾಗುವ ಹೂಗಳ ಬಣ್ಣಗಳು ನಿಜಜೀವನದ ಅಪರೂಪದ ಪಾಠವನ್ನು ಕಲಿಸುತ್ತವೆ.

**ಅಡೀನಿಯಂ ಬೆಳೆಸುವವರು ಗಮನಿಸಬೇಕಾದ ಕೆಲವು ಟಿಪ್ಪಣಿಗಳು:** ಅಡೀನಿಯಂ ಗೆ ಒಣ ಹವಾಮಾನ ಸೂಕ್ತ. ಹೀಗಾಗಿ ಮಳೆಗಾಲದಲ್ಲಿ ನೀರಿನ ಪ್ರಮಾಣ ಕಡಿಮೆ ಇರಲಿ.

ಗಿಡದ ದೇಹದಲ್ಲಿ ಬಾಯೋಫ್ಲಾಸಿಕ್ (caudex) ಎಂಬ ದಪ್ಪ ಕಾಂಡವಿದ್ದು, ಅದು ನೀರಿನ ಸಂಗ್ರಹಣೆಗೆ ಕಾರಣವಾಗುತ್ತದೆ.

ಗಿಡದಲ್ಲಿ ಹೂ ಬರುವ ಸಮಯಕ್ಕೆ ಹೂ ಹರಿದು ಹೋಗುವುದರ ಮೇಲೆ pruning (ಶಾಖೆ ಕತ್ತರಿಸುವಿಕೆ) ಮಾಡಿದರೆ ಹೊಸ ಹೂಗಳು ಬರುತ್ತವೆ. potting mix (ಕುಂಡದ ಮಣ್ಣು ಮಿಶ್ರಣ) ಸರಿಯಾದ ಪಾತರೆಯಿಂದ ಮಾಡಬೇಕು – ಮರಳು, ಕಬ್ಬಿಣದ ರಭಸ, ಪೀಟ್ಮಾಸ್ ಇತ್ಯಾದಿಗಳನ್ನು ಸಮಪ್ರಮಾಣದಲ್ಲಿ ಸೇರಿಸಬೇಕು.

ಅಡೀನಿಯಂ ಬೆಳವಣಿಗೆ ನನಗೆ ಕೇವಲ ಹವ್ಯಾಸವಲ್ಲ, ಅದು ಜೀವನದೊಂದಿಗೆ ಬೆಸೆದ ನೈಜ ಸಂಬಂಧವಾಗಿದೆ. ಗಿಡದಲ್ಲಿ ಬರುವ ಪ್ರತಿಯೊಂದು ಹೂವಿಗೂ ನನ್ನ ಮನಸ್ಸಿಗೆ ಒಂದೊಂದು ಸಿಹಿಯಾದ ನೆನಪಿದೆ. ಇದರೊಂದಿಗೆ ನಾನು ವೈಜ್ಞಾನಿಕವಾಗಿ ಬೆಳೆದಂತೆ, ವ್ಯಕ್ತಿತ್ವದಲ್ಲೂ ಬೆಳೆದಿದ್ದೇನೆ. ಅಡೀನಿಯಂ ನನ್ನನ್ನು ತಾಳ್ಮೆಯ, ನಿಜಜೀವನದ ಪ್ರೀತಿಯ ಅರಿವಿನವನನ್ನಾಗಿ ಮಾಡಿದೆ.



**– ರೋಹಿತ್ ಜಿರೋಬೆ**
**ಸಸ್ಯಶಾಸ್ತ್ರ ಉಪನ್ಯಾಸಕ**
**ಬೀದರ್, ಜಿಲ್ಲೆ ಬೀದರ**
**ಮೊ.7019485053**

## ಹೈಟೆಕ್ ಹಾರ್ವೆಸ್ಟರ್ ಹಬ್‌ಗಳ ಸ್ಥಾಪನೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.22–ಪ್ರಸಕ್ತ 2025–26ನೇ ಸಾಲಿಗೆ ಕೃಷಿ ಇಲಾಖೆಯಿಂದ ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ಹೈಟೆಕ್ ಹಾರ್ವೆಸ್ಟರ್ ಹಬ್‌ಗಳ ಸ್ಥಾಪನೆಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಈ ಯೋಜನೆಯಡಿ ಸಾಮಾನ್ಯ ರೈತರಿಗೆ ಗರಿಷ್ಟ ಶೇ 50 ರಂತೆ, ಪ.ಜಾ/ಪ.ಪಂ.ವರ್ಗದ ರೈತರಿಗೆ ಗರಿಷ್ಠ ಶೇ 70 ರಷ್ಟು ಹಾಗೂ ಸಂಘ ಸಂಸ್ಥೆಗಳಿಗೆ (ಚಾಲ್ತಿಯಲ್ಲಿರುವ ಕೃಷಿಯಂತ್ರಧಾರೆ ಕೇಂದ್ರಗಳ ಸೇವಾದಾರ ಸಂಸ್ಥೆ/ ಎಫ್‌ಪಿಓ (ಈಕಔ) ಗಳನ್ನೊಳಗೊಂಡಂತೆ) ಶೇ.70 ರಷ್ಟು ಕ್ರೆಡಿಟ್ ಲಿಂಕ್ ಬ್ಯಾಕ್ ಎಂಡೆಡ್ ಸಬ್ಸಿಡಿ ನೀಡಲಾಗುತ್ತದೆ.

ಆಸಕ್ತ ರೈತರು, ಸಂಘ–ಸಂಸ್ಥೆಗಳು/ ರೈತ ಉತ್ಪಾದಕ ಸಂಸ್ಥೆ (ಎಫ್.ಪಿ.ಒ) / ಕೃಷಿ ಯಂತ್ರೋಪಕರಣಗಳ ಬ್ಯಾಂಕ್ (ಎಫ್‌ಎಂಬಿ)/ಕೃಷಿಯಂತ್ರಧಾರೆ ಕೇಂದ್ರಗಳು (ಸಿಎಚ್‌ಎಸ್‌ಸಿ) ಅರ್ಜಿಯನ್ನು ನಿಗದಿತ ನಮೂನೆಯಲ್ಲಿ ದಾಖಲಾತಿಗಳೊಂದಿಗೆ 2025ರ ಜುಲೈ 31ರೊಳಗಾಗಿ ಸಂಬಂಧಪಟ್ಟ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲಿಚ್ಛಿಸುವ ಅರ್ಜಿದಾರರು ಅವಶ್ಯಕ ದಾಖಲಾತಿಗಳೊಂದಿಗೆ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ ಮತ್ತು ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭೇಟಿ ನೀಡಬೇಕೆಂದು ಅವರು ತಿಳಿಸಿದ್ದಾರೆ.

## ಮಟಕಾ:ನಾಲ್ವರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.22– ನಗರದ ಸೂಪರ್ ಮಾರ್ಕೆಟ್ ಸಿ.ಟಿ.ಬಸ್‌ಸ್ಟ್ಯಾಂಡ್ ಹತ್ತಿರ ಮತ್ತು ಎಪಿಎಂಸಿ ರೈತ ಭವನದಿಂದ ಚೌಕ್ ಠಾಣೆ ಕಡೆಗೆ ಹೋಗುವ ರಸ್ತೆಯ ಖಾನಾವಳಿ ಹತ್ತಿರದ ಸಾರ್ವಜನಿಕ ಸ್ಥಳದಲ್ಲಿ ಕಲ್ಯಾಣ ಮತ್ತು ಬಾಂಬೆ ಮಟಕಾ ಸಂಕಿ ಸಂಖ್ಯೆಗಳ ಮಟಕಾ ಚೀಟಿ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ ಮತ್ತು ಸಿಬ್ಬಂದಿಗಳಾದ ಮೃತ್ಯುಂಜಯ, ಯಲ್ಲಪ್ಪ, ಅಶೋಕ ಕಟಕೆ, ಶಿವಕುಮಾರ, ನಾಗರಾಜ, ಅಂಬಾಜಿ, ಅರವಿಂದ, ಪ್ರೀತಮ್, ವಿಶ್ವನಾಥ ಮತ್ತು ಸುನೀಲಕುಮಾರ ಅವರು ದಾಳಿ ನಡೆಸಿ ಇಬ್ಬರನ್ನು ಬಂಧಿಸಿದ್ದಾರೆ.

# ಕೆಂಭಾವಿ ಪಟ್ಟಣದಲ್ಲಿಸಹಕಾರ ಸಂಘದ "ಮಹಿಳಾ" ಸದಸ್ಯರಿಗೆ ಕ್ಲಸ್ಟರ್ ತರಬೇತಿ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಸುರಪುರ :ತಾಲೂಕಿನ ಕೆಂಭಾವಿ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ (ನಿಯಮಿತ) ಬೆಂಗಳೂರು, ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ (ನಿ.), ಸಹಕಾರ ಇಲಾಖೆ ಯಾದಗಿರಿ ಮತ್ತು ಶ್ರೀ ಸಿದ್ಧಿವಿನಾಯಕ ಮಹಿಳಾ ಪತ್ತಿನ ಸಹಕಾರ ಸಂಘ (ನಿ.), ಕೆಂಭಾವಿ ಇವರ ಸಂಯುಕ್ತಆಶ್ರಯದಲ್ಲಿಮಹಿಳಾ ಸದಸ್ಯರಿಗೆ ಕ್ಲಸ್ಟರ್ ತರಬೇತಿ ಕಾರ್ಯಕ್ರಮವು ಭವ್ಯವಾಗಿ ನಡೆಯಿತು.

ಕಾರ್ಯಕ್ರಮಕ್ಕೆ ಶ್ರೀಮತಿ ನೀಲಮ್ಮ ಅಶೋಕ ಸೊನ್ನದ, ಸಂಘದ ಉಪಾಧ್ಯಕ್ಷರು, ಜ್ಯೋತಿ ಬೆಳಗುವುದರ ಮೂಲಕ ಚಾಲನೆ ನೀಡಿದರು. ಅವರು ಮಾತನಾಡಿ, "ಮಹಿಳೆಯರು ಸಹಕಾರ ಕ್ಷೇತ್ರದ ಬಗ್ಗೆ ಹೆಚ್ಚು ಜ್ಞಾನ ಪಡೆದು ಸಂಘಗಳ ಬೆಳವಣಿಗೆಯಲ್ಲಿಶ್ರಮಿಸಬೇಕು. ಹೊಸ ಹೊಸ ಸಹಕಾರ ಸಂಘಗಳ ಸ್ಥಾಪನೆಯತ್ತ ಒತ್ತು ನೀಡಬೇಕು," ಎಂದು ಸಲಹೆ ನೀಡಿದರು.

ಅಧ್ಯಕ್ಷೀಯ ಭಾಷಣದಲ್ಲಿ ಶ್ರೀಮತಿ ಅಕ್ಕಮಹಾದೇವಿ ಎಸ್. ಆಲಗೂರ, ಸಂಘದ ಅಧ್ಯಕ್ಷರು, "ಸಹಕಾರ ಸಂಘಗಳಿಂದ ಲಭ್ಯವಿರುವ ಸಾಲ ಸೌಲಭ್ಯಗಳನ್ನು ಪಡೆದು ಮಹಿಳೆಯರು ಸ್ವಾವಲಂಬಿಗಳಾಗಬೇಕು," ಎಂಬುದಾಗಿ ಹೇಳಿದರು.

ಕಾರ್ಯಕ್ರಮದ ಪ್ರಮುಖ ಉಪನ್ಯಾಸವನ್ನು ಜಿಲ್ಲಾ ಸಹಕಾರ ಶಿಕ್ಷಕಿಯಾಗಿರುವ ಶ್ರೀಮತಿ ಸುಜಾತ ಮಠ ಅವರು ನೀಡಿದರು. ಅವರು ಮಹಾಮಂಡಳಮತ್ತುಒಕ್ಕೂಟಗಳ ಕಾರ್ಯಚಟುವಟಿಕೆಗಳಕುರಿತು ವಿವರ ನೀಡಿದರು.

ಶ್ರೀಮತಿ ಬಸಲಿಂಗಮ್ಮ, ಜಂಡರ್ ಸ್ಪೆಷಲಿಸ್ಟ್, ಜಿಲ್ಲಾ ಮಹಿಳಾ ಸಬಲೀಕರಣ ಘಟಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯಾದಗಿರಿ, ಅವರು "ಮಿಷನ್ ಶಕ್ತಿ" ಯೋಜನೆಯಡಿ ಮಹಿಳೆಯರ ಸುರಕ್ಷತೆ, ಭದ್ರತೆ ಮತ್ತು ಸಬಲೀಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು. ಇದರಲ್ಲಿ:

ಸಖಿ ಒನ್ ಸ್ಟಾಪ್ ಸೆಂಟರ್,

ಮಹಿಳಾ ಸಹಾಯವಾಣಿ 181, ಮಕ್ಕಳ ಸಹಾಯವಾಣಿ 1098, ಬೇಟಿ ಬಚಾವೋ ಬೇಟಿ ಪಡಾವೋ, ಪಿಸಿಪಿಎನ್‌ಡಿಟಿ ಕಾಯ್ದೆ 1994, ತುರ್ತು ಸಹಾಯವಾಣಿ 112,

ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆ,

ಉದ್ಯೋಗಿನಿ ಯೋಜನೆ (ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ),

ಪ್ರಧಾನಮಂತ್ರಿ ಉದ್ಯಮಶೀಲತೆ ತರಬೇತಿ ಯೋಜನೆ, ಮತ್ತು ನಿರುದ್ಯೋಗಿ ಮಹಿಳೆಯರಿಗೆ ಲಭ್ಯವಿರುವ ವಿವಿಧ ಸ್ವ-ಯಂ ಉದ್ಯೋಗ ತರಬೇತಿ ಕಾರ್ಯಕ್ರಮಗಳು ಒಳಗೊಂಡಿದ್ದವು.

ಕಾರ್ಯಕ್ರಮದಲ್ಲಿ ಸಂಘದ ನಿರ್ದೇಶಕರುಗಳಾದ ಶ್ರೀಮತಿ ನೀಲಮ್ಮ ಈರಣ್ಣ ಅಕ್ಕಿ, ಶ್ರೀಮತಿ ಪ್ರಿಯದರ್ಶಿನಿ ಜಿ. ಪತ್ತಾರ, ಶ್ರೀಮತಿ ಸಾವಿತ್ರಿ ಎಂ. ಪಾಟೀಲ್, ಶ್ರೀಮತಿ ಸೋಮು ಭಾಯಿ ಮ್ಯಾಗೇರಿ ಮತ್ತು ಸ್ಥಳೀಯ ಪತ್ರಿಕಾ ಮಾಧ್ಯಮದ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ಶ್ರೀಮತಿ "ಸುಜಾತ ಮಠ" ಜಿಲ್ಲಾ ಸಹಕಾರ ಶಿಕ್ಷಕರು ಯಾದಗಿರಿ ಇವರು ಕಾರ್ಯಕ್ರಮದ ನಿರೂಪಣೆ ಮತ್ತು ಸ್ವಾಗತವನ್ನು ನೆರವೇರಿಸಿದರು ಸಂಘದ ಸಿಬ್ಬಂದಿಗಳಾದ ಬಸಲಿಂಗಯ್ಯ ಹಿರೇಮಠ, ರಾಧಿಕಾ ಜೋಶಿ, ಸಿದ್ದು ಸುರಪುರ ಹಾಗೂ ಸಂಘದ ಸದಸ್ಯರು ಮತ್ತು ಪಟ್ಟಣದ ಹಿರಿಯ ಸಹಕಾರಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

# ಪಟ್ಟದ್ದೇವರಿಂದ ವಚನ ದರ್ಶನ ಪ್ರವಚನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.22: ಶ್ರಾವಣ ಮಾಸದ ಅಂಗವಾಗಿ ಪಟ್ಟಣ ಸೇರಿ ಬೀದರ್ ಜಿಲ್ಲೆಯಲ್ಲದೇ ನೆರೆಯ ರಾಜ್ಯದ 22 ಕಡೆಗಳಲ್ಲಿ ಪ್ರವಚನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ತಿಳಿಸಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಬಸವಕಲ್ಯಾಣ ಅನುಭವ ಮಂಟಪದ ವತಿಯಿಂದ ಪ್ರವಚನ ಆಯೋಜಿಸಲಾಗುತ್ತಿದ್ದು ಜು.24 ರಿಂದ ಎಲ್ಲ ಕಡೆಗಳಲ್ಲಿ ಪ್ರವಚನ ಉದ್ಘಾಟನೆಗೊಳ್ಳಲಿದೆ. ಮಠಾಧೀಶರು, ಉಪನ್ಯಾಸಕರು, ಸಾಹಿತಿಗಳು, ಶಿಕ್ಷಕರು ವಿವಿಧ ವಿಷಯಗಳ ಮೇಲೆ ಪ್ರವಚನದ ಮೂಲಕ ಜ್ಞಾನದ ದಾಸೋಹ ಉಣಬಡಿಸಲಿದ್ದಾರೆ ಭಕ್ತರು ಸದುಪಯೋಗ ಪಡೆದು ಕೊಳ್ಳಬೇಕು ಎಂದು ತಿಳಿಸಿದರು.

ಪೂಜ್ಯರಿಂದ ವಚನ ದರ್ಶನ ಪ್ರವಚನ:ಪಟ್ಟಣದಲ್ಲಿ ಕಳೆದ ನಾಲ್ಕು ದಶಕಗಳಿಂದ ಶ್ರಾವಣ ಮಾಸದಲ್ಲಿ ನಿರಂತರವಾಗಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಪ್ರವಚನ ಕಾರ್ಯಕ್ರಮ ನಡೆಸಿ ಕೊಂಡು ಬರುತ್ತಿದ್ದಾರೆ ಎಂದು ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ತಿಳಿಸಿದರು.

ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಬಸವಾದಿ ಶರಣರ ಕುರಿತು ಕಳೆದ 40 ವರ್ಷಗಳಿಂದ ಪ್ರವಚನ ನಡೆಸಿ ಕೊಂಡು ಬರುತ್ತಿದ್ದಾರೆ.

ಈ ಬಾರಿಯು ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಪೂಜ್ಯರು ಪ್ರತಿದಿನ ವಚನ ದರ್ಶನ ವಿಷಯದ ಮೇಲೆ ಬೆಳಕು ಚೆಲ್ಲಲ್ಲಿದ್ದಾರೆ. ಜು.25ಕ್ಕೆ ಪ್ರವಚನ ಉದ್ಘಾಟನೆಗೊಳ್ಳಲಿದ್ದು ಪ್ರತಿದಿನ ಸಾಯಂಕಾಲ 6 ರಿಂದ 7 ಗಂಟೆ ವರೆಗೆ ಪ್ರವಚನದ ಮೂಲಕ ಅಧ್ಯಾತ್ಮದ ಜ್ಞಾನವನ್ನು ಧಾರೆಯೆರಿಯಲ್ಲಿದ್ದಾರೆ. ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಹಾಲಿಂಗ ಸ್ವಾಮೀಜಿ, ಪ್ರವಚನ ಸೇವಾ ಸಮಿತಿ ಅಧ್ಯಕ್ಷ ಗುಂಡಪ್ಪ ಸಂಗಮಕರ್ ಇದ್ದರು.

> ಭಕ್ತರಲ್ಲಿನ ಅಜ್ಞಾನ ಕಳೆದು ಬಸವ ಜ್ಞಾನ, ಬಸವ ಭಕ್ತಿ, ಬಸವ ಬೀಜ ಬಿತ್ತುವುದು, ಸಕಾರಾತ್ಮಕ ಚಿಂತನೆಗಳನ್ನು ಬೆಳೆಸುವ ಸದಾಶಯದೊಂದಿಗೆ ಜಿಲ್ಲೆಯ ವಿವಿಧೆಡೆ ಶ್ರಾವಣ ಮಾಸ ಪ್ರವಚನದ ಏರ್ಪಡಿಸಲಾಗುತ್ತಿದೆ. ಜಿಲ್ಲೆಯ ಸದ್ಭಕ್ತರು ಪ್ರವಚನ ಕಾರ್ಯಕ್ರಮದಲ್ಲಿ ಭಾಗವಹಿಸಿ ಸದುಪಯೋಗ ಪಡೆದು ಕೊಳ್ಳಬೇಕು.
>
> – ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

> ಪಟ್ಟಣದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ತಿಂಗಳ ಪರ್ಯಂತ ನಡೆಸಿ ಕೊಡುವ ವಚನ ದರ್ಶನ ಪ್ರವಚನದ ಜತೆಗೆ ಬಸವ ಪಂಚಮಿ, ರಕ್ಷಾ ಬಂಧನ, ಸ್ವಾತಂತ್ರ್ಯ ದಿನಾಚರಣೆ, ಸುದೈವಿ ಮಕ್ಕಳ ಜನ್ಮದಿನ ಸೇರಿದಂತೆ ವಿವಿಧ ಅರ್ಥಪೂರ್ಣ ಕಾರ್ಯಕ್ರಮಗಳು ಜರುಗಲಿವೆ.
>
> – ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

# ಶುಚಿ ಮನದಲ್ಲಿ ಪರಮಾತ್ಮ ದರ್ಶನ ಸಾಧ್ಯ




ಬೀದರ. ಜು. 22 : ಶುಚಿಗೊಂಡ ಮನದಲ್ಲಿ ಪರಮಾತ್ಮನ ದರ್ಶನ ಸಾಧ್ಯವಿದೆ ಎಂದು ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ಅಭಿಪ್ರಾಯಪಟ್ಟರು.

ಲಿಂಗಾಯತ ಮಹಾ ಮಠದ ವತಿಯಿಂದ ನಗರದ ಬಸವಗಿರಿಯಲ್ಲಿ ಸೋಮವಾರ ಆಯೋಜಿಸಿದ್ದ ಪ್ರಭುದೇವ ಸ್ವಾಮೀಜಿ ಅವರ 21 ದಿನಗಳ ಶಿವಯೋಗ ಸಾಧನೆ ಹಾಗೂ ಮೌನಅನುಷ್ಠಾನದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಪರಮಾತ್ಮನ ಒಲುಮೆಯಾಗಲು ಮನಸ್ಸೆಂಬ ಮನೆಯನ್ನು ಖಾಲಿ ಮಾಡಬೇಕು. ವಿಷಯಗಳನ್ನು ತ್ಯಜಿಸಬೇಕು ಎಂದು ತಿಳಿಸಿದರು.

ತನ್ನೊಳಗಿನ ಕಸ ಗುಡಿಸಿಕೊಳ್ಳಲು ಅನುಷ್ಠಾನ ಸಹಾಯಕ. ಅಂತರಂಗದ ವಿಕಾಸ ಮತ್ತು ಸಮಾಜ ಸೇವೆಗೆ ಹೆಚ್ಚು ಸದೃಢವಾಗಲು ಅನುಷ್ಠಾನ ಕೈಗೊಳ್ಳಲಾಗಿದೆ. ಗುರು ಕೃಪೆಯಿಂದ ಅನುಷ್ಠಾನ ಯಶಸ್ವಿಯಾಗಿದೆ ಎಂದು ಹೇಳಿದರು.

ವಚನಗಳಲ್ಲಿ ಎಲ್ಲದಕ್ಕೂ ಮಾರ್ಗದರ್ಶನ ಇದೆ. ಸಂಸಾರಿಗೆ ಆದರ್ಶ ಸಂಸಾರ, ಸಾಧಕರಿಗೆ ಸಾಧನೆ ಹಾಗೂ ಯೋಗಿಗಳಿಗೆ ಯೋಗದ ಮಾರ್ಗದರ್ಶನ ಇದೆ. ದೇಹಭಾವ ತೊರೆದು ಜೀವ ಭಾವ ತಳೆದಾಗ ಮಾತ್ರ ಭಕ್ತಿ ಅಳವಡುತ್ತದೆ. ಭಕ್ತಿ ಇಲ್ಲದೆ ಸತ್ಯ ಗೋಚರಿಸುವುದಿಲ್ಲ ಎಂದು ಹೇಳಿದರು.

ಸಾನಿಧ್ಯ ವಹಿಸಿದ್ದ ಭಾಲ್ಕಿ ಹಿರೇಮಠ ಸಂಸ್ಥಾನ ಗುರುಬಸವ ಪಟ್ಟದ್ದೇವರು ಮಾತನಾಡಿ, ಪ್ರಭುದೇವ ಸ್ವಾಮೀಜಿ ಅವರಲ್ಲಿ ಅದ್ಭುತ ಪ್ರತಿಭೆ ಇದೆ. ಕಿರಿಯ ವಯಸ್ಸಿನಲ್ಲೇ ಈ ಭಾಗದ ಅತ್ಯುತ್ತಮ ಪ್ರವಚನಕಾರರಲ್ಲಿ ಒಬ್ಬರಾಗಿ ಹೊರಹೊಮ್ಮಿದ್ದಾರೆ. ಸಮಾಜದಲ್ಲಿನ ಮೌಢ್ಯ, ಮೂಢನಂಬಿಕೆ, ಕಂದಾಚಾರಗಳನ್ನು ಕಳೆಯುತ್ತಿದ್ದಾರೆ ಎಂದು ತಿಳಿಸಿದರು.

ಅಕ್ಕ ಅನ್ನಪೂರ್ಣತಾಯಿ ಅವರಂತೆ ಸೇವೆಗೈಯುವ ಮೂಲಕ ಎತ್ತರಕ್ಕೆ ಏರಿದ್ದಾರೆ. ಜನಹಿತ ಮತ್ತು ಲೋಕ ಕಲ್ಯಾಣಕ್ಕೆ ಶ್ರೀಗಳ ಅನುಷ್ಠಾನ ಉಪಯೋಗವಾಗಲಿದೆ. ಬಹಿರಂಗಕ್ಕಿಂತ ಅಂತರಂಗದ ಶ್ರೀಮಂತಿಕೆಗೆ ಅವರು ಗಮನ ನೀಡುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಹುಲಸೂರಿನ ಶಿವಾನಂದ ಸ್ವಾಮೀಜಿ ಮಾತನಾಡಿ, ಅಕ್ಕ ಅನ್ನಪೂರ್ಣತಾಯಿ ಅವರು ಬಸವ ತತ್ವದ ಧ್ರುವತಾರೆಯಾಗಿ ಬೆಳಗಿದವರು. ಅವರ ಕರಕಮಲ ಸಂಜಾತರಾದ ಪ್ರಭುದೇವರು ಅದೇ ದಾರಿಯಲ್ಲಿ ಮುನ್ನಡೆಯುತ್ತಿದ್ದಾರೆ ಎಂದು ತಿಳಿಸಿದರು.

ಈಗಿನ ದಿನಮಾನಗಳಲ್ಲಿ ಲಿಂಗಾಂಗ ಸಾಮರಸ್ಯದತ್ತ ಮುಖ ಮಾಡುವವರು ಅಪರೂಪ. ಅದೇ ಆಧ್ಯಾತ್ಮದ ಕೊನೆ. ಅದರಿಂದ ಜಗತ್ತು ಬೆಳಗುವ ಶಕ್ತಿ ಲಭಿಸುತ್ತದೆ ಎಂದು ಹೇಳಿದರು.

ಬರುವ ಜಗಣತಿಯಲ್ಲಿ ಲಿಂಗಾಯತರು ಉಪಜಾತಿಗಳನ್ನು ಬರೆಸದೆ ಲಿಂಗಾಯತ ಎಂದೇ ಬರೆಸಬೇಕು.

ಲಿಂಗಾಯತ ಯಾವತ್ತೂ ಸ್ವತಂತ್ರ ಧರ್ಮ. ನಾವು ನಡೆಸುತ್ತಿರುವ ಹೋರಾಟ ಯಾರ ವಿರುದ್ಧವೂ ಅಲ್ಲ. ಲಿಂಗಾಯತ ಸ್ವತಂತ್ರ ಧರ್ಮ ಮಾನ್ಯತೆಗಾಗಿ ಮಾತ್ರ ಎಂದು ತಿಳಿಸಿದರು.

ಸಾಹಿತಿ ರಮೇಶ ಮಠಪತಿ ಮಾತನಾಡಿ, ಬಸವ ಧರ್ಮ ನಡೆ-ನುಡಿ ಸಿದ್ಧಾಂತದ ಧರ್ಮ. ನಡೆದು ತೋರಿಸಿದವರಿಗೆ ನುಡಿಯುವ ಹಕ್ಕು ಇರುತ್ತದೆ. ತನ್ನ ವಿಕಾಸದ ಮೂಲಕ ಸಮಾಜದ ವಿಕಾಸಕ್ಕಾಗಿ ನಾಲ್ಕನೇ ಸಲ ಅನುಷ್ಠಾನ ಕೈಗೊಳ್ಳುವ ಮೂಲಕ ಪ್ರಭುದೇವ ಸ್ವಾಮೀಜಿ ಮೇಲ್ಪಂಕ್ತಿ ಹಾಕಿದ್ದಾರೆ ಎಂದು ಹೇಳಿದರು.

ನಿವೃತ್ತ ಶಿಕ್ಷಕ ಬಾಬುರಾವ್ ರಾಜೋಳೆ ಗೋರಟಾ, ಯೋಗಗುರು ಲೋಕೇಶ, ಪರುಷಕಟ್ಟೆ ಚನ್ನಬಸವಣ್ಣ ಇದ್ದರು.

ಗುರುಶ್ರೀ, ಸಂತೋಷಿ, ಏಕನಾಥ ಸಂಗೀತ

ನಡೆಸಿಕೊಟ್ಟರು. ಗುರುದಾಸ್ ತಬಲಾ ಸಾಥ್ ನೀಡಿದರು. ಕಮಲಾಬಾಯಿ ಕಾರ್ತಿಕಸ್ವಾಮಿ ಭಕ್ತಿ ದಾಸೋಹಗೈದರು.

ಇದಕ್ಕೂ ಮುನ್ನ ಅನುಷ್ಠಾನದ ಗುಡಿಸಲಿನಲ್ಲಿ ಭಕ್ತಾದಿಗಳಿಂದ ಅಕ್ಕನ ಯೋಗಾಂಗ ತ್ರಿವಿಧಿಗಳ ಸಾಮೂಹಿಕ ಪಾರಾಯಣ ನಡೆಯಿತು. ಮಲ್ಲಿಕಾರ್ಜುನ ಔರಾದೆ

ಷ???ಸ್ಥಲಧ್ವಜಾರೋಹಣಗೈದರು. ಬಳಿಕ ಪ್ರಭುದೇವ ಸ್ವಾಮೀಜಿ ಅವರು ಅಕ್ಕನ ಐಕ್ಯಮಂಟಪದಲ್ಲಿ ಗುರು ದರ್ಶನ ಪಡೆದು, ಗುರುಬಸವ ಮಂತ್ರ ಹಾಗೂ ವಚನ

ಪಠಣಗೈದು ಮೌನಅನುಷ್ಠಾನ ಕೊನೆಗೊಳಿಸಿದರು. ಆಗ ನೆರೆದ ಶರಣ-ಶರಣೆಯರು ಬಸವ ಜಯಘೋಷ ಮೊಳಗಿಸಿದರು.

# ಪತ್ರಕರ್ತರ ರೈಲ್ವೆ ಪಾಸ್ ಸಂಪಾದಕರ ಸಂಘದ ಬೇಡಿಕೆಗೆ ರೈಲ್ವೆ ಇಲಾಖೆ ಸ್ಪಂದನೆ



ಬೀದರ್,ಜು.22 :ಮಾನ್ಯತಾ ಹೊಂದಿರುವ ಪತ್ರಕರ್ತರಿಗೆ ಈ ಹಿಂದೆ ನೀಡುತ್ತಿದ್ದ ರೈಲ್ವೆ ರಿಯಾಯಿತಿ ಪಾಸ್ ಮರು ಆರಂಭಿಸುವ ಬಗ್ಗೆ ನೀಡಿರುವ ನಮ್ಮ ಬೇಡಿಕೆಗೆ ರೈಲ್ವೆ ಇಲಾಖೆ ಸ್ಪಂದನೆ ಮಾಡಿದೆ ಎಂದು ಸಂಪಾದಕರ ಸಂಘದ ಅಧ್ಯಕ್ಷ ವಿಜಯಕುಮಾರ ಪಾಟೀಲ ತಿಳಿಸಿದ್ದಾರೆ.

ಕೋವಿಡ್ ಸಂದರ್ಭದಲ್ಲಿ ನಿಲ್ಲಿಸಲಾಗಿದ್ದ ಪತ್ರಪತ್ರಕರ್ತರ ರಿಯಾಯಿತಿ ರೈಲ್ವೆ ಪಾಸ್ ಪುನರಾರಂಭ ಗೊಳ್ಳದೆ ಇರುವುದು ಹಲವಾರು ವರ್ಷ ಕಳೆದಿದೆ ಇದೀಗ ಬೀದರ್ ಜಿಲ್ಲೆಯ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘ ಬೀದರ್ ಘಟಕದ ವತಿಯಿಂದ ಇತ್ತೀಚೆಗೆ ಬೀದರ್‌ಗೆ ಬಂದಿದ್ದ ರೈಲ್ವೆ ರಾಜ್ಯ ಸಚಿವರ ಗಮನಕ್ಕೆ ಈ ವಿಷಯ ತರಲಾಗಿತ್ತು ಎಂದಿದ್ದಾರೆ.

ರೈಲ್ವೆ ರಿಯಾಯಿತಿ ಪಾಸ್‌ನಿಂದ ಪತ್ರಕರ್ತರು ದೇಶಾದ್ಯಂತ ಓಡಾಡಲು ಅನುಕೂಲವಾಗಿತ್ತು ಅದು ಕೋವಿಡ ಸಂದರ್ಭದಲ್ಲಿ ಇತರ ರಿಯಾಯಿತಿ ಪಾಸ್ ಜೊತೆ ಪತ್ರಕರ್ತರ ಪಾಸ್ ಸಹ ನಿಲ್ಲಿಸಲಾಗಿತ್ತು . ಈ ವಿಷಯ ಮನಗಂಡಿರುವ ಸಂಘ ಬೀದರ್‌ಗೆ ಬಂದಿದ್ದ ರೈಲ್ವೆ ರಾಜ್ಯ ಸಚಿವರಾದ ಸನ್ಮಾನ್ಯ ಶ್ರೀ ಸೋಮಣ್ಣ ಅವರನ್ನು ಸಂಘದ ಅಧ್ಯಕ್ಷ ವಿಜಯಕುಮಾರ್ ಪಾಟೀಲ್ ನೇತೃತ್ವದಲ್ಲಿ ಅವರ ತಂಡ ಸಚಿವರಿಗೆ ಮನವಿ ಪತ್ರ ನೀಡಿ ದೇಶದಲ್ಲಿ ಬಂದಾಗಿರುವ ರೈಲ್ವೆಛಿಂಟಛಿಝುಂಟ ಪಾಸ್ ಮರು ಪ್ರಾರಂಭಗೊಳಿಸಿ ಪತ್ರಕರ್ತರಿಗೆ ಅನುಕೂಲ ಮಾಡಿಕೊಡಬೇಕೆಂದು ಮನವಿ ಪತ್ರ ನೀಡಲಾಗಿತ್ತು.

ಇಂದು ರೈಲ್ವೆ ಸಚಿವ ಸಚಿವಾಲಯದಿಂದ. ಸಚಿವರ ಪತ್ರ ಸಂಘದ ಜಿಲ್ಲಾ ಅಧ್ಯಕ್ಷ ವಿಜಯಕುಮಾರ್ ಪಾಟೀಲ್ ಅವರಿಗೆ ಇಂದು ತಲುಪಿದೆ. ಅದರಲ್ಲಿ ರಿಯಾಯಿತಿ ಪಾಸ್ ಮರು ಪ್ರಾರಂಭಿಸುವ ಬಗ್ಗೆ ತಾವು ಸಲ್ಲಿಸಿದ ಪತ್ರ ಸ್ವೀಕೃತಗೊಂಡಿದೆ.

ಈ ಸಂಬಂಧ ಪರಿಶೀಲನೆ ಹಾಗೂ ಅಗತ್ಯ ಕ್ರಮಕ್ಕಾಗಿ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸಚಿವಲಯದ ಪತ್ರದಲ್ಲಿ ತಿಳಿಸಲಾಗಿದೆ . ಹೀಗಾಗಿ ಸಚಿವರ ಈ ಕ್ರಮಕ್ಕೆ ನಮ್ಮ ಸಂಘ ಹೃತ್ಪೂರ್ವಕ ಧನ್ಯವಾದಗಳು. ತಿಳಿಸುತ್ತೇವೆ

ಕನಿಷ್ಠ ಪಕ್ಷ ರೈಲ್ವೆ ಇಲಾಖೆಯಲ್ಲಿ ಈಗ ನಮ್ಮ ಪತ್ರದ ಫೈಲ್ ರೆಡಿಯಾಗಿ ಮುಂದಿನ ಕ್ರಮ ಜರುಗುವ ಬಗ್ಗೆ ವಿಶ್ವಾಸ ಮೂಡಿದೆ ಹೀಗಾಗಿ ಸಚಿವರಿಗೆ ಬೀದರ್‌ನ ಎಲ್ಲಾ ಪತ್ರಕರ್ತರ ಪರವಾಗಿ ಮತ್ತೊಮ್ಮೆ ಧನ್ಯವಾದಗಳು ಹೇಳುವುದಾಗಿ ತಿಳಿಸಿದ್ದಾರೆ.

# ಮಾಸಿಕ ವಚನ ಮಂಟಪ ನಾಳೆ

ಬೀದರ. ಜು. 22 : ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ವತಿಯಿಂದ ಇಲ್ಲಿಯ ಗಾಂಧಿಗಂಜ ನಬಸವೇಶ್ವರ ದೇವಸ್ಥಾನದಲ್ಲಿ ಜುಲೈ 24 ರಂದು ಸಂಜೆ 6ಕ್ಕೆ ಐದನೇ ಮಾಸಿಕ ವಚನ ಮಂಟಪ ಹಾಗೂ ಬಸವ ಸಂಸ್ಕೃತಿ-ವಿಶ್ವ ಶ್ರೇಷ್ಠ ಸಂಸ್ಕೃತಿ ಕುರಿತ ಚಿಂತನ-ಮಂಥನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮಹಾಸಭಾದ ಕೇಂದ್ರ ಸಮಿತಿಯ ಹಿರಿಯ ಉಪಾಧ್ಯಕ್ಷ ಬಸವರಾಜ ಬುಳ್ಳಾ ಉದ್ಘಾಟಿಸುವರು. ಬಸವಕಲ್ಯಾಣದ ಬಸವ ಮಹಾಮನೆಯ ಜಗದ್ಗುರು ಸಿದ್ಧರಾಮೇಶ್ವರ ಸ್ವಾಮೀಜಿ ಸಾನಿಧ್ಯ, ಅನುಭವ ಮಂಟಪದ ಬಸವ ತತ್ವಪ್ರಚಾರಕ ಬಸವದೇವರು ಸಮ್ಮುಖ ವಹಿಸುವರು. ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಅಧ್ಯಕ್ಷತೆ ವಹಿಸುವರು. ಬಸವ ಸಂಸ್ಕೃತಿ ಕುರಿತು ಶಿಕ್ಷಕ ಡಾ. ಶಿವಲಿಂಗ ಹೇಡೆ ಅನುಭಾವ ಮಂಡಿಸುವರು. ಲಿಂಗಾಯತ ಸಮಾಜದ ಅಧ್ಯಕ್ಷ ಕುಶಾಲರಾವ್ ಪಾಟೀಲ ಖಾಜಾಪುರ, ಗಾನಯೋಗಿ ಪಂಚಾಕ್ಷರಿ ಗವಾಯಿ ಸೇವಾ ಸಂಘದ ಅಧ್ಯಕ್ಷ ಚಂದ್ರಶೇಖರ ಹೆಬ್ಬಾಳೆ, ನಿವೃತ್ತ ಎಂಜಿನಿಯರ್‌ಗಳಾದ ಶಿವರಾಜ ಮದಕಟ್ಟಿ, ಪ್ರಕಾಶ್ ಮಠಪತಿ, ಕರ್ನಾಟಕ ಜಾನಪದ ಪರಿಷತ್ ಅಧ್ಯಕ್ಷೆ ಮಲ್ಲಮ್ಮ ಸಂತಾಜಿ, ರೋಟರಿ ಕ್ಲಬ್ ಬೀದರ್ ಕ್ವೀನ್ಸ್ ಅಧ್ಯಕ್ಷೆ ಡಾ. ಸುಲೋಚನಾ ಪಾಟೀಲ, ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷೆ ಸುನೈನಾ ಗುತ್ತಿ, ಮಹಾಸಭಾ ಜಿಲ್ಲಾ ಮಹಿಳಾ ಘಟಕದ ಕೋಶಾಧ್ಯಕ್ಷೆ ನಿರ್ಮಲಾ ಮಸೂದಿ, ಕಾರ್ಯಕಾರಿಣಿ ಸದಸ್ಯೆ ಕರುಣಾ ಶೆಟಕಾರ್, ಲಾವಣ್ಯ ಹಂಗರಗಿ, ಸಾಹಿತಿ ಸುರೇಖಾ ಹಲಸೂರು ಪಾಲ್ಗೊಳ್ಳುವರು. ಚಿತ್ರಕಲಾವಿದ ಸಿ.ಬಿ. ಸೋಮಶೆಟ್ಟಿ ಅವರನ್ನು ಸತ್ಕರಿಸಲಾಗುವುದು. ವಚನ ವೈಭವ ಸಮಿತಿ ಅಧ್ಯಕ್ಷ ರೇವಣಪ್ಪ ಮೂಲಗೆ ಭಕ್ತಿ ದಾಸೋಹಿ ಆಗಿರುವರು.

ಕಾರ್ಯಕ್ರಮದಲ್ಲಿ ಬಸವಾನುಯಾಯಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಮನವಿ ಮಾಡಿದ್ದಾರೆ.

# ವಿಕಾಸ ರಂಗಕ್ಕೆ ಸಿದ್ಧಾರೂಢ ನೇಮಕ



ಬೀದರ. ಜು. 22 : ಕರ್ನಾಟಕ ವಿಕಾಸ ರಂಗದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿಯಾಗಿ ತಾಲ್ಲೂಕಿನ ಬಾವಗಿ ಗ್ರಾಮದ ಸಿದ್ಧಾರೂಢ ಭಾಲ್ಕೆ ಅವರನ್ನು ನೇಮಕ ಮಾಡಲಾಗಿದೆ.

ಸಂಘಟನೆಯ ಜಿಲ್ಲಾ ಘಟಕದ ಅಧ್ಯಕ್ಷ ಸಂಗಮೇಶ್ವರ ಬಿ.ಜ್ಯಾಂತೆ ಈ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಕೂಡಲೇ ಜವಾಬ್ದಾರಿ ವಹಿಸಿಕೊಂಡು ಕನ್ನಡ ಭಾಷೆ, ಸಾಹಿತ್ಯ, ಕಲೆ, ಸಂಸ್ಕೃತಿ ಬಲವರ್ಧನೆ, ನೆಲ-ಜಲದ ರಕ್ಷಣೆಗೆ ಶ್ರಮಿಸಬೇಕು ಎಂದು ಸೂಚಿಸಿದ್ದಾರೆ.

# ಬಾಗಲಕೋಟೆಯಲ್ಲಿ ಜು.25 ರಿಂದ ಪುರಾಣ ಪ್ರವಚನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.22–ನಗರದ ಬಿ.ವಿ.ವಿ.ಸಂಘದ ಶ್ರೀ ಕಣವಿ ವೀರಭದ್ರಶ್ವೇರ ಟ್ರಸ್ಟ್ ಹಾಗೂ ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದಿಂದ ಶ್ರಾವಣ ಮಾಸದ ಒಂದು ತಿಂಗಳು ಪುರಾಣ ಪ್ರವಚನ ನಗರದ ಚರಂತಿಮಠದ ಕಲ್ಯಾಣ ಮಂಟಪದಲ್ಲಿ ಜರುಗಲಿದೆ.

ಪೂಜ್ಯ ಅಲ್ಲೀಪುರ ಮಹಾದೇವ ತಾತನವರ ಪ್ರವಚಣ ನಡೆಯಲಿದ್ದು, ಒಂದು ತಿಂಗಳು ಕಾಲ ನಡೆಯಲಿದೆ. ಪ್ರವಚನ ನಿತ್ಯ ಸಾಯಂಕಾಲ 7 ಗಂಟೆಯಿಂದ 8–30 ರವರೆಗೆ ಜರುಗಲಿದೆ.

ಜು.25 ಶುಕ್ರವಾರ ಚರಂತಿಮಠದ ಪೂಜ್ಯರಾದ ಡಾ.ಪ್ರಭುಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಪ್ರವಚನ ಉದ್ಘಾಟನೆ ನಡೆಯಲಿದ್ದು, ಟೀಕಿನಮಠದ ಮಲ್ಲಿಕಾರ್ಜುನ ದೇವರು ಸಾನಿಧ್ಯ ವಹಿಸುವರು. ಅಧ್ಯಕ್ಷತೆಯನ್ನು ಬಿವಿವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ವಹಿಸುವರು.

ಖ್ಯಾತ ಪುರಾಣ ಪ್ರವಚನಕಾರರಾದ ಬೀಳಗಿ ಕಲ್ಮಠದ ಪೂಜ್ಯ ಗುರುಪಾದ ಶಿವಾಚಾರ್ಯರು ತಿಂಗಳ ಪರ್ಯಂತ ಪುರಾಣ ಪ್ರವಚಣ ಮಾಡುವರು. ಹಿಂದೂಸ್ತಾನಿ ಗಾಯಕ ಡಾ.ಸಿದ್ದರಾಮಯ್ಯ ಮಠಪತಿ, ತಬಲಾ ಕಲಾವಿದ ಡಾ.ರೇವಣಸಿದ್ದ ಬೆಣ್ಣೂರ, ಹಾರ್ಮೋನಿಯಂ ಕಲಾವಿದ ಡಾ.ಕಾಶಿಲಿಂಗಮಠ ಅವರುಗಳಿಂದ ಸಂಗೀತ ಸೇವೆ ಜರುಗಲಿದೆ.

ಶ್ರಾವಣ ಮಾಸದ ಪರ್ಯಂತ ಜರುಗುವ ಪುರಾಣ ಪ್ರವಚನಕ್ಕೆ ನಗರ ಹಾಗೂ ಸುತ್ತಮುತ್ತಲಿನ ಜನರು ಆಗಮಿಸಿ ಪುನಿರಾಗಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕರು ಹಾಗೂ ಬಿ.ವಿ.ವಿ.ಸಂಘ ಶ್ರೀ ಕಣವಿ ವೀರಭದ್ರೇಶ್ವರ ಟ್ರಸ್ಟಿನ ಕಾರ್ಯಾಧ್ಯಕ್ಷರು ಪತ್ರಿಕಾ ಪ್ರಕಟಣೆ ಮೂಲಕ ವಿನಂತಿಸಿದ್ದಾರೆ.

# ವೃತ್ತಿಪರ ತರಬೇತಿಯಿಂದ ಆತ್ಮವಿಶ್ವಾಸ: ಪವಿತ್ರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.22–ವಿದ್ಯಾರ್ಥಿಗಳು ಸಾಫ್ಟ್ ಸ್ಕಿಲ್ಸ ಹಾಗೂ ವೃತ್ತಿಪರ ತರಬೇತಿಗಳಲ್ಲಿ ಪಾಲ್ಗೊಳ್ಳುವುದರಿಂದ ಆತ್ಮವಿಶ್ವಾಸ ಹೆಚ್ಚುತ್ತದೆ ಎಂದು ಹೈದರಾಬಾದಿನ ನಾಂದಿ ಫೌಂಡೇಶನದ ತರಬೇತಿದಾರ ಪವಿತ್ರ ಎಲ್ ಹೇಳಿದರು.

ನಗರದ ಅಕ್ಕಮಹಾದೇವಿ ಮಹಿಳಾ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಐಕ್ಯೂಎಸಿ ಹಾಗೂ ವೃತ್ತಿ ಮಾರ್ಗದರ್ಶನ ಮತ್ತು ಉದ್ಯೋಗ ಘಟಕಗಳ ವತಿಯಿಂದ 6 ದಿನಗಳ ಔದ್ಯೋಗಿಕ ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅತ್ಯುತ್ತಮವಾದ ಹವ್ಯಾಸಗಳನ್ನು ವಿದ್ಯಾರ್ಥಿನಿಯರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಅಂದಾಗ ಮಾತ್ರ ಉನ್ನತ ಸ್ಥಾನವನ್ನು ಪಡೆಯಲು ಸಾಧ್ಯವಿದೆ. ಸಮಯ ಪಾಲನೆ, ಮಾನಸಿಕ ಒತ್ತಡ ನಿರ್ವಹಣೆ, ಸಂದರ್ಶನ ತಯಾರಿಗೆ ವೃತ್ತಿ ತರಬೇತಿಗಳು ಅಗತ್ಯವಾಗಿದ್ದು, ವಿದ್ಯಾರ್ಥಿಗಳು ಸಾಫ್ಟ್ ಸ್ಕಿಲ್ಸ ಹಾಗೂ ವೃತ್ತಿಪರ ತರಬೇತಿಗಳಲ್ಲಿ ಪಾಲ್ಗೊಂಡು ತಮ್ಮಲ್ಲಿ ಆತ್ಮವಿಶ್ವಾಸ ಹೆಚ್ಚಿಸಿಕೊಳ್ಳಬೇಕು ಎಂದು ಪವಿತ್ರ ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯೆ ಎಸ್.ಜೆ.ಒಡೆಯರ ಮಾತನಾಡಿ, ವಿದ್ಯಾರ್ಥಿಯರು ತಮ್ಮಲ್ಲಿ ಆತ್ಮ ವಿಶ್ವಾಸವನ್ನು ಬೆಳೆಸಿಕೊಳ್ಳುವುದರ ಜೊತೆಗೆ ಸ್ವಾವಲಂಬಿ ಜೀವನ ನಡೆಸಲು ಸಹಾಯಕವಾಗುವ ಕೌಶಲ್ಯಗಳನ್ನು ಅರಿತುಕೊಳ್ಳಬೇಕು ಎಂದರು. ಐಕ್ಯೂಎಸಿ ಸಂಯೋಜ–ಕರಾದ ಶ್ರೀಮತಿ ಪಿ.ಕೆ. ಚೌಗುಲಾ ಉಪಸ್ಥಿತರಿದ್ದರು.

ಸ್ಪಂದನ ಪತ್ತಾರ ಪ್ರಾರ್ಥಿಸಿದರು. ಉದ್ಯೋಗ ಘಟಕದ ಸಂಯೋಜಕರಾದ ಶ್ರೀಮತಿ ಶ್ರೀಲತಾ ಮುರಗೋಡು ಸ್ವಾಗತಿಸಿ ಪರಿಚಯಿಸಿದರು, ಸೀಮಾ ಚೌಸ ನಿರೂಪಿಸಿದರು.

# ಕನ್ನಡ ಶಾಲೆಗಳನ್ನು ಉಳಿಸಿ

## ನಮ್ಮ ಪರಂಪರೆ ಮತ್ತು ಸಂಸ್ಕೃತಿಯ ಅರಿವು ಮಾತೃ ಭಾಷೆಯಿಂದ ಬರುತ್ತದೆ: ಡಾ. ರಾಮಚಂದ್ರ ಗುತ್ತೇದಾರ

ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಜು, 22. ಸರ್ಕಾರಿ ಹಿರಿಯ ಮತ್ತು ಪ್ರೌಢ ಶಾಲೆಗಳಿಗೆ ಸಂಬಂಧಪಟ್ಟಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಮಾನ್ಯ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ರವರಿಗೆ ಮಾನ್ಯ ತಹಸೀಲ್ದಾರರು ಸೇಡಂ ರವರ ಮುಖಾಂತರ ಮನವಿ ಪತ್ರವನ್ನು ನೀಡಿ ಮಾತನಾಡಿದ

ಕರವೆ ತಾಲೂಕಾಧ್ಯಕ್ಷ ಡಾ. ರಾಮಚಂದ್ರಗುತ್ತೇದಾರ ನಮ್ಮ ಪರಂಪರೆ ಮತ್ತು ಸಂಸ್ಕೃತಿಯ ಅರಿವು ಮಾತೃ ಭಾಷೆಯಿಂದ ಬರುತ್ತದೆ ಸರ್ಕಾರಿ ಕನ್ನಡ ಮಾಧ್ಯಮ ಶಾಲೆಗಳನ್ನು ಅನಾಥ ಗೊಳಿಸಬೇಡಿ.

ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಸುಮಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರನ್ನು ತೆಲಂಗಾಣ, ಆಂಧ್ರ ಪ್ರದೇಶ, ಓಡಿಸ್ಸಾ, ರಾಜ್ಯಗಳ ಮಾದರಿಯಲ್ಲಿ ಸೇವಾ ಭದ್ರತೆಯನ್ನು ಕೊಡಬೇಕು.

ಬಡಮಕ್ಕಳಿಗೆ ದಾರಿದೀಪವಾಗಿರುವ ಆರ್. ಟಿ. ಈ. ಕಾಯ್ದೆಯನ್ನು ಪುನಃ ಜಾರಿಗೊಳಿಸಬೇಕು.

ತಾಲ್ಲೂಕಿನಲ್ಲಿ ಕೆಲವು ಹಳ್ಳಿಗಳಲ್ಲಿ ಸರ್ಕಾರಿ ಆಂಗ್ಲ ಮಾಧ್ಯಮ ಶಾಲೆ ಪ್ರಾರಂಭಿಸಿದ್ದು ಆ ಶಾಲೆಗೆ ಪ್ರತ್ಯೇಕ ಆಂಗ್ಲ ಮಾಧ್ಯಮದಲ್ಲಿ ಭೋಧನೆ ಮಾಡುವಂತಹ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಬೇಕು.

ಅತಿಥಿ ಶಿಕ್ಷಕರಿಗೆ ಪ್ರತಿ ತಿಂಗಳು ವೇತನವನ್ನು ನೀಡಬೇಕು.

ಗ್ರಾಮೀಣ ಪ್ರದೇಶಗಳಲ್ಲಿರುವ ಸರ್ಕಾರಿ ಕನ್ನಡ ಶಾಲೆಗಳಿಗೆ ಹೆಚ್ಚು ಮಹತ್ವ ನೀಡಿ ವಿಶೇಷ ಸೌಲಭ್ಯ ಗಳನ್ನು ಕೊಡಬೇಕು.

ಎಂದು ಮಾತನಾಡಿದರು ಈ ಸಂದರ್ಭದಲ್ಲಿ ಚಂದ್ರಶೇಖರ ಪೂಜಾರಿ, ಶ್ರೀ ನಿವಾಸ ರೆಡ್ಡಿ ಮದನಾ, ದೇವುಕುಮಾರ್ ನಾಟಿಕಾರ್, ಭೀಮಯ್ಯ ಗುತೆ–ದಾರ, ಗುಂಡಪ್ಪ ಪೂಜಾರಿ, ಪ್ರವೀಣ್ ಕೊಡ್ಲಾ, ಮುಕುಂದ ಬೋಂದೆಪಲ್ಲಿ, ಸಿದ್ದಲಿಂಗಪ್ಪ ಮದನಾ, ಚಂದ್ರಶೇಖರ ಮಡಿವಾಳ, ಮಹೇಶ ರೆಡ್ಡಿ ಜಾಕನಪಲ್ಲಿ, ರಾಜು ಗುತ್ತೇದಾರ ಕೊಡ್ಲಾ ಇನ್ನಿತರರು ಇದ್ದರು.

# ಬೀದಿನಾಟಕ, ಜಾನಪದ ಸಂಗೀತ ಕಾರ್ಯಕ್ರಮಕ್ಕೆ ಅರ್ಜಿ ಸಲ್ಲಿಸಲು ಜುಲೈ 24 ಕೊನೆಯ ದಿನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 21: ರಾಯಚೂರಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಸರ್ಕಾರದ ಯೋಜನೆಗಳು, ಸಾಧನೆಗಳ ಕುರಿತು ಬೀದಿ ನಾಟಕ, ಜಾನಪದ ಸಂಗೀತ ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಉದ್ದೇಶಿಸಲಾಗಿದ್ದು, ಇದಕ್ಕಾಗಿ ಬೀದಿನಾಟಕ, ಜಾನಪದ ಸಂಗೀತ ಕಲಾ ತಂಡಗಳನ್ನು ಆಯ್ಕೆ ಮಾಡಿಕೊಳ್ಳುವ ಸಂಬಂಧ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಜುಲೈ 24 ಕೊನೆಯ ದಿನವಾಗಿದೆ.

ರಾಯಚೂರು ಜಿಲ್ಲೆಯಿಂದ 3 ಬೀದಿನಾಟಕ ಹಾಗೂ 3 ಜಾನಪದ ಸಂಗೀತ ಕಲಾ ತಂಡಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು. ಪ್ರತಿ ಬೀದಿನಾಟಕ ತಂಡದಲ್ಲಿ 8 ಜನ ಕಲಾವಿದರಿದ್ದು, ಅದರಲ್ಲಿ ಕಡ್ಡಾಯವಾಗಿ ಇಬ್ಬರು ಮಹಿಳೆಯರು ಹಾಗೂ ಒಬ್ಬರು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಸೇರಿದ ಕಲಾವಿದರಿರಬೇಕು. ಪ್ರತಿ ಜಾನಪದ ಸಂಗೀತ ಕಲಾ ತಂಡದಲ್ಲಿ 3 ಜನ ಕಲಾವಿದರಿದ್ದು, ಅದರಲ್ಲಿ ಕಡ್ಡಾಯವಾಗಿ ಒಬ್ಬರು ಮಹಿಳೆಯರು ಹಾಗೂ ಒಬ್ಬರು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಸೇರಿದ ಕಲಾವಿದರಿರಬೇಕು. ಈ ಹಿಂದೆ ವಿವಿಧ ಇಲಾಖೆಗಳ ಜಾಗೃತಿ ಕಾರ್ಯಕ್ರಮಗಳನ್ನು ಮಾಡಿರುವ ಅನುಭವ ಹೊಂದಿರಬೇಕು. ಬೀದಿನಾಟಕ ತಂಡವು ನೋಂದಾಯಿತ ತಂಡವಾಗಿರಬೇಕು.

ನಿಗದಿತ ಅರ್ಜಿ ನಮೂನೆಯನ್ನು ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, 1 ನೇ ಮಹಡಿ, ಪತ್ರಿಕಾಭವನ, ರಂಗಮಂದಿರ ಹಿಂಭಾಗ, ರಾಯಚೂರು ಇವರಿಂದ ಉಚಿತವಾಗಿ ಪಡೆದು ಭರ್ತಿ ಮಾಡಿದ ಅರ್ಜಿಯೊಂದಿಗೆ ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ ಜುಲೈ 24ರ ಒಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಈ ಕಚೇರಿಯ ಲಿಂಗರಾಜ್ ಮೊಬೈಲ್ ಸಂಖ್ಯೆ: 9743892080, ಎ.ಪ್ರಕಾಶ್ ಮೊಬೈಲ್ ಸಂ–ಖ್ಯೆ: 9035063156ಗೆ ಸಂಪರ್ಕ ಮಾಡಬಹುದಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಸುಲೈಮಾನ್ ನದಾಫ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಮಾದಿಗ ದಂಡೋರ ವತಿಯಿಂದ ಹೋರಾಟ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಒಳ ಮೀಸಲಾತಿ ಜಾರಿಗೆ ತರುವಂತೆ ಒತ್ತಾಯಿಸಿ ರಾಜ್ಯ ಸರ್ಕಾರದ ವಿರುದ್ಧ ದಿನಾಂಕ ಆಗಸ್ಟ್ 18 ಕ್ಕೆ ಮಾದಿಗ ದಂಡೋರ ಒಖಕಖ ರಾಜ್ಯ ಅಧ್ಯಕ್ಷರಾದ ಬಿ.ನರಸಪ್ಪ ದಂಡೋರ ನಾಯಕತ್ವದಲ್ಲಿ ಪ್ರತಿಭಟನೆ ಮಾಡಲಾಗುವುದು ಎಂದು ಮಾದಿಗ ದಂಡೋರ ಹೋರಾಟ ಸಮಿತಿ ರಾಜ್ಯ ಉಪಾಧ್ಯಕ್ಷ ಗಣೇಶ್ ದುಪ್ಪಲ್ಲಿ ಹೇಳಿದರು.

ಮಂಗಳವಾರ ನಗರದ ಹಳೆ ಪ್ರವಾಸಿ ಮಂದಿರದಲ್ಲಿ ನಡೆದ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು,

ಬಹು ದಿನಗಳಿಂದ ನೆನೆಗುದಿಗೆ ಇರುವ ಒಳ ಮೀಸಲಾತಿ ಜಾರಿಗೆ ತರುವಂತೆ ರಾಜ್ಯ ಸರಕಾರದ ವಿರುದ್ಧ " ಮಾದಿಗರ ಮಹಾ ಯುದ್ಧ" ಎಂಬ ಹೋರಾಟವು ಆಗಸ್ಟ್ 18 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್ ನ ಮುಂದೆ ಹಮ್ಮಿಕೊಳ್ಳಲಾಗಿದೆ. ಈ ಹೋರಾಟಕ್ಕೆ ಸಂಸ್ಥಾಪಕ ಅಧ್ಯಕ್ಷ ಹಾಗೂ ಪದ್ಮಶ್ರೀ ಪುರಸ್ಕೃತ ಮಂದಕೃಷ್ಣ ಮಾದಿಗ ಅವರು ಭಾಗವಹಿಸಲಿದ್ದು,

ಸದರಿ ಹೋರಾಟವು ಸಮಾಜದ ಮೀಸಲಾತಿಗೆ ಬಹು ದಿನಗಳ ಬೇಡಿಕೆಯಾಗಿದ್ದು, ಈಗಾಗಲೇ ಸುಪ್ರೀಂ ಕೋರ್ಟ್ ತೀರ್ಪು ನೀಡಿದರು, ರಾಜ್ಯ ಸರಕಾರದಿಂದ ವಿಳಂಬ ನೀತಿ ಅನುಸರಿಸುತ್ತ ಬಂದು ನಮ್ಮ ಸಮಾಜಕ್ಕೆ ಘೋರ ಅನ್ಯಾಯ ಮಾಡುತ್ತಿದೆ, ಕಾರಣ ನಮ್ಮ ಹಕ್ಕು ಪಡೆಯಲು ಹೋರಾಟ ಅನಿವಾರ್ಯವಾಗಿದೆ ಸರಕಾರದ ದೋರಣೆಯನ್ನು ಸಹಿಸಲಾಗದ ಪರಿಸ್ಥಿತಿ ನಮ್ಮದಾಗಿದೆ ಎಂದರು.

ರಾಜ್ಯ ಕಾರ್ಯದರ್ಶಿ ಹಾಗೂ ಜಿಲ್ಲಾಧ್ಯಕ್ಷ ಕಾಶಪ್ಪ ಮಾದಿಗ ಹೆಗ್ಗಣಗೇರಾ ಮಾತನಾಡಿ ಈ ಒಂದು ಪ್ರತಿಭಟನೆಯಲ್ಲಿ ನಮ್ಮ ಸಮಾಜದ ಸಮಸ್ತ ಬಂಧುಗಳು ನಮ್ಮ ಹಕ್ಕುಗಳ ಪ್ರಯೋಜನಗಳನ್ನು ಪಡೆಯಲು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ವಿಜಯ ಕುಮಾರ ಕಡೇಚೂರು, ವಿಜಯ ಶಿರಗೋಳ್, ಜಿಲ್ಲಾ ಉಪಾಧ್ಯಕ್ಷ ಮಲ್ಲು ಬೆಳಗೇರಾ, ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ರಾಜು ಮೇತ್ರೆ ಕಡೇಚೂರು, ಗುರುಮಿಠಕಲ್ ತಾಲೂಕು ಅಧ್ಯಕ್ಷ ರವಿ ಬುರನೋರ್, ವಡಿಗೇರಾ ತಾಲೂಕು ಅಧ್ಯಕ್ಷ ಶರಣು, ಉಪಾಧ್ಯಕ್ಷ ತಿಪ್ಪಣ್ಣ, ಮಲ್ಲಪ್ಪಗೊಂದೇನೂರ್, ಶಾಮು ಕಾಳಬೆಳಗುಂದಿ, ಕಿರಣ್ ಸಂಗ್ವಾರ್, ಅಶೋಕ ಹಾಲಗೇರಾ, ಕಿರಣ್ ವಡಿಗೇರಾ, ಕುಮಾರ್ ತೆಳಗೇರಿ, ಶಾಂತಪ್ಪಮ್ಯಾಗೇರಿ ತುಮಕೂರ, ಮಲ್ಲು ಕುಮನೂರ್, ಬಾಲಪ್ಪ ಶಿವಪುರ, ಶಾಂತಪ್ಪ ಬೆಳಗುಂದಿ, ಮರೆಪ್ಪ, ಮರೀಲಿಂಗಪ್ಪಬೀಳ್, ದುರ್ಗಪ್ಪ, ಮರಿಲಿಂಗ ಹೊರುಂಚ, ಇನ್ನಿತರರು ಭಾಗವಹಿಸಿದ್ದರು.

# ನಗರದ ವಿವಿಧೆಡೆ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಭೇಟಿ, ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಜುಲೈ 22–: ನಗರದ ನಗರಸಭೆಯ ವ್ಯಾಪ್ತಿಯ ಘನತ್ಯಾಜ್ಯ ವಿಲೇವಾರಿ ಘಟಕ ಹಾಗೂ ಜಲಶುದ್ದೀಕರಣ ಕೇಂದ್ರಕ್ಕೆ ಜಿಲ್ಲಾಧಿಕಾರಿಗಳಾದ ಹರ್ಷಲ್ ಭೋಯರ್ ಅವರು ಮಂಗಳವಾರ ದಂದು ದಿಢೀರನೆ ಭೇಟಿ ನೀಡಿ ಪರಿಶೀಲಿಸಿದರು.

ಈ ವೇಳೆ ಜಿಲ್ಲಾಧಿಕಾರಿಗಳಾದ ಹರ್ಷಲ್ ಭೋಯರ್ ಅವರು ಮಾತನಾಡಿ, ಮಳೆಗಾಲ ಇರುವುದರಿಂದ ನಗರದಲ್ಲಿ ಕೊಳಚೆ ನೀರು ಸಂಗ್ರಹವಾದರೆ ಡೆಂಗ್ಯೂ ಹರಡುವ ಸಾಧ್ಯತೆ ಇರುತ್ತದೆ. ಹೀಗಾಗಿ ನಗರದಲ್ಲಿ ಕೊಳಚೆ ನೀರು ಸಂಗ್ರಹವಾಗದಂತೆ ನೋಡಿಕೊಳ್ಳಬೇಕು. ಮತ್ತು ಸಾರ್ವಜನಿಕರಿಗೆ ಡೆಂಗ್ಯೂ ಜ್ವರದ ಕುರಿತು ಜಾಗೃತಿ ಮೂಡಿಸಲು ಸೂಕ್ತ ಕ್ರಮವಹಿಸಬೇಕು. ನಗರದ ಎಲ್ಲಾ ವಾರ್ಡಗಳಲ್ಲಿ ಮನೆ ಮನೆ ಸಂಗ್ರಹಣೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸುವುದು. Blackspot ಗಳನ್ನು ಗುರುತಿಸಿ ತುರ್ತಾಗಿ ಕಸ ವಿಲೇವಾರಿ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಏಕ ಬಳಕೆ ಪ್ಲಾಸ್ಟಿಕ ನಿಷೇಧ ಕುರಿತು ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಬೇಕು. ಜೊತೆಗೆ ಸಣ್ಣ ವ್ಯಾಪಾರಿಗಳಿಗೆ ಪ್ಲಾಸ್ಟಿಕ್ ಬಳಸದಂತೆ ಜಾಗೃತಿ ಮೂಡಿಸಿ ಒಂದು ವೇಳೆ ಪ್ಲಾಸ್ಟಿಕ್ ಬಳಸುವುದು ಕಂಡು ಬಂದಲ್ಲಿ ದಾಳಿ ಮಾಡಿ ದಂಡ ವಿಧಿಸಬೇಕು. ಕುಡಿಯುವ ನೀರಿನ ಸ್ವಚ್ಛತೆಗೆ ಕಡೆಗೆ ವಿಶೇಷ ಗಮನಹರಿಸಿ ನಗರದ ಜನಗೆಗೆ ಶುದ್ದ ಕುಡಿಯುವ ನೀರನ್ನು ಪೂರೈಸಲು ಕ್ರಮವಹಿಸಬೇಕು. ಜಲಶುದ್ದೀಕರಣ ಘಟಕವನ್ನು ನಿಯತವಾಗಿ ಸ್ವಚ್ಛಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

# ವಿಶೇಷ ಚೇತನರಿಗೆ ಆತ್ಮಸ್ಥೈರ್ಯ ತುಂಬುವ ಕೆಲಸವಾಗಲಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ವಿಶೇಷ ಚೇತನರಲ್ಲಿರುವ ಆತ್ಮಶಕ್ತಿ ಅತ್ಯಂತ ಮಹತ್ವದ್ದಾಗಿದ್ದು, ಅದರಿಂದಲೇ ಅವರು ಸಮಾಜದಲ್ಲಿ ಅತ್ಯಂತ ಗೌರವದಿಂದ ಬದುಕುವಂತಾಗಿದೆ ಎಂದು ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಹೇಳಿದರು.

ಗುರುಮಠಕಲ್ ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಆರ್‌ಪಿಡಿ ಟಾಸ್ಕ್ ಫೋರ್ಸ್ ಸಮಿತಿ ಹಾಗೂ ಗ್ರಾಮೀಣ ಹಾಗೂ ನಗರ ಅಂಗವಿಕಲರ ಪುನರ್ವಸ್ಥಿತಿ ಕಾರ್ಯಕ್ರಮದ ಸಂಯುಕ್ತ ಆಶ್ರಯದಲ್ಲಿ ವಿಕಲಚೇತನ ವ್ಯಕ್ತಿಗಳ ಹಕ್ಕುಗಳ ಕಾಯ್ದೆ 2016 ಅರಿವು ವಿಕಲಚೇತನ ಹಾಕುತ್ತಾಯಿ ಸಮಾವೇಶ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಶೇಷ ಚೇತನರಿಗೆ ಅನುಕಂಪ ತೋರಿಸುವ ಬದಲು ಅವರಲ್ಲಿ ಆತ್ಮಸ್ಥೆರ್ಯ ತುಂಬುವ ಕೆಲಸವಾಗಬೇಕಿದೆ ಎಂದು ತಿಳಿಸಿದರು. ಅಂಗವೈಕಲ್ಯ ಶಾಪವಲ್ಲ. ಅದು ಆಕಸ್ಮಿಕವಾಗಿ ಹುಟ್ಟಿನಿಂದ ಬರುತ್ತದೆ. ವಿಶೇಷ ಚೇತನರಿಗೆ ಅನುಕಂಪ ತೋರಿಸುವ ಬದಲು ವಿಶ್ವಾಸ ಹಾಗೂ ಅತ್ಮಸ್ಥೈರ್ಯ ತುಂಬಿ ಇತರರಂತೆ ಬದುಕಲು ಅವಕಾಶ ನೀಡಬೇಕು ಎಂದರು.

ಗುರುಮಠಕಲ್ ಖಾಸಮಠದ ಶಾಂತವೀರ ಗುರು ಮುರುಘ ರಾಜೇಂದ್ರ ಮಹಾಸ್ವಾಮಿಜಿಗಳು, ಸಾನ್ನಿಧ್ಯವಹಿಸಿದ್ದರು.

ಆರ್ ಪಿ ಡಿ ಕಾಯ್ದೆ ಕುರಿತು ನಾಗಪ್ಪಜಿ ಅವಟಿ ಉಪನ್ಯಾಸ ನೀಡಿದರು.

ಎಲೇರಿಯ ವಿಕಲಚೇತನ ಸಂಘಕ್ಕೆ 150000 ಸಾವಿರ ಚೆಕ್ ವಿತರಣೆ ಮಾಡಲಾಯಿತು.

ಗುರುಮಠಕಲ್ ಅಧ್ಯಕ್ಷರಾದ ಸಿದ್ದನಗೌಡ ಪಾಟೀಲ್ ನಜರಾಪುರ್ ಉಪಾಧ್ಯಕ್ಷರಾದ ರೇಣುಕಾ ಪಡಿಗೆ, ಭಾರತಿ ದಂಡೋತಿ ತಹಸೀಲ್ದಾರ ಶಾಂತಗೌಡ ಬಿರಾದಾರ್, ಇಒ ಅಮರೇಶ್ ಪಾಟೀಲ್, ತಾಲೂಕು ವೈದ್ಯಾಧಿಕಾರಿ ಡಾಕ್ಟರ್ ಹನುಮಂತರೆಡ್ಡಿ ಎಪಿಡಿ ಸಂಸ್ಥೆ ಯಾದಗಿರಿ ವ್ಯವಸ್ಥಾಪಕರಾದ ಸಂಪ್ರಿತ ದೇವಪುತ್ರ ಸಂತೋಷ್ ನಿರೇಟಿ ತಾಲೂಕ ನೌಕರ ಸಂಘದ ಅಧ್ಯಕ್ಷರು ಗುರುಮಟ್ಕಲ್, ಉಮಾ ನಾಯಕ್ ಅಧ್ಯಕ್ಷರು ಆರ್ ಪಿ ಡಿ ಟಾಸ್ಕ್ ಫೋರ್ಸ್ ಯಾದಗಿರಿ ಸೇರಿದಂತೆ ಇತರರಿದ್ದರು.

# ನಗರದ ವಿವಿಧೆಡೆ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಭೇಟಿ, ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಜುಲೈ 22– ನಗರದ ನಗರಸಭೆಯ ವ್ಯಾಪ್ತಿಯ ಘನತ್ಯಾಜ್ಯ ವಿಲೇವಾರಿ ಘಟಕ ಹಾಗೂ ಜಲಶುದ್ದೀಕರಣ ಕೇಂದ್ರಕ್ಕೆ ಜಿಲ್ಲಾಧಿಕಾರಿಗಳಾದ ಹರ್ಷಲ್ ಭೋಯರ್ ಅವರು ಮಂಗಳವಾರ ದಂದು ದಿಢೀರನೆ ಭೇಟಿ ನೀಡಿ ಪರಿಶೀಲಿಸಿದರು.

ಈ ವೇಳೆ ಜಿಲ್ಲಾಧಿಕಾರಿಗಳಾದ ಹರ್ಷಲ್ ಭೋಯರ್ ಅವರು ಮಾತನಾಡಿ, ಮಳೆಗಾಲ ಇರುವುದರಿಂದ ನಗರದಲ್ಲಿ ಕೊಳಚೆ ನೀರು ಸಂಗ್ರಹವಾದರೆ ಡೆಂಗ್ಯೂ ಹರಡುವ ಸಾಧ್ಯತೆ ಇರುತ್ತದೆ. ಹೀಗಾಗಿ ನಗರದಲ್ಲಿ ಕೊಳಚೆ ನೀರು ಸಂಗ್ರಹವಾಗದಂತೆ ನೋಡಿಕೊಳ್ಳಬೇಕು. ಮತ್ತು ಸಾರ್ವಜನಿಕರಿಗೆ ಡೆಂಗ್ಯೂ ಜ್ವರದ ಕುರಿತು ಜಾಗೃತಿ ಮೂಡಿಸಲು ಸೂಕ್ತ ಕ್ರಮವಹಿಸಬೇಕು. ನಗರದ ಎಲ್ಲಾ ವಾರ್ಡಗಳಲ್ಲಿ ಮನೆ ಮನೆ ಸಂಗ್ರಹಣೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸುವುದು. ಃಟಚಿಛಿಞ ಶಿಠಿಣಗಳನ್ನು ಗುರುತಿಸಿ ತುರ್ತಾಗಿ ಕಸ ವಿಲೇವಾರಿ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಏಕ ಬಳಕೆ ಪ್ಲಾಸ್ಟಿಕ ನಿಷೇಧ ಕುರಿತು ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಬೇಕು. ಜೊತೆಗೆ ಸಣ್ಣ ವ್ಯಾಪಾರಿಗಳಿಗೆ ಪ್ಲಾಸ್ಟಿಕ್ ಬಳಸದಂತೆ ಜಾಗೃತಿ ಮೂಡಿಸಿ ಒಂದು ವೇಳೆ ಪ್ಲಾಸ್ಟಿಕ್ ಬಳಸುವುದು ಕಂಡು ಬಂದಲ್ಲಿ ದಾಳಿ ಮಾಡಿ ದಂಡ ವಿಧಿಸಬೇಕು. ಕುಡಿಯುವ ನೀರಿನ ಸ್ವಚ್ಛತೆಗೆ ಕಡೆಗೆ ವಿಶೇಷ ಗಮನಹರಿಸಿ ನಗರದ ಜನಗೆಗೆ ಶುದ್ದ ಕುಡಿಯುವ ನೀರನ್ನು ಪೂರೈಸಲು ಕ್ರಮವಹಿಸಬೇಕು. ಜಲಶುದ್ದೀಕರಣ ಘಟಕವನ್ನು ನಿಯತವಾಗಿ ಸ್ವಚ್ಛಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

# ಶಾಲಾ ಸಂಸತ್ ಮಕ್ಕಳಲ್ಲಿ ನಾಯಕತ್ವ ಗುಣ ಬೆಳೆಸುತ್ತದೆ : ಡಾ.ಸನಗಿನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.22–ಶಾಲೆಗಳಲ್ಲಿ ಶಾಲಾ ಸಂಸತ್ ರಚನೆಯು ಮಕ್ಕಳಲ್ಲಿ ನಾಯಕತ್ವ ಗುಣ ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹುಚ್ಚೇಶ್ವರ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಶಿಕ್ಷಣ ಹಾಗೂ ಗ್ರಾಮ ನಗರಾಭಿವೃದ್ಧಿ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಡಾ.ಟಿ.ಹೆಚ್.ಸನಗಿನ ಹೇಳಿದರು.

ತಾಲೂಕಿನ ಗದ್ದನಕೇರಿ ಗ್ರಾಮದ ಹುಚ್ಚೇಶ್ವರ ಪೂರ್ವ ಹಾಗೂ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಶಾಲಾ ಸಂಸತ್ ರಚನಾ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ನಿಂತಿರುವುದೇ ಮತದಾನದ ಮೇಲೆ. ನಮ್ಮ ರಾಷ್ಟ್ರದ ಆಡಳಿತ ಸರಿಯಾದ ರೀತಿಯಲ್ಲಿ ನಡೆಯಬೇಕಾದರೆ ಕಾಲಕಾಲಕ್ಕೆ ಚುನಾವಣೆಗಳು ನಡೆಯುತ್ತಿರಬೇಕು ಜವಾಬ್ದಾರಿಯುತ ನಾಯಕರನ್ನು ಆಯ್ಕೆ ಮಾಡುವುದು ಮತದಾರ ಪ್ರಭುಗಳ ಕೈಯಲ್ಲಿದೆ ಎಂದು ಹೇಳಿದರು. ಶಾಲಾ ಚುನಾವಣೆ ಪ್ರಕ್ರಿಯೆ ಮತ್ತು ಹಂತಗಳ ಕುರಿತು ಚುನಾವಣೆ ಮುಖ್ಯ ಅಧಿಕಾರಿಯಾಗಿ ಮುಖ್ಯಗುರುಮಾತೆ ಎಮ್.ಟಿ.ಸನಗಿನ ತಿಳಿಸಿದರು. ಶಾಲಾ ಕೊಠಡಿಗಳಲ್ಲಿ ಚುನಾವಣೆ ಬೂತ್ ನಿರ್ಮಾಣ ಮಾಡಿ ಮಕ್ಕಳನ್ನು ಪೋಲೀಸ್ ಹಾಗೂ ಆರ್ಮಿ ಸಿಬ್ಬಂಧಿಯನ್ನು ರಚನೆ ಮಾಡಿ ಎಲ್ಲ ಶಿಕ್ಷಕ ಸಿಬ್ಬಂಧಿ ವರ್ಗದವರನ್ನು ಪೋಲ್‌ಗಳ ಅಧಿಕಾರ ಹಾಗೂ ವಿವಿಧ ಅಧಿಕಾರ ನೀಡಿ ಚುನಾವಣೆಯನ್ನು ಯಶಸ್ವಿಗೊಳಿಸಲಾಯಿತು. ಮಕ್ಕಳಲ್ಲಿ ಚುನಾವಣೆ ಹಾಗೂ ಸಂಸತ್ ರಚನೆ ಕುರಿತು ಸಂಪೂರ್ಣ ಜ್ಞಾನ, ತಿಳುವಳಿಕೆ ನೀಡಲಾಯಿತು.

ಶಾಲಾ ಸಂಸತ್ತಿಗೆ ಪ್ರಧಾನಮಂತ್ರಿಯಾಗಿ ಪ್ರತಿಭಾ ಕುಂಬಾರ, ಉಪ ಪ್ರಧಾನಮಂತ್ರಿ ಪ್ರವೀಣ ಲೆಂಕೆಪ್ಪನವರ ಹಾಗೂ ಮಹಿಳಾ ಪ್ರತಿನಿಧಿ ಕವಿತಾ ಗಣಕುಮಾರಮಠ, ಶಿಕ್ಷಣ ಮಂತ್ರಿ ಜೋಶ್ಮಿತಾ ಕೊಪ್ಪಳ, ಕ್ರೀಡಾ ಮಂತ್ರಿ ಪ್ರದೀಪ ಪಾಟೀಲ, ಸಾಂಸ್ಕೃತಿಕ ಮಂತ್ರಿ ಲಕ್ಷ್ಮೀ ಕುಂಬಾರ, ಶಿಸ್ತು ಮಂತ್ರಿ ವೀಣಾ ಗಣಕುಮಾರಮಠ, ಹಣಕಾಸು ಮಂತ್ರಿ ಸುಸ್ಮಿತಾ ಬೂದಿಹಾಳ, ಆರೋಗ್ಯಮಂತ್ರಿ ಪ್ರೀತಮ ಗುರಿಕಾರ, ಪ್ರವಾಸಮಂತ್ರಿ ಐಶ್ವರ್ಯ ಹಿರೇಮಠ ಹೀಗೆ ಮಂತ್ರಿಮಂಡಲ ರಚಿಸಿ ಪ್ರಮಾಣ ವಚನ ಬೋಧಿಸಲಾಯಿತು. ಪ್ರತಿಯೊಂದು ಹುದ್ದೆಗೂ ಮಾರ್ಗದರ್ಶಕ ಶಿಕ್ಷರನ್ನು ಆಯ್ಕೆ ಮಾಡಲಾಯಿತು.

# ಸಿಂಧನೂರಲ್ಲಿ ಹೋಟೆಲ್ ಮಾಲೀಕರ ವಿರುದ್ಧ ಪ್ರಕರಣ ದಾಖಲು

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 22–ಜಿಲ್ಲಾ ಮಕ್ಕಳ ಸಹಾಯವಾಣಿಗೆ ಬಂದ ದೂರಿನನನ್ವಯ ಜುಲೈ 18 ರಂದು ಜಿಲ್ಲೆಯ ಸಿಂಧನೂರು ನಗರದ ಸಹನಾ ಆಸ್ಪತ್ರೆ ಎದುರುಗಡೆ ಇರುವ ಹೋಟೆಲ್ ಮೇಲೆ ಹಠಾತ್ ದಾಳಿ ನಡೆಸಿ ಬಾಲಕಾರ್ಮಿಕನನ್ನು ಕೆಲಸದಿಂದ ಬಿಡುಗಡೆಗೊಳಿಸಿ ಹೋಟೆಲ್ ಮಾಲೀಕರ ವಿರುದ್ಧ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ಹಾಗೂ ತಿದ್ದುಪಡಿ ಕಾಯ್ದೆ 2016ರಡಿ ಸಿಂಧನೂರು ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಬಾಲಕಾರ್ಮಿಕನ್ನು ಕೆಲಸದಿಂದ ಬಿಡುಗಡೆಗೊಳಿಸಿ 8ನೇ ತರಗತಿಗೆ ದಾಖಲು ಮಾಡಿ ಮಗುವನ್ನು ಪಾಲಕರ ವಶಕ್ಕೆ ಒಪ್ಪಿಸಲಾಗಿದೆ. ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥರೆಡ್ಡಿ, ಸಿಂಧನೂರು ಕಾರ್ಮಿಕ ನಿರೀಕ್ಷಕರಾದ ವಿಜಯಲಕ್ಷ್ಮೀ, ಸಿಂಧನೂರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಿಆರ್‌ಪಿ ಚನ್ನವೀರಗೌಡ ಅವರು ಕಾರ್ಯಾಚರಣೆಯಲ್ಲಿದ್ದರು.

ಸಾರ್ವಜನಿಕರಲ್ಲಿ ಮನವಿ: ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿ ಕಾಯ್ದೆ 2016 ರಂತೆ 14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಹಾಗೂ 15 ರಿಂದ 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದೆ. ಒಂದು ವೇಳೆ ದುಡಿಸಿಕೊಂಡಲ್ಲಿ 50,000 ರೂ.ದಂಡ ಹಾಗೂ 2 ವರ್ಷ ಜೈಲು ಶಿಕ್ಷೆ ಇರುತ್ತದೆ. ವಾಹನಗಳಲ್ಲಿ ಮಕ್ಕಳನ್ನು ಕೃಷಿ ಚಟುವಟಿಕೆಗಳಿಗಾಗಿ ಅಕ್ರಮ ಮತ್ತು ಕಾನೂನುಬಾಹಿರವಾಗಿ ಸಾಗಾಣಿಕೆ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದೆ.

ದುಡಿಯುವ ಮಕ್ಕಳು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ–1098 ಗೆ ಮಾಹಿತಿ ನೀಡಬಹುದಾಗಿದೆ ಎಂದು ಇದೆ ವೇಳೆ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಕೊರ್ಲಗುಂದಿ: ಜಿಲ್ಲಾ ಮಟ್ಟದ ಕಾಣೆಯಾದ ಮಕ್ಕಳ ಪತ್ತೆ ಕಾರ್ಯಪಡೆ ತಂಡದಿಂದ ಆಕಸ್ಮಿಕ ಭೇಟಿ, ಪರಿಶೀಲನೆ ಮತ್ತು ವಿವಿಧ ಕಾಯ್ದೆಗಳ ಜಾಗೃತಿ

# ಮಕ್ಕಳು ಶಾಲೆಗಳಿಂದ ಹೊರಗುಳಿಯದಿರಿ: ನ್ಯಾ.ರಾಜೇಶ್ ಎನ್.ಹೊಸಮನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.22–ಮಕ್ಕಳು ನಿರಂತರವಾಗಿ ಶಾಲೆಗೆ ಬರಬೇಕು. ತಮ್ಮ ಸಹಪಾಠಿಗಳನ್ನು ಸಹ ಶಾಲೆಗೆ ಕರೆದುಕೊಂಡು ಬರಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಹೇಳಿದರು.

ಅವರು,ಸೋಮವಾರದಂದು ಜಿಲ್ಲಾ ಮಟ್ಟದ ಕಾಣೆಯಾದ ಮಕ್ಕಳ ಪತ್ತೆಯ ಕಾರ್ಯಪಡೆ ತಂಡದ ಜೊತೆಗೂಡಿ ಬಳ್ಳಾರಿ ತಾಲ್ಲೂಕಿನ ಕೊರ್ಲಗುಂದಿ ಗ್ರಾಮದ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ಪರಿಶೀಲಿಸಿದ ಬಳಿಕ ಶಾಲಾ ಮಕ್ಕಳಿಗೆ ಹಮ್ಮಿಕೊಂಡಿದ್ದ ಮಕ್ಕಳ ರಕ್ಷಣೆ,ಬಾಲ್ಯವಿವಾಹ ತಡೆ ಮತ್ತು ಪೋಕ್ಸೋ ಕಾಯ್ದೆ'ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪ್ರಸ್ತುತ ದಿನಗಳಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳ ಮೇಲೆ ಲೈಂಗಿಕ ಕಿರುಕುಳ, ದೌರ್ಜನ್ಯ ಮತ್ತು ಮಾನಸಿಕ–ದೈಹಿಕ ಹಿಂಸೆ ನಡೆಯುತ್ತಿರುವ ಕುರಿತು ಮಾಧ್ಯಮಗಳಲ್ಲಿ ವರದಿಯಾಗುತ್ತಿರುವುದು ಕಂಡುಬರುತ್ತಿವೆ.

ಹಾಗಾಗಿ ಮಕ್ಕಳು ಶಾಲೆಯಿಂದ ಹೊರಗುಳಿಯಬಾರದು. ಪ್ರತಿದಿನ ಶಾಲೆಗೆ ಬರಬೇಕು. ಪೋಷಕರು ಸಹ ಮಕ್ಕಳನ್ನು ಶಾಲೆಗೆ ಕಳುಹಿಸಬೇಕು. ಈ ಕುರಿತು ಶಿಕ್ಷಕರು ನಿಗಾವಹಿಸಬೇಕು ಎಂದು ತಿಳಿಸಿದರು.




ಹಿರಿಯ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿ ಚಂದ್ರಕಾಂತ್ ನಂದಾರೆಡ್ಡಿ ಅವರು ಮಾತನಾಡಿ, ಶಾಲೆಯಿಂದ ಹೊರಗುಳಿದ ಮಕ್ಕಳು ಬಾಲ್ಯವಿವಾಹ, ಲೈಂಗಿಕ ದೌರ್ಜನ್ಯ, ಮಕ್ಕಳು ನಾಪತ್ತೆ, ಬಾಲಕಾರ್ಮಿಕಗಳಂತ ಪ್ರಕರಣಗಳು ಪೊಲೀಸ್ ಠಾಣೆಗಳಲ್ಲಿ ದೂರುಗಳು ದಾಖಲಾಗುತ್ತಿದ್ದು,ಮಕ್ಕಳು ಇಂತಹ ಸಂದರ್ಭದಲ್ಲಿ ಪೊಲೀಸ್ ತುರ್ತು ಸಹಾಯವಾಣಿ 112 ಹಾಗೂ ಮಕ್ಕಳ ಸಹಾಯವಾಣಿ 1098 ಗೆ ಸಂಪರ್ಕಿಸುವ ಮೂಲಕ ಸಹಾಯ ಪಡೆಯಬಹುದಾಗಿದೆ ಎಂದು ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ ಮಾತನಾಡಿ, ನಿಮ್ಮ ಸುತ್ತ–ಮುತ್ತ ಬಾಲ್ಯವಿವಾಹ, ಲೈಂಗಿಕ ದೌರ್ಜನ್ಯ, ಬಾಲಕಾರ್ಮಿಕ ಹಾಗೂ ಮಕ್ಕಳ ಹಕ್ಕುಗಳ ಉಲ್ಲಂಘನೆಯ ಪ್ರಕರಣಗಳು ಕಂಡು ಬಂದರೆ ತಕ್ಷಣ ಮಕ್ಕಳ ಸಹಾಯವಾಣಿ 1098/112 ಕರೆ ಮಾಡಿ ತಿಳಿಸಬೇಕು ಎಂದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಉಮಾದೇವಿ ಅವರು ಮಾತನಾಡಿ, ನಿರಂತರ ಗೈರು ಹಾಜರಾದ ಮಕ್ಕಳ ಮನೆ ಭೇಟಿ ನೀಡಿ ಪೋಷಕರ ಮನವೊಲಿಸಿ ಪುನಃ ಶಾಲೆಗೆ ಕರೆದುಕೊಂಡು ಬರಲು ಶಿಕ್ಷಣ ಇಲಾಖೆಯಿಂದ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ನಂತರ ತಂಡದ ಸದಸ್ಯರು ಕೊರ್ಲಗುಂದಿ ಗ್ರಾಮ ಪಂಚಾಯತ್‌ಗೆ ಆಕಸ್ಮಿಕ ಭೇಟಿ ನೀಡಿ ಮಕ್ಕಳಿಗೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದರು. ಮಹಿಳೆಯರ ಮತ್ತು ಮಕ್ಕಳು ಕಾವಲು ಸಮಿತಿಯ ಸಭೆಯನ್ನು ಪ್ರತಿ ತ್ರೈಮಾಸಿಕಕ್ಕೊಮ್ಮೆ ನಡೆಸಿ ಸಭೆಯ ನಡವಳಿಯನ್ನು ಮೇಲಾಧಿಕಾರಿಗಳಿಗೆ ಸಲ್ಲಿಸಲು ಸೂಚಿಸಿದರು. ಇದೇ ವೇಳೆ ಮಕ್ಕಳ ವಿಶೇಷ ಗ್ರಾಮಸಭೆ ಹಮ್ಮಿಕೊಂಡು ಶಾಲೆಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ತಿಳಿಸಿದರು.

ಕಾರ್ಯಕ್ರಮಕ್ಕೂ ಮುನ್ನ ಶಾಲೆಗೆ ದೀರ್ಘ ಗೈರುಹಾಜರಾದ ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳ ಕುರಿತು ಮಾಹಿತಿ ಪಡೆಯಲಾಯಿತು. ಈ ಕುರಿತು ಮಕ್ಕಳ ಮನೆಭೇಟಿ ನೀಡಿ ಪೋಷಕರ ಮನವೊಲಿಸಿ ಪುನಃ ಶಾಲೆಗೆ ಕರೆತರಲು ಶಾಲಾ ಶಿಕ್ಷಣ ಇಲಾಖೆಯ ಉಪ–ನಿರ್ದೇಶಕರಿಗೆ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಸೂಚನೆ ನೀಡಿದರು. ಈ ಕುರಿತು ಕ್ರಮ ಕೈಗೊಂಡ ವರದಿಯನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಸಲ್ಲಿಸುವಂತೆ ತಿಳಿಸಿದರು.

ನಂತರ ಶಾಲೆಯಲ್ಲಿದ್ದ ದೂರು ಪೆಟ್ಟಿಗೆಯನ್ನು ತೆರೆಯಲಾಗಿ ಅದರಲ್ಲಿ 3 ದೂರುಗಳು ಕಂಡುಬಂದಿದ್ದು, ಶಾಲೆಗೆ ಸಂಬಂಧಿಸಿದ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಮತ್ತು ಖಾಯಂ ಶಿಕ್ಷಕರ ನೇಮಕ ಮಾಡಲು ದೂರಿನಲ್ಲಿ ಕೋರಲಾಗಿತ್ತು. ಅದರನ್ವಯ ಈ ಕುರಿತು ಸಂಬಂಧಿಸಿದ ಇಲಾಖೆಯಿಂದ ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿದರು.

ಬಳಿಕ ಕೊರ್ಲಗುಂದಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಅಲ್ಲಿನ ಸೌಕರ್ಯ,ಒದಗಿಸುತ್ತಿರುವ ವೈದ್ಯಕೀಯ ಸೇವೆಗಳ ಕುರಿತು ಮಾಹಿತಿ ಪಡೆದುಕೊಂಡರು ಮತ್ತು ಕಿಶೋರಿಯರಿಗೆ ವೈಯಕ್ತಿಕ ಶುಚಿತ್ವ ಕುರಿತು ಅರಿವು ಮೂಡಿಸಲು ತಿಳಿಸಿದರು.

ಈ ಸಂದರ್ಭದಲ್ಲಿ ಮೋಕ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಕಾಳಿಂಗ, ಜಿಲ್ಲಾ ಬಾಲನ್ಯಾಯ ಮಂಡಳಿಯ ಸದಸ್ಯೆ ಪುಷ್ಪಲತಾ, ರೀಡ್ಸ್ ಸಂಸ್ಥೆಯ ನಿರ್ದೇಶಕ ತಿಪ್ಪೇಸ್ವಾಮಿ, ಶಿಕ್ಷಣ ಇಲಾಖೆಯ ಅಧಿಕಾರಿಗಳಾದ ವೇದಾವತಿ, ರವಿಚಂದ್ರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳಾದ ಸಿ.ಈಶ್ವರ ರಾವ್, ಚನ್ನಬಸಪ್ಪ ಪಾಟೀಲ್, ಸುಧಾ, ಪಿಎಚ್‌ಸಿ ವೈದ್ಯಾಧಿಕಾರಿ ನೋಶಿನ್, ಮಕ್ಕಳ ವಿಶೇಷ ಪೊಲೀಸ್ ಘಟಕದ ಅಧಿಕಾರಿ ಲಲಿತಮ್ಮ, ಶಾಲೆಯ ಮುಖ್ಯಗುರುಗಳಾದ ಭಾರತಿ, ರಮೇಶ್ ಮತ್ತು ಸಹಶಿಕ್ಷಕರು, ಸ್ವಯಂಸೇವಾ ಸಂಸ್ಥೆಗಳ ಸಿಬ್ಬಂದಿಗಳಾದ ಶಿಲ್ಪಾ, ಲಕ್ಷ್ಮೀ, ಬಸಮ್ಮ ಸೇರಿದಂತೆ ಗ್ರಾಮ ಪಂಚಾಯತ್ ಸಿಬ್ಬಂದಿ, ಎನ್‌ಆರ್‌ಎಲ್‌ಎಂ ಸಿಬ್ಬಂದಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಗ್ರಾಮೀಣ ಭಾಗದಲ್ಲಿ ಬಾಲ್ಯವಿವಾಹದ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ: ಪಿಡಿಒ ಮಲ್ಲಿಕಾರ್ಜುನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.22–ಗ್ರಾಮೀಣ ಭಾಗಗಳಲ್ಲಿ ಬಾಲ್ಯವಿವಾಹಗಳಿಗೆ ಪ್ರೋತ್ಸಾಹ ನೀಡುತ್ತಿರುವ ಪೋಷಕರಿಗೆ ಬಾಲ್ಯವಿವಾಹ ಕುರಿತು ಇನ್ನೂ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಬಾದನಹಟ್ಟಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮಲ್ಲಿಕಾರ್ಜುನ ಅವರು ಹೇಳಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ ಕೇಂದ್ರ, ಶಿಕ್ಷಣ ಇಲಾಖೆ ಹಾಗೂ ಬಾದನಹಟ್ಟಿ ಗ್ರಾಮ ಪಂಚಾಯತಿ ಇವರ ಸಹಯೋಗದಲ್ಲಿ ಕುರುಗೋಡು ತಾಲ್ಲೂಕಿನ ಬಾದನಹಟ್ಟಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಸೋಮವಾರ ಆಯೋಜಿಸಿದ್ದ “ಬಾಲ್ಯವಿವಾಹ, ಪೋಕ್ಸೋ ಕಾಯ್ದೆ ಮತ್ತು ಮೂಢ ನಂಬಿಕೆಗಳು ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆ” ಕುರಿತು ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಾದನಹಟ್ಟಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಹೆಚ್ಚು ಬಾಲ್ಯವಿವಾಹ ನಡೆಯುತ್ತಿರುವುದು ವಿಷಾದಕರ ಸಂಗತಿ. ಹದಿಹರೆಯದ ಮಕ್ಕಳ ಭವಿಷ್ಯ ರೂಪಿಸಲು ಬಾಲ್ಯವಿವಾಹಗಳನ್ನು ನೆರವೇರಿಸುತ್ತಿರುವ ವ್ಯಕ್ತಿಗಳ ಮೇಲೆ ತುರ್ತಾಗಿ ಕಾನೂನು ಕ್ರಮ ಜರುಗಿಸಬೇಕು. ಜನರಲ್ಲಿ ಕಾನೂನಿನ ಅರಿವು ಮೂಡಿಸಿ ಬಾಲ್ಯವಿವಾಹದ ಪಿಡುಗನ್ನು ಕೊನೆಗೊಳಿಸಲು ಪ್ರತಿಯೊಬ್ಬರು ಕೈ ಜೋಡಿಸಬೇಕು ಎಂದರು.



ಬಾದನಹಟ್ಟಿ ಸರ್ಕಾರಿ ಪ್ರೌಢಶಾಲೆಯ ಮುಖ್ಯಗುರುಗಳಾದ ನಿರ್ಮಲ ಅವರು ಮಾತನಾಡಿ, ಎಲ್ಲಾ ಮಕ್ಕಳು ಬಾಲ್ಯವಿವಾಹ ತಡೆಗೆ ಮುಂದಾಗಬೇಕು. ತಮ್ಮ ತಮ್ಮ ಪೋಷಕರಿಗೆ ಈ ಕುರಿತು ಅರಿವು ಮೂಡಿಸಬೇಕು. ಈ ಕುರಿತು ಯಾವುದೇ ವಿಧದಲ್ಲಿ ಭಯಪಡದೇ ಮಕ್ಕಳ ಸಹಾಯವಾಣಿ–1098 ಅಥವಾ ಪೊಲೀಸ್ ಸೇವೆ–112 ಗೆ ಕರೆ ಮಾಡಿ ಮಾಹಿತಿ ನೀಡುವ ಮೂಲಕ ನಮ್ಮ ಗ್ರಾಮವನ್ನು ಬಾಲ್ಯವಿವಾಹ ಮತ್ತು ಬಾಲಗರ್ಭಿಣಿ ಮುಕ್ತ ಗ್ರಾಮವಾಗಬೇಕು ಎಂದು ಕರೆ ನೀಡಿದರು.

ಮಕ್ಕಳ ಸಹಾಯವಾಣಿಯ ಜಿಲ್ಲಾ ಸಂಯೋಜಕ ಆನಂದ ಅವರು, ಬಾಲ್ಯವಿವಾಹಕ್ಕೆ ಒಳಪಟ್ಟ ಬಾಲಕಿಯರು ಅನುಭವಿಸುವ ಕಷ್ಟ, ಪೋಷಕರ ಮೇಲೆ ಕೈಗೊಳ್ಳಬಹುದಾದ ಕಾನೂನು ಕ್ರಮಗಳು ಹಾಗೂ ಪೋಕ್ಸೋ ಕಾಯ್ದೆಯು ಬಾಲ್ಯವಿವಾಹ ನಡೆದ ನಂತರ ಬಾಲಗರ್ಭಿಣಿಯ ಪ್ರಕರಣಗಳಲ್ಲಿ ಅನ್ವಯ ಹಾಗೂ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ನಡೆಸುವ ವ್ಯಕ್ತಿಗಳ ಮೇಲೆ ಕಠಿಣ ಕಾನೂನು ಕ್ರಮ ಕೈಗೊಳ್ಳಲು ಹೇಗೆ ಸಹಕಾರಿಯಾಗುತ್ತದೆ ಎಂಬುದರ ಬಗ್ಗೆ ವಿದ್ಯಾರ್ಥಿಗಳಿಗೆ ವಿವರವಾಗಿ ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರವಿಕುಮಾರ್ ಅವರು ಮಕ್ಕಳ ಶಿಕ್ಷಣದ ಮಹತ್ವ, ಮಕ್ಕಳ ನಿರಂತರ ಹಾಜರಾತಿ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ಮಕ್ಕಳ ಶಿಕ್ಷಣಕ್ಕೆ ನೆರವಾಗುವ ನಿಟ್ಟಿನಲ್ಲಿ ಒದಗಿಸುತ್ತಿರುವ ಸೇವೆ–ಸೌಲಭ್ಯಗಳ ಕುರಿತು ತಿಳಿಸಿಕೊಟ್ಟರು.

ಕಾರ್ಯಕ್ರಮಕ್ಕೂ ಮುನ್ನ ರೀಚ್ ಸಂಸ್ಥೆಯ ಸಂಯೋಜಕ ಹನುಮಂತ ಅವರು ಬಾಲ್ಯವಿವಾಹ ತಡೆ ಕುರಿತು ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಬಾದನಹಟ್ಟಿ ಪಂಚಾಯತ್ ಅಧ್ಯಕ್ಷರು , ಸದಸ್ಯರು ಹಾಗೂ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಬಳ್ಳಾರಿ: ಆದರ್ಶ ವಿದ್ಯಾಲಯಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.22–ನಗರದ ಹಿರಾಳ್‌ಕುಡಂನ ಸರ್ಕಾರಿ ಆದರ್ಶ ವಿದ್ಯಾಲಯಕ್ಕೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಸೋಮವಾರ ಭೇಟಿ ನೀಡಿ ಶಾಲೆಯ ಸ್ಥಿತಿ–ಗತಿ ಪರಿಶೀಲನೆ ನಡೆಸಿದರು.

ಶಾಲೆಯ 7, 9 ಮತ್ತು 10ನೇ ತರಗತಿಯಲ್ಲಿ ಮಕ್ಕಳ ಕಲಿಕಾ ಗುಣಮಟ್ಟವನ್ನು ಪರಿಶೀಲಿಸಿ ಮಾರ್ಗದರ್ಶನ ನೀಡಿದರು.

ಬಳಿಕ ಶಾಲೆಯ ಕಾಂಪೌಂಡ್ ಸಮಸ್ಯೆ ಹಾಗೂ ಇನ್ನಿತರ ಮೂಲಭೂತ ಸೌಕರ್ಯಗಳ ಕುರಿತು ಪರಿಶೀಲಿಸಿದರು. ಇದೇ ವೇಳೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ಪರಿಹಾರ ಕ್ರಮ ವಹಿಸುವಂತೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಗುರುಗಳಾದ ಸತ್ಯನಾರಾಯಣ ಸೇರಿದಂತೆ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು ಹಾಗೂ ಇತರರಿದ್ದರು.

# ಯುವಕ ನಾಪತ್ತೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.22–ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಲಬುರ್ಗಿ ಜಿಲ್ಲೆಯ ಚಿಂಚೋಳ್ಳಿ ತಾಲ್ಲೂಕಿನ ಸಲಗರ ಬಸಂತಪುರ ಗ್ರಾಮದ ಶಿವರಾಮ ನಾಯಕ ತಾಂಡದ ನಿವಾಸಿಯಾದ ರಾಹುಲ್ ಎನ್ನುವ 24 ವರ್ಷದ ಯುವಕ ಜು.17 ರಂದು ಕಾಣೆಯಾಗಿರುವ ಕುರಿತು ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಉಪ–ನಿರೀಕ್ಷಕರು ಮನವಿ ಮಾಡಿದ್ದಾರೆ.

ಚಹರೆ: 5.8 ಅಡಿ ಎತ್ತರ, ಕೋಲು ಮುಖ, ಗೋಧಿ ಮೈಬಣ್ಣ, ತೆಳ್ಳನೆಯ ಮೈಕಟ್ಟು, ಕಪ್ಪು ಕೂದಲು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಟೀ–ಶರ್ಟ್, ಕಪ್ಪು ಬಣ್ಣದ ನೈಟ್ ಪ್ಯಾಂಟ್ ಧರಿಸಿರುತ್ತಾನೆ. ಬಿಳಿಯ ಕನ್ನಡಕ ಹಾಕಿರುತ್ತಾನೆ. ಯುವಕ ಬಗ್ಗೆ ಸುಳಿವು ಸಿಕ್ಕಲ್ಲಿ ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆಯ ದೂ.08392–276063, ಮೊ.9480802131 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜು.30 ರಂದು ಅನುಪಯುಕ್ತ ವಸ್ತುಗಳ ಹರಾಜು ಪ್ರಕ್ರಿಯೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.22–ಕಂಪ್ಲಿ ಪಟ್ಟಣದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿರುವ ಅನುಪಯುಕ್ತ ವಸ್ತುಗಳು, ಪುಸ್ತಕಗಳು ಹಾಗೂ ಇತರೆ ಉಪಕರಣಗಳನ್ನು ಜುಲೈ 30 ರಂದು ಕಾಲೇಜಿನ ಆವರಣದಲ್ಲಿ ನಿಯಮಾನುಸಾರ ಹರಾಜು ಪ್ರಕ್ರಿಯೆ ನಡೆಸಲಾಗುವುದು ಎಂದು ಕಾಲೇಜಿನ ಪ್ರಾಚಾರ್ಯ ಠಾಕ್ರಾ ನಾಯ್ಕ್ ಅವರು ತಿಳಿಸಿದ್ದಾರೆ.

ಕಾಲೇಜಿನಲ್ಲಿರುವ ಅನುಪಯುಕ್ತ ವಸ್ತುಗಳಾದ ಕಂಪ್ಯೂಟರ್ಸ್, ಪ್ರಿಂಟರ್ಸ್, ಯುಪಿಎಸ್ ಮತ್ತು ಬ್ಯಾಟರಿಗಳು, ಪವರ್ ಸಪ್ಲೈ ಚಾನೆಲ್, ಡಿಜಿಟಲ್ ಮಲ್ಟಿಮೀಟರ್ಸ್, ಆರ್‌ಪಿಎಸ್ ಡ್ಯೂಯಲ್, ಆರ್‌ಪಿಎಸ್ ಸಿಂಗಲ್ ಚಾನೆಲ್ಸ್, ಅನಲಾಗ್ ವೋಲ್ಟ್‌ಮೀಟರ್ಸ್, ಅನಲಾಗ್ ಅಮ್ಮೀಟರ್ಸ್ ಸೇರಿದಂತೆ ಮುಂತಾದ ಉಪಕರಣಗಳನ್ನು ಹರಾಜು ಮಾಡಲಾಗುವುದು.

ಆಸಕ್ತಿಯುಳ್ಳ ಸಾರ್ವಜನಿಕರು ಪಾಲ್ಗೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.9845181482, 9731979865 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜು.25, 26 ರಂದು ಕಾರ್ಗಿಲ್ ವಿಜಯ ದಿವಸ್ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.22–ಜಿಲ್ಲೆಯ ಮಾಜಿ ಸೈನಿಕರು ಮತ್ತು ವೀರ ನಾರಿಯರ ಕಲ್ಯಾಣ ಸಮಿತಿ ವತಿಯಿಂದ ಕಾರ್ಗಿಲ್ ಯುದ್ಧದಲ್ಲಿ ದೇಶಕ್ಕಾಗಿ ಪ್ರಾಣ ಬಲಿಕೊಟ್ಟ ವೀರಯೋಧರ ಸ್ಮರಣೆ ಹಾಗೂ ಅವರಿಗೆ ಶ್ರದ್ಧಾಂಜಲಿಯನ್ನು ಅರ್ಪಿಸಲು 26 ನೇ ಕಾರ್ಗಿಲ್ ವಿಜಯ ದಿವಸ್ ದಿನಾಚರಣೆ–ಯ ಸಮಾರಂಭವನ್ನು ಜು.25 ಮತ್ತು 26 ರಂದು ನಗರದಲ್ಲಿ ಹಮ್ಮಿಕೊಳ್ಳಲಾಗಿದೆ.

ಜು.25 ರಂದು ಸಂಜೆ 06 ಗಂಟೆಗೆ ನಗರದ ಎಸ್‌ಪಿ ವೃತ್ತದಿಂದ ದುರ್ಗಮ್ಮ ಗುಡಿಯ ಮೂಲಕ ಎಸ್‌ಪಿ ಕಚೇರಿಯ ಮುಂಭಾಗದ ಅಮರ್ ಜವಾನ್ ಯುದ್ದ ಸ್ಮಾರಕದವರೆಗೆ ಮೇಣದ ಬತ್ತಿಯೊಂದಿಗೆ ಪಾದಯಾತ್ರೆ ನಡೆಸಿ, ಸ್ಮಾರಕಕ್ಕೆ ಶ್ರದ್ಧಾಂಜಲಿ ಅರ್ಪಿಸಲಾಗುವುದು.

ಜು.26 ರಂದು ಬೆಳಿಗ್ಗೆ 09 ಗಂಟೆಗೆ ಎಸ್‌ಪಿ ಕಚೇರಿಯ ಮುಂಭಾಗದ ಅಮರ್ ಜವಾನ್ ಯುದ್ಧ ಸ್ಮಾರಕಕ್ಕೆ ಗಣ್ಯರು, ಮಾಜಿ ಸೈನಿಕರು, ವೀರ ನಾರಿಯರು, ಅರೆಸೇನಾಪಡೆ ಹಾಗೂ ಸಾರ್ವಜನಿಕರಿಂದ ಪುಷ್ಪಗುಚ್ಛ ಮತ್ತು ಹೂವಿನ ಮಾಲಾರ್ಪಣೆ ಮಾಡಲಾಗುವುದು. ಸಾರ್ವಜನಿಕರು ಪಾಲ್ಗೊಳ್ಳಬಹುದು ಎಂದು ಪ್ರಕಟಣೆ ತಿಳಿಸಿದೆ.

# ಆ.22 ರಂದು ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.22–ಸಂಡೂರು ತಾಲ್ಲೂಕಿನ ನವುಲಟ್ಟಿ (ವಿಠ್ಠಲ ನಗರ) ಗ್ರಾಮದ “ನವುಲಟ್ಟಿ ಕಬ್ಬಿಣದ ಅದಿರಿನ ಗಣಿ ಬ್ಲಾಕ್–4” ರಲ್ಲಿ ಮೆ.ಆರ್.ಪ್ರವೀಣ್ ಚಂದ್ರ ಇವರು ವಾರ್ಷಿಕ 1,48,000 ಟನ್ ಉತ್ಪಾದನಾ ಸಾಮರ್ಥ್ಯ ಕಬ್ಬಿಣದ ಗಣಿಗಾರಿಕೆ ಯೋಜನೆಯನ್ನು ಒಟ್ಟು 40.04 ಹೆಕ್ಟೇರ್ ಹರಾಜು ಅರಣ್ಯ ಪ್ರದೇಶದಲ್ಲಿ ಕೈಗೊಳ್ಳಲು ಉದ್ದೇಶಿಸಿರುತ್ತಾರೆ. ಇದರ ಸಂಬಂಧ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರ ಅಧ್ಯಕ್ಷತೆಯಲ್ಲಿ ಆಗಸ್ಟ್ 22 ರಂದು ರಂದು ಬೆಳಿಗ್ಗೆ 11 ಗಂಟೆಗೆ ಸಂಡೂರು ತಾಲ್ಲೂಕಿನ ನವುಲಟ್ಟಿ (ವಿಠ್ಠಲ ನಗರ) ಗ್ರಾಮದ “ನವುಲಟ್ಟಿ ಕಬ್ಬಿಣದ ಅದಿರಿನ ಗಣಿ ಬ್ಲಾಕ್–4” ನ ಯೋಜನಾ ಸ್ಥಳದಲ್ಲಿ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸಲಾಗುವುದು.

ಇದಕ್ಕೆ ಸಂಬಂಧಿಸಿದಂತೆ ಉದ್ದೇಶಿತ ಯೋಜನೆಯ ಕಾರ್ಯ ನಿರ್ವಾಹಕ ಸಾರಾಂಶ ಪ್ರತಿಯನ್ನು ಸಾರ್ವಜನಿಕರ ಮಾಹಿತಿಗಾಗಿ ಸಂಬಂಧಿಸಿದ ಕಚೇರಿಗಳಲ್ಲಿ ಸಾರಾಂಶ ಪ್ರತಿಯನ್ನು ಸಾರ್ವಜನಿಕರ ಗಮನಕ್ಕೆ ಇಡಲಾಗಿದೆ.

ಸುತ್ತಮುತ್ತಲಿನ ಸಾರ್ವಜನಿಕರು ಸಭೆಯಲ್ಲಿ ಪಾಲ್ಗೊಂಡು ಅಭಿಪ್ರಾಯ, ಅಹವಾಲು ಸಲ್ಲಿಸಬಹುದು ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2ನೇ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆ ಸಲ್ಲಿಸಲು ಅವಕಾಶ

ಬಳ್ಳಾರಿ,ಜು.22–ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಆಯ್ಕೆಗಾಗಿ ಅಧಿಸೂಚನೆ ಹೊರಡಿಸಲಾಗಿದ್ದು, ಈಗಾಗಲೇ ತಾತ್ಕಾಲಿಕವಾಗಿ ಆಯ್ಕೆಗೊಂಡ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ 2ನೇ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಲಾಗಿದೆ. ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಬಹುದು.

ಆಯ್ಕೆಪಟ್ಟಿಯನ್ನು ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಮಹಾನಗರ ಪಾಲಿಕೆ, ನಗರಸಭೆ ಕಚೇರಿ, ಪಟ್ಟಣ ಪಂಚಾಯತ್, ಪುರಸಭೆ, ಗ್ರಾಮ ಪಂಚಾಯತಿ, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿ ಹಾಗೂ ಜಿಲ್ಲಾಧಿಕಾರಿಗಳ ಕಚೇರಿ ಸೂಚನಾ ಫಲಕಗಳಲ್ಲಿ ಪ್ರಕಟಿಸಲಾಗಿದೆ.

ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ಆಗಸ್ಟ್ 08 ರಂದು ಸಂಜೆ 5.30 ರೊಳಗಾಗಿ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗಳಿಗೆ ಸೂಕ್ತ ದಾಖಲೆಗಳೊಂದಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂ.08392–266219 ಗೆ ಸಂಪರ್ಕಿಸಬಹುದು ಎಂದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ ನಗರ ಜೆಸ್ಕಾಂ ವ್ಯಾಪ್ತಿಯಲ್ಲಿ ವಿವಿಧ ಸೇವೆಗಳಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.22–ಬೆಂಗಳೂರಿನ ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿಯ ಡೇಟಾ ಸೆಂಟರ್‌ನಲ್ಲಿ ಹಳೆಯ ಸ್ಟೋರೇಜ್ ವ್ಯವಸ್ಥೆ ಬದಲು ಹೊಸದಾಗಿ ಹೆಚ್ಚಿನ ಸಾಮರ್ಥ್ಯ ಸಂಗ್ರಹಣ ವ್ಯವಸ್ಥೆ ಅಳವಡಿಸುವ ಕಾರ್ಯ ಕೈಗೊಳ್ಳಲಾಗುತ್ತಿರುವುದರಿಂದ ಜು.25 ರ ಸಂಜೆ 8.30 ರಿಂದ ಜು.27 ರಂದು ರಾತ್ರಿ 10 ಗಂಟೆಯವರೆಗೆ ಬಳ್ಳಾರಿ ನಗರ ವ್ಯಾಪ್ತಿಯ ಐಪಿಡಿಎಸ್ ನ ನಗದು ಸೇವೆ, ಹೊಸ ವಿದ್ಯುತ್ ಸಂಪರ್ಕ ಸೇವೆ ಹಾಗೂ ಉಳಿದ ಎಲ್ಲಾ ಆನ್‌ಲೈನ್ ಮತ್ತು ಆಫ್‌ಲೈನ್ ಸೇವೆಗಳಲ್ಲಿ ತಾತ್ಕಾಲಿಕವಾಗಿ ವ್ಯತ್ಯಯವಾಗಲಿದೆ ಎಂದು ಬಳ್ಳಾರಿ ನಗರ ಜೆಸ್ಕಾಂನ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀಶೈಲನಗರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ಕಲಾ ಪ್ರತಿಭೆ ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಾಜ್ಯ ಬಾಲ ಭವನ ಸೊಸೈಟಿ ಬೆಂಗಳೂರು, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲ ಭವನ ಸಮಿತಿ ಕೊಪ್ಪಳ, ತಾಲೂಕು ಬಾಲ ಭವನ ಸಮಿತಿ ಕೊಪ್ಪಳ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಸಹಯೋಗದಲ್ಲಿ ಶನಿವಾರ ಕೊಪ್ಪಳದ ಶ್ರೀಶೈಲ್ ನಗರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ಕಲಾ ಪ್ರತಿಭೆ ಕಾರ್ಯಕ್ರಮ ನಡೆಯಿತು.

ಕೊಪ್ಪಳ ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೋಹಿಣಿ ಕೊಟಗಾರ ಅವರು ಕಾರ್ಯಕ್ರಮ ಉದ್ಘಾಟಿಸಿದರು.

ಕ್ಷೇತ್ರಶಿಕ್ಷಣಾಧಿಕಾರಿ ಹನುಮಂತಪ್ಪ ಅವರು ಮಾತನಾಡಿ, ಮಕ್ಕಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಮಕ್ಕಳಲ್ಲಿ ಮಾನಸಿಕ ಒತ್ತಡ ನಿವಾರಣೆಯಾಗುತ್ತದೆ. ಮಕ್ಕಳಿಗೆ ಇಂತಹ ಸ್ಪರ್ಧೆಗಳು ಉಪಯೋಗವಾಗಿದ್ದು, ಇಂತಹ ಸ್ಪರ್ಧೆಗಳಲ್ಲಿ ಮಕ್ಕಳು ಭಾಗವಹಿಸಬೇಕಾಗಿದೆ ಎಂದು ಮಕ್ಕಳಿಗೆ ಹೇಳಿದರು.

ಈ ಶಾಲೆಯ ಮುಖ್ಯೋಪಾಧ್ಯರು ಹಾಗೂ ಸಹ ಶಿಕ್ಷಕರು ವೃಂದದವರು ಮಕ್ಕಳ ಶ್ರೇಯಸ್ಸಿಗೆ ಉತ್ತಮ ರೀತಿಯಲ್ಲಿ ಕೆಲಸ ಮಾಡುತ್ತಿರುವುದರಿಂದ ಒಳ್ಳೆಯ ಪ್ರತಿಭೆಗಳು ಹೊರಹೊಮ್ಮಲು ಸಹಕಾರಿಯಾಗಿದೆ ಎಂದು ಸಂತೋಷ ವ್ಯಕ್ತಪಡಿಸಿದರು.

ಅಕ್ಷರದಾಸೋಹ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ ಅವರು ಮಾತನಾಡಿ, ಮಕ್ಕಳು ತಮ್ಮ ಕಲೆಯನ್ನು ಪ್ರದರ್ಶಿಸಲು ಇಂತಹ ಸ್ಪರ್ಧೆಗಳು ಅವಶ್ಯಕವಾಗಿವೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಶ್ರೀಶೈಲನಗರ ಸರಕಾರಿ ಹಿರಿಯ ಪ್ರಾಥಮಿಕ ಮುಖ್ಯೋಪಾಧ್ಯಯರಾದ ಬಾಲನಾಗಮ್ಮ ಅವರು ಮಾತನಾಡಿ ಮಕ್ಕಳಿಗೆ ಇಂತಹ ಕಾರ್ಯಕ್ರಮಗಳು ಮಕ್ಕಳಿಗೆ ಅವಶ್ಯಕವಾಗಿವೆ. ಮಕ್ಕಳು ತಮ್ಮ ಕಲೆಯನ್ನು ಪ್ರದರ್ಶಿಸಿಲು ಮಕ್ಕಳ ಕಲಾ ಪ್ರತಿಭೆ ಕಾರ್ಯಕ್ರಮ ಅನುಕೂಲವಾಗಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಿ.ಆರ್.ಸಿ ಸಮನ್ವಯ ಅಧಿಕಾರಿ ಸೈಯದ್ ಮೆಹಬೂಬ್ ಹುಸೇನ್, ಶಾಲೆಯ ಎಲ್ಲಾ ಸಹ ಶಿಕ್ಷಕರ ವೃಂದ ಹಾಗೂ ಶಾಲೆಯ ನೂರಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದರು.

ಈ ಕಾರ್ಯಕ್ರಮದಲ್ಲಿ ಬಕೇಟ ವಿತ್ ಬಾಲ್ ಸ್ಪರ್ಧೆ ಮತ್ತು ಸಮೂಹ ನೃತ್ಯ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ಮಕ್ಕಳಿಗೆ ಪ್ರಶಸ್ತಿ ಪತ್ರ ಹಾಗೂ ಬಹುಮಾನವನ್ನು ಗಣ್ಯರಿಂದ ವಿತರಿಸಲಾಯಿತು.

ಮುಸ್ತಫಾ ಅವರು ಕಾರ್ಯಕ್ರಮ ನಿರೂಪಿಸಿದರು. ಜಿಲ್ಲಾ ಬಾಲ ಭವನ ಕಾರ್ಯಕ್ರಮ ಸಂಯೋಜಕ ಮೆಹಬೂಬಸಾಬ ಇಲಾಹಿ ಅವರು ಸ್ವಾಗತ ಮತ್ತು ಪ್ರಾಸ್ತಾವಿಕವಾಗಿ ಮಾತನಾಡಿದರು. ಗಿರಿಜಾ ಅವರು ವಂದಿಸಿದರು.

# ತೋಟಗಾರಿಕೆ ತಂತ್ರಜ್ಞಾನ ಪಾರ್ಕ್‌ಗೆ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಭೇಟಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕನಕಗಿರಿ ತಾಲ್ಲೂಕಿನ ಸಿರಿವಾರ ಗ್ರಾಮದಲ್ಲಿ ನಿರ್ಮಾಣವಾಗುತ್ತಿರುವ ತೆ–ೂಟಗಾರಿಕೆ ತಂತ್ರಜ್ಞಾನ ಪಾರ್ಕ್‌ಗೆ ಕೊಪ್ಪಳ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಅವರು ಶನಿವಾರ ಭೇಟಿ ನೀಡಿದರು.

ತೋಟಗಾರಿಕೆ ತಂತ್ರಜ್ಞಾನ ಪಾರ್ಕ್ ರೂ.83.79 ಕೋಟಿಗಳ ಅಂದಾಜು ವೆಚ್ಚದಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವ ಮಾದರಿಯಡಿ ಸ್ಥಾಪನೆಯಾಗುತ್ತಿದ್ದು, ಇದರ ರೂಪರೇಷೆಗಳು, ಟೆಂಡರ್ ಪ್ರಕ್ರೀಯೆ ಮತ್ತು ಪಾರ್ಕ್‌ಗೆ ಸಂಬಂಧಿಸಿದ ಮೂಲ ಸೌಕರ್ಯಗಳ ಅಭಿವೃದ್ಧಿ ಸೇರಿದಂತೆ ಇತರೆ ವಿಷಯಗಳ ಕುರಿತು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿದರು.



ಈ ಸಂದರ್ಭದಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರುದ್ರೇಶಪ್ಪ ಟಿ.ಎಸ್., ಇ ಲ್ಯಾಂಡ್ ವೈ ಕಂಪನಿಯ ಅಧಿಕಾರಿ ಶಿವಪ್ರಕಾಶ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರಾದ ಕೃಷ್ಣ ಉಕ್ಕುಂದ, ಕನಕಗಿರಿ ತಹಶೀಲ್ದಾರ ವಿಶ್ವನಾಥ ಮುರಡಿ ಸೇರಿದಂತೆ ಇತರೆ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಇಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.22-ಜಿಲ್ಲೆಯ ನೀರಬೂದಿಹಾಳ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಯಲ್ಲಿ ಕಲಬಂದಕೇರಿ ಹಾಗೂ ಯಂಡಿಗೇರಿ ಇಐಪಿ ಮಾರ್ಗಗಳ ಲಿಂಕಲೈನ ಕಾಮಗಾರಿ ಕಾರ್ಯಕೈಗೊಳ್ಳುವ ಪ್ರಯುಕ್ತ ಜುಲೈ 23 ರಂದು ಬೆಳಿಗ್ಗೆ 10 ರಿಂದ ಸಾಯಂಕಾಲ 5 ಘಂಟೆಯ ವರೆಗೆ 110 ಕೆವ್ಹಿ ನೀರಬೂದಿಹಾಳ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜುವಾಗುವ ಎಫ್-01 ನೀರಬೂದಿಹಾಳ ಎನ್,ಜೆ,ವಾಯ್,ಎಫ್-3 ಅನವಾಲ ಐಪಿ, ಎಫ್-04 ಕಾಡರಕೊಪ್ಪ ಐಪಿ, ಹನಮನೇರಿ,ಡಬಡಬಿ 11 ಕೆವಿ ಮಾರ್ಗಗಳ ವ್ಯಾಪ್ತಿಯಲ್ಲಿ ಬರುವ ನಗರ, ಗ್ರಾಮ, ಕೃಷಿ ಪ್ರದೇಶಗಳ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು ಗ್ರಾಹಕರು ಸಹಕರಿಸಿಬೇಕು ಎಂದು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಎಣ್ಣೆಕಾಳು ಯೋಜನೆ

ಮಲ್ಲಮ್ಮ ನುಡಿ ವಾರ್ತೆ


ಬಾಗಲಕೋಟೆ,ಜು.22-ದೇಶದಲ್ಲಿ ಎಣ್ಣೆಕಾಳು ಬೆಳೆಗಳ ಕ್ಷೇತ್ರವನ್ನು ಹೆಚ್ಚಿಸುವ ಸಲುವಾಗಿ ಕೇಂದ್ರ ಸರ್ಕಾರ ಖಾದ್ಯ ತೈಲಗಳಲ್ಲಿ ಆತ್ಮನಿರ್ಭರ (ಸ್ವಾವಲಂಬನೆ) ಯೋಜನೆಯನ್ನು ರೂಪಿಸಿದೆ. ರಾಜ್ಯ,ಜಿಲ್ಲೆ ಮತ್ತು ಕ್ಷೇತ್ರ ಮಟ್ಟದಲ್ಲಿ ಎಣ್ಣೆಕಾಳು ಬೆಳೆಗಳ ಕ್ಷೇತ್ರ ವಿಸ್ತರಣೆ, ಅಧಿಕ ಇಳುವರಿ, ರೈತರ ಆದಾಯ ದ್ವಿಗುಣ ಮಾಡುವುದು ಮತ್ತು ಆಮದು ಅವಲಂಬನೆಯನ್ನು ಕಡಿಮೆ ಮಾಡಿ, ರಫ್ತು ಪ್ರಮಾಣವನ್ನು ಹೆಚ್ಚಿಸುವ ಸಲುವಾಗಿ 2024-25 ರಿಂದ 2030-31 ಗಳವರೆಗೆ ಯೋಜನೆಯನ್ನು ರೂಪಿಸಲಾಗಿದೆ.

ಜಿಲ್ಲೆಗೆ ನಿಗದಿಪಡಿಸಿರುವ ಎಣ್ಣೆಕಾಳು ಬೆಳೆಗಳಾದ ಸೂರ್ಯಕಾಂತಿ, ಸೋಯಾ ಅವರೆ ಮತ್ತು ಶೇಂಗಾ ಬೆಳೆಗಳ ಕ್ಷೇತ್ರ, ಉತ್ಪಾದನೆ ಮತ್ತು ಇಳುವರಿ ಹೆಚ್ಚಿಸುವುದು ಮುಖ್ಯ ಗುರಿಯಾಗಿರುತ್ತದೆ. 2025-26 ನೇ ಸಾಲಿನ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಎಣ್ಣೆಕಾಳು ಯೋಜನೆಯಡಿ ಕೋಯ್ಲಿನ ನಂತರದ ನಿರ್ವಹಣೆಯಲ್ಲಿ ರೈತರ ಸಾಮರ್ಥ್ಯವನ್ನು ನಿರ್ಮಿಸಲು ಪ್ರಥಮ ಹಾಗೂ ದ್ವಿತೀಯ ಎಣ್ಣೆಕಾಳು ಕೋಯ್ಲೋತ್ತರ ಮೂಲ ಸೌಕರ್ಯ ಸೌಲಭ್ಯ ಒದಗಿಸುವಂತೆ ಸ್ಥಳೀಯವಾಗಿ ಉದ್ಯೋಗಾವಕಾಶ ಕಲ್ಪಿಸಲು, ಎಣ್ಣೆಕಾಳು ಸಂಸ್ಕರಣ ಘಟಕಗಳಿಗೆ ಅವಶ್ಯವಿರುವ ಯಂತ್ರೋಪಕರಣಗಳನ್ನು ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳು, ರೈತ ಉತ್ಪಾದಕ ಸಂಘಗಳು ವಿಸ್ತೃತ ಯೋಜನಾ ವರದಿಯೊಂದಿಗೆ ಅರ್ಜಿ ಸಲ್ಲಿಸಬಹುದು. ಸದರಿ ಯೋಜನೆಯಡಿ ಯೋಜನಾ ವರದಿಯ ಶೇ. 33 ರಷ್ಟು ಅಥವಾ ರೂ.9.99 ಲಕ್ಷಕ್ಕೆ ಮೀರದಂತೆ ಸಹಾಯಧನ ಒದಗಿಸಲಾಗುವುದು.

ಈ ಘಟಕದಲ್ಲಿ ಕಟ್ಟಿದ ವೆಚ್ಚ ಹಾಗೂ ಭೂಮಿ ಬಾಡಿಗೆ ಪರಿಗಣಿಸಲಾಗುವುದಿಲ್ಲ.ತೈಲತೆಗೆಯುವ ಘಟಕಗಳಿಗೆ ಯಂತ್ರೋಪಕರಣಗಳು, ಸಲಕರಣೆಗಳು (10 ಟನ್ ಸಾಮರ್ಥ್ಯ) ಮತ್ತು ಎಣ್ಣೆಕಾಳುಗಳ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ಜಿಲ್ಲೆಗೆ ಗುರಿ ಹಂಚಿಕೆಯಾಗಿರುತ್ತದೆ. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸುವಂತೆ ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಎಸ್. ಕಳ್ಳೆನ್ನವರ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಕರ್ನಾಟಕ ನೀರಾವರಿ ನಿಗಮದ ನಿಯಮಿತ ಸಹಾಯಕ ಅಭಿಯಂತರ ಮೀಟರ್ ನಲ್ಲಿ ಪವರ್ ಇಲ್ಲ!

ಮಲ್ಲಮ್ಮ ನುಡಿ ವಾರ್ತೆ



ಕೊಪ್ಪಳ : ಕರ್ನಾಟಕ ನೀರಾವರಿ ನಿಗಮ ನಿಯಮಿತದ (ಏಓಓಐ) ಮುನಿರಾಬಾದ್ ಡ್ಯಾಂ ಪ್ರದೇಶದಲ್ಲಿರುವ ಕೆಲವೊಂದು ವಸತಿಗಳಲ್ಲಿ ಅನಧಿಕೃತವಾಗಿ ವಾಸಿಸುತ್ತಿರುವವರು ಲಕ್ಷಾಂತರ ರೂ.ಗಳಷ್ಟು ವಿದ್ಯುತ್ ಬಿಲ್ ಪಾವತಿಸದೆ ಬಾಕಿ ಉಳಿಸಿಕೊಂಡಿದ್ದಾರೆ. ಇದೀಗ ಈ ಬಾಕಿ ಮೊತ್ತ ಅಂದಾಜು ರೂ.28 ಲಕ್ಷದ ಗಡಿ ದಾಟಿದೆ ಎಂದು ಜೆಸ್ಕಾಂ ಅಧಿಕಾರಿಗಳು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಜಮಾವಣೆ ಮಾಡದ ವಿದ್ಯುತ್ ಬಿಲ್ಲುಗಳು ಮತ್ತು ಹತ್ತಾರು ಮೀಟರ್‌ಗಳು ನಿಗಮದ ಸಹಾಯಕ ಅಭಿಯಂತರರ ಹೆಸರಿನಲ್ಲಿ ಇರುವ ಕಾರಣ, ಜೆಸ್ಕಾಂ ತ್ವರಿತ ಕ್ರಮವಾಗಿ ಅಂದಾಜು 68 ವಿದ್ಯುತ್ ಮೀಟರ್‌ಗಳ ಸಂಪರ್ಕ ಕಡಿತ ಮಾಡಿದೆ. ಪರಿಣಾಮವಾಗಿ ಇವುಗಳಲ್ಲಿ ವಿದ್ಯುತ್ ಪೂರೈಕೆ ಸಂಪೂರ್ಣವಾಗಿ ನಿಲ್ಲಿಸಲಾಗಿದೆ.

ಇದರಿಂದಾಗಿ ನಿಗಮದ ವಸತಿಗಳಲ್ಲಿ ಕಾಳಜಿಹೀನವಾಗಿ ವಾಸಿಸುತ್ತಿರುವ ಅನಧಿಕೃತ ನಿವಾಸಿಗಳು ಕತ್ತಲೆಯಲ್ಲಿ ಕಾಲ ಕಳೆಯುವಂತಾಗಿದೆ. ಜನರ ಹಿತವನ್ನು ಪರಿಗಣಿಸಿ, ಸಮಸ್ಯೆಯನ್ನು ಬಗೆಹರಿಸಲು ಅರ್ಹ ಅಧಿಕಾರಿಗಳ ಹಸ್ತಕ್ಷೇಪ ಅಗತ್ಯವಾಗಿದೆ ಎಂಬ ಒತ್ತಾಯ ಉಂಟಾಗಿದೆ.

ಜೆಸ್ಕಾಂನ ಕಾರ್ಯಾಚರಣೆ ಬಗ್ಗೆ ಮಾತನಾಡಿದ ಅಧಿಕಾರಿಗಳು, "ಸರಕಾರದ ಇಲಾಖೆಯ ಹೆಸರಿನಲ್ಲಿ ದಾಖಲಾಗಿರುವ ಮೀಟರ್‌ಗಳ ಬಿಲ್ ಪಾವತಿ ನಿಯಮಿತವಾಗಿರಬೇಕು. ಬಾಕಿ ಬಿಲ್‌ಗಳನ್ನು ಪಾವತಿಸದ ಕಾರಣದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಇನ್ನು ಮುಂದೆ ಅಂತಹ ಅನಧಿಕೃತ ಬಳಕೆಗಳಿಗೆ ಮನ್ನಾ ಇರುವುದಿಲ್ಲ," ಎಂದು ಹೇಳಿದರು.

## ಉಚಿತ ಓದಿಗೆ ಪೂರಕವಾದ ಸಿವಿಸಿ ಫೌಂಡೇಶನ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಗುಣಮಟ್ಟದ ಶಿಕ್ಷಣ ಹಾಗೂ ಸಂಸ್ಕಾರಯುತ ಶಿಕ್ಷಣ ಕೊಪ್ಪಳ ಜಿಲ್ಲೆಯ ಕುಷ್ಟಗಿ ಪಟ್ಟಣದಲ್ಲಿರುವ ನಮ್ಮ ಶ್ರೀ ವಿಜಯ ಚಂದ್ರಶೇಖರ ಶಿಕ್ಷಣ ಸಂಸ್ಥೆಯ ಎರಡು ತತ್ವಗಳು ಪಠ್ಯ ಪುಸ್ತಕದಾಚೆಗಿನ ಓದು ಮಕ್ಕಳ ಜ್ಞಾನ ಹೆಚ್ಚಿಸುತ್ತದೆ. ಅವರನ್ನು ಜವಾಬ್ದಾರಿ ನಾಗರಿಕರನ್ನಾಗಿಸುತ್ತದೆ.

ಈ ನಿಟ್ಟಿನಲ್ಲಿ ಸಿವಿಸಿ ಫೌಂಡೇಶನ್, ಕೊಪ್ಪಳ, ಕಾಮರ್ಸ್ ವಿದ್ಯಾರ್ಥಿಗಳನ್ನು ಗಮನದಲ್ಲಿಟ್ಟುಕೊಂಡು ಪ್ರಕಟಣೆಗೊಳ್ಳುತ್ತಿರುವ ಏಕಮನಿ ವಾರಪತ್ರಿಕೆಯನ್ನು ಉಚಿತವಾಗಿ ವಿತರಿಸಲು ನಿರ್ಧರಿಸಿದೆ. ಪ್ರಥಮ ಸಂಚಿಕೆಯನ್ನು ಇಂದು ನಡೆದ ಸರಳ ಸಮಾರಂಭದಲ್ಲಿ ಸಾಂಕೇತಿಕವಾಗಿ ವಿದ್ಯಾರ್ಥಿಗಳಿಗೆ ವಿತರಿಸಲಾಯಿತು.

ಈ ಯೋಜನೆಯ ಉದ್ದೇಶಗಳು ಹಾಗೂ ಉಪಯುಕ್ತತೆಯನ್ನು ಕುರಿತು ನಮ್ಮ ಸಂಸ್ಥೆಯ ಸಿಇಒ ಡಾ. ಜಗದೀಶ್ ಅಂಗಡಿ ಮಾತನಾಡಿದರು. ಪ್ರಾಂಶುಪಾಲರಾದ ಭೀಮಸೇನಾಚಾರ್ಯ ಹಾಗೂ ಮುಖ್ಯ ಹಣಕಾಸು ಅಧಿಕಾರಿಯಾದ ಅರುಣ್ ಕರ್ಮಾಕರ್ ವಿದ್ಯಾರ್ಥಿಗಳಿಗೆ ಪತ್ರಿಕೆಗಳ ಓದಿನ ಅಗತ್ಯತೆ ಕುರಿತು ತಿಳಿಸಿದರು. ಉಪನ್ಯಾಸಕರಾದ ಸುರೇಶ್ ಕಂಚಿ, ಪವಿತ್ರ ಸೊಪ್ಪಿಮಠ ಹಾಗೂ ಗ್ರಂಥಪಾಲಕರಾದ ಗೀತಾಂಜಲಿ ಉಪಸ್ಥಿತರಿದ್ದರು. ಮುಂದಿನ ದಿನಗಳಲ್ಲಿ ಮಕ್ಕಳಲ್ಲಿ ಸಂಸ್ಕಾರ ಹಾಗೂ ತಿಳುವಳಿಕೆಯನ್ನು ಹೆಚ್ಚಿಸಲು ಅನೇಕ ಉಪಕ್ರಮಗಳನ್ನು ಜಾರಿಗೊಳಿಸಲಾಗುತ್ತಿದೆ.

## ಅಧ್ಯಾಪಕರಿಗೆ ವೃತ್ತಿ ತರಬೇತಿ ಅಗತ್ಯ-ಮೂಗನೂರಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.22-ಅಧ್ಯಾಪಕರ ವೃತ್ತಿಪರ ಬೆಳವಣಿಗೆ ಹಾಗೂ ವಿದ್ಯಾರ್ಥಿಗಳ ಕಲಿಕಾ ಅನುಭವವನ್ನು ಸುಧಾರಿಸಲು ಅಧ್ಯಾಪಕರಿಗೆ ವೃತ್ತಿ ತರಬೇತಿ ಅಗತ್ಯವಾಗಿದೆ ಎಂದು ಬಸವೇಶ್ವರ ಕಲಾ ಮಹಾವಿದ್ಯಾಲಯ ಪ್ರಾಚಾರ್ಯ ಡಾ.ಎಸ್.ಆರ್. ಮುಗನೂರಮಠ ಹೇಳಿದರು.

ನಗರದ ಬಿವಿವಿ ಸಂಘದ ಬಸವೇಶ್ವ ವಿಜ್ಞಾನ ಮಹಾವಿದ್ಯಾಲಯದಲ್ಲಿ ಹಳೆಯ ವಿದ್ಯಾರ್ಥಿಗಳ ಸಂಘ ಹಾಗೂ ಐಕ್ಯೂಎಸಿ ಅಡಿಯಲ್ಲಿ ಅಧ್ಯಾಪಕರಿಗಾಗಿ ಹಮ್ಮಿಕೊಳ್ಳಲಾಗಿರುವ ಒಂದು ವಾರದ ಅಧ್ಯಾಪಕರ ಅಭಿವೃದ್ಧಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಅಧ್ಯಾಪಕರ ಅಭಿವೃದ್ಧಿ ಕಾರ್ಯಾಗಾರ ಎಂದರೆ ಅಧ್ಯಾಪಕರಿಗೆ ಹೊಸ ಬೋಧನಾ ವಿಧಾನಗಳು, ತಂತ್ರಜ್ಞಾನಗಳು ಮತ್ತು ವಿಷಯಗಳ ಬಗ್ಗೆ ತರಬೇತಿ ನೀಡುವ ಒಂದು ಕಾರ್ಯಕ್ರಮ. ಇದು ಅಧ್ಯಾಪಕರ ವೃತ್ತಿಪರ ಬೆಳವಣಿಗೆಗೆ ಮತ್ತು ವಿದ್ಯಾರ್ಥಿಗಳ ಕಲಿಕಾ ಅನುಭವವನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಈ ಕಾರ್ಯಾಗಾರಗಳು ಅಧ್ಯಾಪಕರಿಗೆ ಹೊಸ ಬೋಧನಾ ತಂತ್ರಗಳು, ತರಗತಿ ನಿರ್ವಹಣೆ, ಮೌಲ್ಯಮಾಪನ ಮತ್ತು ಸಂಶೋಧನಾ ಕೌಶಲ್ಯಗಳನ್ನು ಕಲಿಸುತ್ತವೆ ಎಂದು ಮೂಗನೂರಮಠ ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಎಸ್.ಆರ್.ಸಬರದ ಮಾತನಾಡಿ, ಹೆಚ್ಚುವರಿಯಾಗಿ ಇಂತಹ ಕಾರ್ಯಾಗಾರಗಳು ಶಿಕ್ಷಕರಿಗೆ ವೃತ್ತಿಪರ ನೆಟ್‌ವರ್ಕಿಂಗ್ ಅವಕಾಶಗಳನ್ನು ಒದಗಿಸುತ್ತವೆ, ಅಲ್ಲಿ ಅವರು ಇತರ ಶಿಕ್ಷಕರೊಂದಿಗೆ ಅನುಭವಗಳನ್ನು ಹಂಚಿಕೊಳ್ಳಬಹುದು ಮತ್ತು ಪರಸ್ಪರ ಕಲಿಯಬಹುದು. ಇವುಗಳು ಅಧ್ಯಾಪಕರ ವೃತ್ತಿಪರ ಬೆಳವಣಿಗೆಗೆ ಬಹಳ ಮುಖ್ಯವಾಗಿದೆ, 6 ದಿನಗಳ ಕಾಲ ನಡೆಯುವ ಈ ಕಾರ್ಯಾಗಾರದ ಸದುಪಯೊಗಪಡೆದುಕೊಳ್ಳಿ ಎಂದರು.

ಹಳೆಯ ವಿದ್ಯಾರ್ಥಿ ಸಂಘದ ಖಜಾಂಚಿ ಎಸ್.ಜಿ.ಹುಣಶಿಕಾಯಿ, ನ್ಯಾಕ ಮೌಲ್ಯಮಾಪನದ ತಯಾರಿ ಹಾಗೂ ಪಡೆದ ಅಂಕಗಳ ಕುರಿತು ಮಾತನಾಡಿದರು. ಐಕ್ಯೂಎಸಿ ಸಂಯೋಜಿಕಿ ಡಾ.ಡಿ.ಎಸ್.ಲಮಾಣಿ, ಸಿಬ್ಬಂದಿ ಕಾರ್ಯದರ್ಶಿ ಡಾ.ಎ.ಎಮ್,ಸತ್ಯನಾಯಕ ವೇದಿಕೆಯಲ್ಲಿದ್ದರು.

ಕಾರ್ಯಕ್ರಮ ಸಂಯೋಜಕ ಪ್ರೊ. ಹುಶೇನಪ್ಪ ವಿ, ಸ್ವಾಗತಿಸಿದರು, ಲೇಶಪ್ಪ ಶಿರೋಳ ನಿರೂಪಿಸಿದರು, ಡಾ.ಬಿ.ಎ.ಖೋತ ವಂದಿಸಿದರು.

## ವಿಜೃಂಭಣೆಯ ಮರಗಮ್ಮದೇವಿ ಜಾತ್ರೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.22-ನವನಗರ ಸೆಕ್ಟರ್ ನಂ.29ರಲ್ಲಿರುವ ಗೌಳಿ ಸಮಾಜದ ಮರಗಮ್ಮದೇವಿ ಜಾತ್ರಾ ಮಹೋತ್ಸವ ಮಂಗಳವಾರ ಅದ್ದೂರಿಯಾಗಿ ಜರುಗಿತು.

ಜಾತ್ರಾಮಹೋತ್ಸವದ ಅಂಗವಾಗಿ ದೇವಾಲಯದಲ್ಲಿ ವಿಶಿಷ್ಟ ಪೂಜಾ ಕೈಂಕರ್ಯಗಳು ನಡೆದವು. ಕುಂಭಪೂಜೆ, ಹೋಮ ಹಾಗೂ ಮರಗಮ್ಮದೇವಿಗೆ ವಿಶೇಷ ಅಲಂಕಾರ ಪೂಜೆ ನೆರವೇರಿಸಲಾಯಿತು. ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮವು ನಡೆಯಿತು.



ವಿಧಾನ ಪರಿಷತ್ ಸದಸ್ಯ ಪಿ.ಎಚ್. ಪೂಜಾರ, ಬಸವೇಶ್ವರ ಬ್ಯಾಂಕ್ ಅಧ್ಯಕ್ಷ ಪ್ರಕಾಶ ತಪಶೆಟ್ಟಿ, ಹಿರಿಯ ನ್ಯಾಯವಾದಿ ರಸೂಲ ಪೆಂಡಾರ, ನಾಗರಾಜ ಹದ್ಲಿ, ಡಾ.ಶೇಖರ ಮಾನೆ ಅವರುಗಳು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಇದೇ ವೇಳೆ ಗೌಳಿ ಸಮಾಜದ ವತಿಯಿಂದ ಪದ್ಮಶ್ರೀ ಪುರಸ್ಕೃತ ಡಾ.ವೆಂಕಪ್ಪ ಸುಗತೇಕರ ಹಾಗೂ ಕುಸುಮಾ ಕೋರಾ ಅವರನ್ನು ಸತ್ಕರಿಸಲಾಯಿತು. ಸಮಾಜದ ಮುಖಂಡರಾದ ನಾಗೋಜಿ ಲಂಗೋಟಿ, ಸಿದ್ದು ಕಿಲಾಸ್ಕರ, ಗಿರಿಜಪ್ಪ ಗಡ್ಡಪ್ಪ, ರಾಜು ಗೌಳಿ, ಪಿಂಟು ಗೌಳಿ, ಅಂಬಾಜಿ ಕಿಲಾಸ್ಕರ, ಪದ್ಮಾ ಗೌಳಿ, ರೇಣುಕಾ ಗೌಳಿ, ಗೀತಾ ಗೌಳಿ ಹಾಗೂ ಅನೇಕ ಹಿರಿಯರು ಜಾತ್ರಾ ಉತ್ಸವದಲ್ಲಿ ಭಾಗವಹಿಸಿದ್ದರು.

## ಬಲಿಷ್ಠ ಸಮಾಜದ ನಿರ್ಮಾಣಕ್ಕೆ ಶಿಕ್ಷಣ ಬಹಳ ಮುಖ್ಯ- ಅಮ್ಜದ್ ಪಟೇಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಒಂದು ಸಮಾಜ ಬಲಿಷ್ಠವಾಗಿ ಬೆಳೆಯಲು ಶಿಕ್ಷಣ ಎಂಬುದು ಬಹಳ ಮುಖ್ಯವಾಗಿದ್ದು, ಮಕ್ಕಳನ್ನು ಉತ್ತಮ ಶಿಕ್ಷಣವಂತರನ್ನಾಗಿಸಿ ಸಮಾದಲ್ಲಿ ಅವರನ್ನು ಉನ್ನತ ಮಟ್ಟದಲ್ಲಿ ಬೆಳೆಸಬೇಕು ಎಂದು ಕೊಪ್ಪಳ ನಗರ ಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್ ಹೇಳಿದರು.

ಅವರು ಸೋಮವಾರ ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹಡಪದ ಅಪ್ಪಣ್ಣ ನವರು 12ನೇ ಶತಮಾನದ ಬಸವಣ್ಣನವರ ಜೊತೆಯಲ್ಲಿ ಅವರ ಆತ್ಮೀಯ ಸಹಾಯಕರಾಗಿ ಅವರೊಂದಿಗೆ ಸೇರಿ ಜಾತಿ ಬೇದ ಹಾಗೂ ಮೌಢ್ಯತೆಗಳನ್ನ ತೊಡೆದುಹಾಕಲು ಹೋರಾಡಿದ್ದರು. ಎಲ್ಲಾ ಜಾತಿ ಧರ್ಮಗಳಿಗೆ ಸಮಾನತೆ ಕೊಡಲು ಸಹ ಹಗಳಿರುಳು ಶ್ರಮಿಸಿ, ಹಡಪದ ಸಮಾಜವನ್ನು ಒಂದು ಬಲಿಷ್ಠ ಸಮಾಜವನ್ನಾಗಿಸಿದ್ದಾರೆ. ತಮ್ಮ ವಚನಗಳ ಮೂಲಕ ಸಮಾಜದ ಅಂಕುಡೊಂಕುಗಳನ್ನು ತಿದ್ದಲು ಶ್ರಮಿಸಿದ್ದರು. ಅವರು ಹಾಕಿಕೊಟ್ಟಿರು ಹಾದಿಯಲ್ಲಿ ನಾವೂ ಕೂಡ ಸಾಗಬೇಕಾಗಿದೆ. ನಮ್ಮ ಮಕ್ಕಳಿಗೆ ಬಸವಣ್ಣನವರ ಮತ್ತು ಹಡಪದ ಅಪ್ಪಣ್ಣನವರ ಚಿಂತನೆಗಳನ್ನು ಕಲಿಸಿ ಅವರನ್ನು ಈ ಸಮಾಜಕ್ಕೆ ಒಂದು ಒಳ್ಳೆ ನಾಗರಿಕರನ್ನಾಗಿ ಮಾಡಬೇಕು ಎಂದರು. ಕೊಪ್ಪಳದ ಅಪರ ಜಿಲ್ಲಾಧಿಕಾರಿ ಸಿದ್ದರಾಮೇಶ್ವರ ಅವರು ಹಡಪದ ಅಪ್ಪಣ್ಣನವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಹಡಪದ ಅಪ್ಪಣ್ಣನವರು ಬಸವಣ್ಣನವರ ಕಾಲದಲ್ಲಿ ಬಹಳ ಪ್ರಸಿದ್ಧಿಯನ್ನು ಪಡೆದ ಶರಣರಾಗಿದ್ದರು. ವಿಶ್ವದ ಮೊದಲ ಸಂಸತ್ತು ಎಂದು ಕರೆಯಲ್ಪಡುವ ಬಸವಣ್ಣನವರು ಸ್ಥಾಪಿಸಿದ ಅನುಭವ ಮಂಟಪದಲ್ಲಿ ಹಡಪದ ಅಪ್ಪಣ್ಣನವರು ಪ್ರಧಾನ ಕಾರ್ಯದರ್ಶಿಯಾಗಿ ಕೆಲಸ ಮಾಡಿದವರು ಎಲ್ಲರಿಗೂ ಹೆಮ್ಮೆಯ ವಿಷಯವಾಗಿದೆ. ಅಂದಿನ ಕಾಲದಲ್ಲಿ ಹಳ್ಳಿಗಳಲ್ಲಿ ಹಡಪದ ಅಪ್ಪಣ್ಣನವರ ಮೂಖ ನೋಡಬಾರದು ಎನ್ನುವ ವದಂತಿಯು ಹರಿದಾಡುತಿತ್ತು, ಹಾಗಾಗಿ ಬಸವಣ್ಣನವರು ನನ್ನ ನೋಡಲು ಬರುವವರು ಮೊದಲು ಹಡಪದ ಅಪ್ಪಣ್ಣನವರ ಮುಖ ನೋಡಿಕೋಂಡು ಬರುವಂತೆ ಆದೇಶಿಸಿದ್ದರು. ಬಸವಣ್ಣನವರಿಗೆ ಅಪ್ಪಣ್ಣನವರು ಬಹಳಷ್ಟು ಆತ್ಮಿಯವಾಗಿದ್ದರು. ಅಪ್ಪಣ್ಣನವರು 250ಕ್ಕೂ ಹೆಚ್ಚು ವಚನಗಳನ್ನು ರಚಿಸಿದ್ದು, ಅವರು ಪ್ರತಿಯೊಂದು ವನಚನಗಳಲ್ಲಿ ವಿಭಿನ್ನವಾದ ಸಂದೇಶಗಳನ್ನು ಕೊಟ್ಟಿದ್ದಾರೆ. ಈ ದಿನ ನಾವು ನಮ್ಮ ಮಕ್ಕಳಿಗೆ ಹಡಪದ ಅಪ್ಪಣ್ಣನವರ ಜೀವನ ಸಾರಾಂಶವನ್ನ ತಿಳಿಸಿಕೊಡಬೇಕು ಮತ್ತು ಅವರಂತೆ ಪ್ರಮಾಣಿಕವಾಗಿ ನಮ್ಮ ಕೆಲಸದಲ್ಲಿ ಅವರನ್ನು ಕಾಣಬೇಕು ಎಂದು ಹೇಳಿದರು.

ಗಂಗಾವತಿಯ ಶ್ರೀ ಕೊಲ್ಲಿ ನಾಗೇಶ್ವರ ರಾವ್ ಗಂಗಯ್ಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಮುಮ್ತಾಜ್ ಬೇಗಂ ಅವರು ಹಡಪದ ಅಪ್ಪಣ್ಣನವರ ಕುರಿತು ವಿಶೇಷ ಉಪನ್ಯಾಸ ನೀಡಿ, ಮಾನವ ಚರಿತ್ರೆಯಲ್ಲಿ 12ನೇ ಶತಮಾನವು ಸುವರ್ಣ ಅಕ್ಷರಗಳಲ್ಲಿ ಬರೆದಿಡುವ ಕಾಲವಾಗಿದೆ. ಆ ಕಾಲದಲ್ಲೇ ಬಸವಣ್ಣನವರೊಂದಿಗೆ ಹಡಪದ ಅಪ್ಪಣ್ಣನವರು ಸಮ ಸಮಾಜದ ನಿರ್ಮಾಣಕ್ಕಾಗಿ ದುಡಿದಿದ್ದರು. ಜಾತಿರಹಿತ ಸಮಾಜ ನಿರ್ಮಾಣಕ್ಕೆ ಕರೆ ಕೊಟ್ಟಿದ್ದರು. ಇಂದು ಅಂತಹ ಅಪ್ಪಣ್ಣನವರ ಕುರಿತಾದ ಅಧ್ಯಯನಗಳು ಕಡಿಮೆಯಾಗಿವೆ. ಅವರ ತತ್ವ ಮತ್ತು ಚಿಂತನೆಗಳ ಬಗ್ಗೆ ಹೆಚ್ಚಾಗಿ ಅಧ್ಯಯನಗಳು ಆಗಬೇಕು. ಇದರಿಂದ ಹಡಪದ ಅಪ್ಪಣ್ಣನವರ ಬಗ್ಗೆ ಯುವಜನತೆಗೆ ಇನ್ನೂ ಹೆಚ್ಚಾಗಿ ತಿಳಿಯಲು ಸಹಾಯವಾಗುತ್ತದೆ ಎಂದರು. ಈ ಕಾರ್ಯಕ್ರಮದಲ್ಲಿ ಕೊಪ್ಪಳ ನಗರಸಭೆಯ ಆಯುಕ್ತರಾದ ಸುರೇಶ ಬಬಲಾದಿ, ತಾಲ್ಲೂಕು ಪಂಚಾಯತ ಸಹಾಯಕ ನಿರ್ದೇಶಕ ಮಹೇಶ್ ಹಡಪದ, ಕೊಪ್ಪಳ ನಗರಸಭೆ ಸದಸ್ಯರಾದ ಬಸವಸ್ವಾಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಶಂಕರ್ ಮಾಮನಿ, ಮುತ್ತಣ್ಣ ಚಲವಾದಿ ಹಾಗೂ ಹಡಪದ ಸಮಾಜದ ಮುಖಂಡರಾದ ಹನುಮಂತಪ್ಪ ಸರಿಗಮ, ಈಶಪ್ಪ ಮುದ್ದಬಳ್ಳಿ, ಅಂದಪ್ಪ, ಬಸವರಾಜ, ಗವಿಸಿದ್ದಪ್ಪ ಮಾದಿನೂರ, ಮೌನೇಶ ಹಡಪದ, ಶಿವಕುಮಾರ ಕಾರಟಗಿ, ಮುತ್ತಣ್ಣ ಮಾದಿನೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮಹಿಳಾ ಅಭಿವೃದ್ದಿ ನಿಗಮದ ಪ್ರಗತಿ ಪರಿಶೀಲನಾ ಸಭೆ ಶೀಘ್ರದಲ್ಲೇ 1 ಲಕ್ಷವರೆಗೆ ಕಿರು ಸಾಲ ಸೌಲಭ್ಯ :ಪದ್ಮಾವತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.22-ಮಹಿಳೆಯರ ಆರ್ಥಿಕ ಮಟ್ಟವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಮಹಿಳಾ ಅಭಿವೃದ್ದಿ ನಿಗಮದಿಂದ ಶೀಘ್ರದಲ್ಲಿಯೇ 1 ಲಕ್ಷ ರೂ.ಗಳವರೆಗೆ ಕಿರು ಸಾಲ ಸೌಲಭ್ಯವನ್ನು ಪ್ರಾರಂಭಿಸಲಾಗುತ್ತಿದೆ ಎಂದು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ದಿ ನಿಗಮದ ಅಧ್ಯಕ್ಷೆ ಜಿ.ಪದ್ಮಾವತಿ ಹೇಳಿದರು.

ಜಿಲ್ಲಾ ಪಂಚಾಯತ ಸಭಾಭವದಲ್ಲಿ ಮಂಗಳವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಅಭಿವೃದ್ದಿ ನಿಗಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರಕಾರ ಮಹಿಳಾ ಸಬಲೀಕರಣಕ್ಕಾಗಿ ಅನೇಕ ಯೋಜನೆಗಳನ್ನು ರೂಪಿಸಿದ್ದು, ಲಕ್ಷ ರೂ.ಗಳ ಕಿರು ಸಾಲ ಯೋಜನೆಯಿಂದ ಮತ್ತಷ್ಟು ಆರ್ಥಿಕವಾಗಿ ಸಬಲರಾಗಲು ಅನುಕೂಲವಾಗಲಿದೆ. ಮಹಿಳೆಯರು ಈ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು. ಜಿಲ್ಲೆಯ ಅಧಿಕಾರಿ ವರ್ಗದ ಆಸಕ್ತಿ ಮತ್ತು ಕಾಳಜಿ ಸಕರಾತ್ಮಕವಾಗಿದ್ದು, ಮುಂದಿನ ದಿನಗಳಲ್ಲಿ ಈ ಭಾಗ-ಕ್ಕೆ ಇನ್ನೂ ಹೆಚ್ಚಿನ ಅನುಕೂಲ ಮಾಡಿಕೊಡಲಾಗುವದೆಂದು ತಿಳಿಸಿದರು.

ಮಹಿಳೆಯರು ಸ್ವಾವಲಂಬಿ ಬದುಕು ನಡೆಸಲು ಸರಕಾರ ಹಲವು ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಕರ್ನಾಟಕ ರಾಜ್ಯ ಮಹಿಳಾ ಅಬಿವೃದ್ದಿ ನಿಗಮದ ಅಧ್ಯಕ್ಷೆ ಜಿ.ಪದ್ಮಾವತಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ದೇವದಾಸಿ ಪುನರ್ವಸತಿ ಯೋಜನೆಯಡಿ, ದೇವದಾಸಿಯರ ಮಕ್ಕಳ ಶಿಕ್ಷಣಕ್ಕಾಗಿ ಸಹಾಯಧನವನ್ನು ಸರ್ಕಾರ ನೀಡುತ್ತಿದೆ. ಮಾಜಿ ದೇವದಾಸಿಯರಿಗೆ ನೀಡುವ ಮಾಸಿಕ ಪಿಂಚಣಿ ಮೊತ್ತವನ್ನು 1500 ರೂ.ಗಳಿಂದ 2 ಸಾವಿರ ರೂ.ಗಳವರೆಗೆ ಹೆಚ್ಚಿಸಲಾಗಿದೆ. ಹಾಗೆಯೇ ದೇವದಾಸಿಯರ ಸಮಗ್ರ ಸಮೀಕ್ಷೆಯನ್ನು ಸರ್ಕಾರ ಕೈಗೊಳ್ಳುತ್ತಿದ್ದು, ಇದರಿಂದ ವಂಚಿತ ದೇವದಾಸಿಯರಿಗೂ ಸರಕಾರದ ಯೋಜನೆಗಳು ತಲುಪಿಸುವ ಕಾರ್ಯ ಆಗಲಿದೆ ಎಂದು ಅವರು ಹೇಳಿದರು.

ದೇವದಾಸಿಯರು ಮತ್ತು ತೃತೀಯ ಲಿಂಗಿಗಳು ಯಾವುದೇ ಹಿಂಜರಿಕೆ ಇಲ್ಲದೆ ತಮ್ಮ ಹೆಸರನ್ನು ಸಂಬಂಧಪಟ್ಟ ಸಮೀಕ್ಷೆಯಲ್ಲಿ ನೋಂದಾಯಿಸಬೇಕು. ಅಂದಾಗ ಮಾತ್ರ ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಅರ್ಹರಾಗುತ್ತಾರೆ. ಸಮೀಕ್ಷೆಗಳಿಂದ ಇನ್ನು ಹೆಚ್ಚಿನ ಯೋಜನೆಗಳನ್ನು ರೂಪಿಸಲು ಸಹಾಯವಾಗುತ್ತದೆ ಎಂದು ಪದ್ಮಾವತಿ ತಿಳಿಸಿದರು.

ಲೀಡ್ ಬ್ಯಾಂಕ್ ವ್ಯವಸ್ಥಾಪಕ ರಾಜಕುಮಾರ್ ಹೂಗಾರ ಮಾತನಾಡಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳು ಸಾಕಷ್ಟಿದ್ದು, ನೀವಷ್ಟೇ ಯೋಜನೆಗಳನ್ನು ಪಡೆಯದೇ ಇತರರಿಗೂ ಅದರ ಮಾಹಿತಿ ಹಂಚಬೇಕು. ಸೂಕ್ತ ದಾಖಲೆ ಸಹಿತ ನೀವು ಒಂದು ಹೆಜ್ಜೆ ಮುಂದಿಟ್ಟರೇ ನಾವು ಕೂಡ ಒಂದು ಹೆಜ್ಜೆ ಮುಂದೆ ಬಂದು ನಿಮಗೆ ಸಾಲ ಕೊಡುತ್ತೇವೆ ಎಂದರು. ಇದೇ ಸಂದರ್ಭದಲ್ಲಿ ಉದ್ಯೋಗಿನಿ ತರಬೇತಿ ಪಡೆದ ಮಹಿಳೆಯರಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಧಾನ ವ್ಯವಸ್ಥಾಪಕರಾದ ಅಕ್ಕಮಹಾದೇವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಕೆ.ಪ್ರಭಾಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಸುಮಲತಾ ಹಿರೇಮನಿ, ಮಂಜುನಾಥ್ ಪರಸನ್ನವರ್ ಮತ್ತು ಎಲ್ಲ ತಾಲೂಕು ಸಿಡಿಪಿಓಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## 24 ಗಂಟೆ ನೀರು ಸರಬರಾಜು ಯೋಜನೆ ಅನುಷ್ಠಾನಕ್ಕೆ ಶ್ರಮಿಸಿ-ಕುರೇರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.22-ಜಿಲ್ಲೆಯ ಗ್ರಾಮೀಣ ಭಾಗದ ಜನರಿಗೆ ದಿನದ 24 ಗಂಟೆ ಕುಡಿಯುವ ನೀರು ಸರಬರಾಜು ಮಾಡುವ ಕುರಿತು ಇಂಜಿನೀಯರ್ ಮತ್ತು ಪಂಚಾಯತರಾಜ್ ಅಭಿವೃದ್ದಿ ಅಧಿಕಾರಿಗಳಿಗೆ ಹಮ್ಮಿಕೊಂಡ ಒಂದು ದಿನದ ತರಬೇತಿ ಕಾರ್ಯಾಗಾರ-ಕ್ಕೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಚಾಲನೆ ನೀಡಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಮಂಗಳವಾರ ಜಿಲ್ಲಾ ಪಂಚಾಯತ ಮತ್ತು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಯೋಗದಲ್ಲಿ ಹಮ್ಮಿಕೊಂಡ ಈ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಭಾಗದಲ್ಲಿ ದಿನದ 24 ಗಂಟೆಗಳ ಕಾಲ ನೀರು ಸರಬರಾಜು ಯೋಜನೆ ಸಮರ್ಪಕ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಇದರ ಸದುಪಯೋಗವನ್ನು ಪಡೆದುಕೊಂಡು ತಮ್ಮ ವ್ಯಾಪ್ತಿಯಲ್ಲಿ ಯೋಜನೆ ಅನುಷ್ಠಾನಕ್ಕೆ ಶ್ರಮಿಸಬೇಕು ಎಂದರು.

ಜಿಲ್ಲೆಯಲ್ಲಿ 195 ಗ್ರಾಮ ಪಂಚಾಯತಿಗಳು ಇದ್ದು, ಈಗಾಗಲೇ ಮುಧೋಳ ತಾಲೂಕಿನ ಹಲಗಲಿ ಗ್ರಾಮದಲ್ಲಿ ಜಲಜೀವನ ಮಿಷನ್ ಯೋಜನೆಯಡಿ ಸಮರ್ಪಕ ನೀರು ಪೂರೈಕೆ ನಿರ್ವಹಣೆಯಲ್ಲಿ ಯಶಸ್ವಿಯಾಗಿದೆ. ಇದೇ ರೀತಿ ಉಳಿದ ಎಲ್ಲ ಪಂಚಾಯತಿ ವ್ಯಾಪ್ತಿಯಲ್ಲಿ ನೀರು ಪೂರೈಕೆಯ ನಿರ್ವಹಣೆಯಲ್ಲಿ ಯಶಸ್ವಿಯಾಗುವ ನಿಟ್ಟಿನಲ್ಲಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದ್ದು, ಕಡಿಮೆ, ಮಿತ, ಸುಸ್ಥಿತ ಬಳಕೆ ಆಗಬೇಕಿದೆ. ಗುಣಮಟ್ಟದ ನೀರು ಪೂರೈಕೆಯಾಗಬೇಕು. ನಿಗದಿತ ಪ್ರಮಾಣದಲ್ಲಿ ತಂಡದ ರೂಪದಲ್ಲಿ ಸ್ಥಳೀಯ ಜನಪ್ರತಿನಿಧಿಗಳ ಸಲಹೆ ಪಡೆದುಕೊಂಡು ಯೋಜನೆ ಯಶಸ್ವಿಗೊಳಿಸಲು ಮುಂದಾಗಬೇಕು ಎಂದು ಕುರೇರ ಸೂಚಿಸಿದರು.

ಬೆಂಗಳೂರಿನ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಉಪ ಕಾರ್ಯದರ್ಶಿ ಜಾಫರ ಸುತಾರ ಮಾತನಾಡಿ, ಸರಕಾರ ಕುಡಿಯುವ ನೀರಿನ ಯೋಜನೆಗೆ ಸಾಕಷ್ಟು ಹಣ ಖರ್ಚು ಮಾಡುತ್ತಿದೆ. ಗ್ರಾಮೀಣ ಭಾಗದಲ್ಲಿಯೂ ಸಹ ದಿನ 24 ಗಂಟೆಗಳ ಕಾಲ ನೀರು ಪೂರೈಸುವ ಯೋಜನೆ ಸರಕಾರ ಯೋಜನೆ ರೂಪಿಸಿದೆ. ಈ ಯೋಜನೆ ಯಶಸ್ವಿಗೊಳಿಸಲು ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಗ್ರಾಮೀಣ ಭಾಗದಲ್ಲಿ ದಿನದ 24 ಗಂಟೆಗಳ ನೀರು ಸರಬರಾಜು ಮಾಡುವದರಿಂದ ನೀರು ಪೋಲಾಗುವದನ್ನು ತಡೆಯಬಹುದಾಗಿದೆ. ಕರ್ನಾಟಕ ಸುಸ್ಥಿರ ಗ್ರಾಮೀಣ ನೀರು ಸರಬರಾಜು ಕಾರ್ಯಕ್ರಮವು ರಾಜ್ಯದಲ್ಲಿ ಸುರಕ್ಷಿತ ಸುಸ್ಥಿರ ಕುಡಿಯುವ ನೀರಿನ ಲಭ್ಯತೆ ಹಾಗೂ ಗ್ರಾಮೀಣ ಕುಡಿಯುವ ನೀರು ಸರಬರಾಜು ಮಾಡುವ ವಿವಿಧ ಹಂತದ ಸಂಸ್ಥೆಗಳನ್ನು ಬಲಪಡಿಸುವ ಉದ್ದೇಶ ಹೊಂದಿದೆ. ಈ ಕಾರ್ಯಕ್ರಮ ರಾಜ್ಯದ ಎಲ್ಲ ಜಿಲ್ಲೆಗಳ ಗ್ರಾಮೀಣ ಪ್ರದೇಶಗಳಲ್ಲಿ ಐದು ವರ್ಷದ ಅವಧಿಯಲ್ಲಿ ಅನುಷ್ಠಾನ ಮಾಡಲು ಉದ್ದೇಶ ಹೊಂದಲಾಗಿದೆ ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿಗಳಾದ ಅಜಯ ಸಿನ್ಹಾ ಕರ್ನಾಟಕ ಸುಸ್ಥಿರ ಗ್ರಾಮೀಣ ನೀರು ಸರಬರಾಜು ಕಾರ್ಯಕ್ರಮ ಕುರಿತು ವಿವರವಾಗಿ ತರಬೇತಿಯಲ್ಲಿ ತಿಳಿಸಿಕೊಟ್ಟರು. ಜಿಲ್ಲಾ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ಆಕಾಶ ಸ್ವಾಗತಿಸಿದರು. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ರವಿಕಿರಣ ಡಂಬಳ ವಂದಿಸಿದರು. ಕಾರ್ಯಾಗಾರದಲ್ಲಿ ಗ್ರಾಮ ಪಂಚಾಯತ ಅಭಿವೃದ್ದಿ ಅಧಿಕಾರಿಗಳು, ಕಾರ್ಯನಿರ್ವಾಹಕ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಇದ್ದರು.

## ಕಳೆ ತೆಗೆಯುವ ಸರಳಯಂತ್ರ ರೂಪಿಸಿದ ರೈತ

ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್,ಜು.22: ಇಲ್ಲಿನ ರೈತ ತಿಮ್ಮರೆಡ್ಡಿ ಹನ್ಮಿರೆಡ್ಡಿ ಉಪ್ಪಟ್ಟಿ ಎಂಬುವವರು ತಮ್ಮ ಹೊಲದಲ್ಲಿ ಕಳೆ ತೆಗೆಯಲು ಒಂದು ಸರಳ ಯಂತ್ರ ರೂಪಿಸಿಕೊಂಡಿದ್ದಾರೆ.

ತಮ್ಮ ಮೂರು ಎಕರೆ ಸ್ವಂತ ಜಮೀನುನಲ್ಲಿ ಉದ್ದು ಮತ್ತು ತೊಗರಿ ಬಿತ್ತಿದ್ದು ಈಗ ಬೆಳೆಯ ಮಧ್ಯದಲ್ಲಿ ಕಳೆತೆಗೆಯುವ ಹಂತಕ್ಕೆ ಬಂದಿದೆ. ರೈತ ತಿಮ್ಮರೆಡ್ಡಿ ಉಪ್ಪಟ್ಟಿ ಅವರು ತಮ್ಮ ಸ್ವಂತ ಬುದ್ಧಿ ಚಾತುರ್ಯದಿಂದ ಸೈಕಲ್ ವಿಡರ್ನ ಸ್ವತಹ ತಾವೇ ಮಾಡಿಕೊಂಡು ಎತ್ತುಗಳ ಸಹಾಯವಿಲ್ಲದೆ ಹೊಲದಲ್ಲಿ ಕಳೆತೆಗೆಯುತಿದ್ದಾರೆ. ರೈತ ತಿಮ್ಮರೆಡ್ಡಿ ಅವರನ್ನು ವಿಚಾರಿಸಿದಾಗ ಇದನ್ನು ತಯಾರಿಸಲು 800 ರೂಪಾಯಿಗಳು ಖರ್ಚು ಆಯಿತು. ಇದರಿಂದ ನಾನು ದಿನಾಲು ಸುಮಾರು 10 ಸಾಲುಗಳ ಮಧ್ಯದಲ್ಲಿ ಕಳೆಯನ್ನು ತೆಗೆಯುತ್ತೇನೆ. ಒಕ್ಕಲುತನ ಮಾಡುವವರು ಹೆಚ್ಚು ಹಣ ಖರ್ಚು ಮಾಡಿಕೊಳ್ಳದೆ ಸಾವಯವ ಗೊಬ್ಬರ ಬಳಸುವದರ ಜೊತೆಗೆ ಉತ್ತಮ ದವಸ ಧಾನ್ಯಗಳನ್ನು ಬೆಳೆಯಬಹುದು ಎಂದು ತಮ್ಮ ಅನುಭವವನ್ನು ಹಂಚಿಕೊಂಡರು.

# ರಾಯಚೂರನಲ್ಲಿ ಭಾರಿ ಮಳೆ: ಜಲಾವ್ರತ ಪ್ರದೇಶಕ್ಕೆ

## ಪಾಲಿಕೆಯ ಆಯುಕ್ತ ಜುಬಿನ್ ಮೊಹಪಾತ್ರ ಭೇಟಿ; ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು, ಜು 22 : ರಾಯಚೂರ ಜಿಲ್ಲೆಯಲ್ಲಿ ಜುಲೈ 21ರಂದು ಸುರಿದ ಭಾರಿ ಮಳೆ ಹಿನ್ನೆಲೆಯಲ್ಲಿ ಜಲಾವ್ರತಗೊಂಡ ವಿವಿಧ ಪ್ರದೇಶಗಳಿಗೆ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರಅವರು ಜುಲೈ 22ರಂದು ಭೇಟಿ ನೀಡಿ ಪರಿಶೀಲಿಸಿದರು.

ವಿದ್ಯಾಭಾರತಿಶಾಲೆಯಮಾರ್ಗದಲ್ಲಿರುವ ರೈಲ್ವೆ ಕೆಳ ಸೇತುವೆ ಬಳಿ ಭಾರೀ ಪ್ರಮಾಣದಲ್ಲಿ ಮಳೆ ನೀರು ನಿಂತು ರಸ್ತೆ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗಿರುವುದನ್ನು ಆಯುಕ್ತರು ಖುದ್ದು ವೀಕ್ಷಣೆ ನಡೆಸಿದರು.

ಈ ಕೆಳ ಸೇತುವೆ ಬಳಸಿ ನಿತ್ಯ ಸಾವಿರಾರು ಸಂಖ್ಯೆಯ ವಾಹನಗಳು ಸಂಚರಿಸುತ್ತವೆ. ನಿಜಲಿಂಗಪ್ಪ ಕಾಲೊನಿ, ವಿದ್ಯಾ ಭಾರತಿ ಶಾಲೆ ಸೇರಿದಂತೆ ಬೇರೆ ಬೇರೆ ಕಾಲೊನಿಗೆ ತೆರಳಲು ಇದೆ ಪ್ರಮುಖ ಮಾರ್ಗವಾಗಿದೆ. ಮಳೆಯಾದಾಗೊಮ್ಮೆ ಇಲ್ಲಿ ನೀರು ನಿಂತು ಸುಗಮವಾಗಿ ಸಂಚರಿಸಲು ಸಾಕಷ್ಟು ತೊಂದರೆಯಾಗುತ್ತಿದೆ ಎಂದು ದ್ವಿಚಕ್ರ ವಾಹನ ಸವಾರರು ಆಯುಕ್ತರಿಗೆ ತಿಳಿಸಿದರು.

ನಿಮ್ಮ ಸಮಸ್ಯೆ ಏನೆಂದು ಅರ್ಥವಾಗಿದೆ. ಸದ್ಯಕ್ಕೆ ಪಂಪ್ ಮೂಲಕ ನೀರನ್ನು ಬೇರೆಡೆ ಸಾಗಿಸುವ ಕಾರ್ಯ ನಡೆದಿದೆ. ಈ ಮಾರ್ಗವಾಗಿ ಸಂಚರಿಸುವ ಜನರಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದಹಾಗೆ ವಾರದೊಳಗೆ ಇದನ್ನು ಸರಿಪಡಿಸಲಾಗುವುದು ಎಂದು ಆಯುಕ್ತರು ತಿಳಿಸಿದರು.

ಗಂಜ್ ಪ್ರದೇಶ, ಎಪಿಎಂಸಿ ಸೇರಿದಂತೆ ವಿವಿಧೆಡೆ ಸಂಚರಿಸಿದ ಆಯುಕ್ತರು, ಆಯಾ ಕಡೆಗಳಲ್ಲಿ ಮಳೆ ನೀರು ಹರಿಯದೇ ನಿಂತಿರುವುದನ್ನು ಗಮನಿಸಿದರು.

ಗಟಾರುಗಳಲ್ಲಿ ಎಲ್ಲೆಡೆ ಪ್ಲಾಸ್ಟಿಕ್ ತುಂಬಿರುವುದರಿಂದ ನೀರು ಹರಿಯದೇ ನಮಗೆ ಸಾಕಷ್ಟು ತೊಂದರೆಯಾಗಿದೆ ಎಂದು ಇದೆ ವೇಳೆ ಬೀದಿ ಬದಿಯ ವ್ಯಾಪಾರಸ್ಥರು ಆಯುಕ್ತರ ಮುಂದೆ ತಮ್ಮ ಅಳಲನ್ನು ತೋಡಿಕೊಂಡರು.

ರಾಯಚೂರ ನಗರದ ಕೆಲ ಪ್ರದೇಶಗಳಲ್ಲಿ ಹತ್ತಾರು ವರ್ಷಗಳಿಂದ ಒಳ ಚರಂಡಿಗಳು ಕಸ ತುಂಬಿಕೊಂಡಿವೆ. ಇಲ್ಲಿ ಪ್ಲಾಸ್ಟಿಕ್ ತುಂಬಿ ನೀರು ಚಲಿಸದಂತಾಗಿದೆ. ನಗರದ ಯಾವುದೇ ಕಡೆಗಳಲ್ಲಿ ಮಳೆ ನೀರು ನಿಲ್ಲದೇ ಸರಾಗವಾಗಿ ಚರಂಡಿಯಲ್ಲಿ ಹರಿಯುವಂತೆ ಒಳಚರಂಡಿ ಶುಚಿತ್ವ ಕಾರ್ಯವನ್ನು ಈ ಕೂಡಲೇ ಆರಂಭಿಸಲಾಗುವುದು ಎಂದು ಇದೆ ವೇಳೆ ಆಯುಕ್ತರು ತಿಳಿಸಿದರು. ಸಾರ್ವಜನಿಕರಲ್ಲಿ ಆಯುಕ್ತರ ಮನವಿ: ಅಂಗಡಿ ಮಾಲೀಕರು ಮತ್ತು ಸಾರ್ವಜನಿಕರು ಕಸವನ್ನು ಎಲ್ಲೆಂದರಲ್ಲಿ ಎಸೆಯಬಾರದು. ಪ್ಲಾಸ್ಟಿಕ್ ಸೇರಿದಂತೆ ಯಾವುದೇ ಕಸವನ್ನು ಪಾಲಿಕೆಯ ಕಸ ಎತ್ತುವ ವಾಹನಗಳಿಗೆ ಹಾಕಬೇಕು. ಕೊಳಚೆ ನೀರನ್ನು ಯಾರು ಸಹ ನೇರವಾಗಿ ಡ್ರೈನೇಜ್ ಪೈಪಗೆ ಬಿಡಬಾರದು ಎಂದು ಇದೆ ವೇಳೆ ಆಯುಕ್ತರು ರಾಯಚೂರಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ ಮಾಡಿದರು.

# ರಾಜ್ಯಮಟ್ಟದ ಶೂಟಿಂಗ್ ಚಾಂಪಿಯನ್‌ಶಿಪ್

## ಗ್ಲೋಬಲ್ ಸೈನಿಕ ಅಕಾಡೆಮಿ ಮಕ್ಕಳಿಗೆ 14 ಪದಕ




ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.22: ಬೆಂಗಳೂರಿನಲ್ಲಿ ಸೋಮವಾರ ನಡೆದ ರಾಜ್ಯಮಟ್ಟದ ಶೂಟಿಂಗ್ ಚಾಂಪಿಯನ್‌ಶಿಪ್‌ನ ವಿವಿಧ ವಿಭಾಗಗಳಲ್ಲಿ ನಗರದ ಗ್ಲೋಬಲ್ ಸೈನಿಕ ಅಕಾಡೆಮಿಯ ಮಕ್ಕಳು 14 ಪದಕಗಳನ್ನು ಜಯಿಸಿ ಸಾಧನೆ ಮಾಡಿದ್ದಾರೆ.

ನಾಲ್ಕು ವಿದ್ಯಾರ್ಥಿಗಳು 14 ಪದಕಗಳನ್ನು ಬಾಚಿಕೊಂಡಿದ್ದು, ಇವರಲ್ಲಿ ಅನ್ವಿ 2 ಚಿನ್ನ, 2 ಬೆಳ್ಳಿ, 1 ಕಂಚು, ಅನುಷ್ಕಾ 2 ಚಿನ್ನ, 2 ಬೆಳ್ಳಿ, ನಿಶಾ 2 ಚಿನ್ನ, 2 ಬೆಳ್ಳಿ ಹಾಗೂ ಇಶಾ 1 ಬೆಳ್ಳಿ ಪದಕ ಗೆದ್ದುಕೊಂಡಿದ್ದಾರೆ.

ಬೀದರ್ ಸೇರಿದಂತೆ ಕಲ್ಯಾಣ ಕರ್ನಾಟಕದ ಮಕ್ಕಳಲ್ಲಿ ಅಡಗಿರುವ ಪ್ರತಿಭೆ ಹೊರ ತರಬೇಕು ಎನ್ನುವುದು ಅಕಾಡೆಮಿ ಕನಸಾಗಿತ್ತು. ಅದು ಈಗ ಸಾಕಾರವಾಗಿದೆ. ಮಕ್ಕಳ ಸಾಧನೆ ಹೆಮ್ಮೆ ಉಂಟು ಮಾಡಿದೆ ಅಕಾಡೆಮಿಯ ಅಧ್ಯಕ್ಷ, ನಿವೃತ್ತ ಕರ್ನಲ್ ಶರಣಪ್ಪ ಸಿಕೇನಪುರ ಹೇಳಿದ್ದಾರೆ.

ತರಬೇತುದಾರ ಕ್ಯಾಪ್ಟನ್ ಪಾಲಂಗಪ್ಪ, ಪ್ರಾಚಾರ್ಯೆ ಸಮೋದ್ ಮೋಹನ್, ಸಾರ್ವಜನಿಕ ಸಂಪರ್ಕ ಅಧಿಕಾರಿ ಕಾರಂಜಿ ಸ್ವಾಮಿ, ಮುಖ್ಯಶಿಕ್ಷಕಿ ಜ್ಯೋತಿ ರಾಗ, ಶಿಕ್ಷಕ ಸುನೀಲ್ ಅವರು ವಿದ್ಯಾರ್ಥಿಗಳ ಸಾಧನೆಗೆ ಸಂತಸ ವ್ಯಕ್ತಪಡಿಸಿದ್ದಾರೆ.

ಅದ್ದೂರಿ ಸ್ವಾಗತ: ಪದಕ ಗೆದ್ದು ರೈಲು ಮೂಲಕ ನಗರದ ರೈಲು ನಿಲ್ದಾಣಕ್ಕೆ ಬಂದ ಮಕ್ಕಳನ್ನು ಅದ್ದೂರಿಯಾಗಿ ಸ್ವಾಗತಿಸಿ ಬರಮಾಡಿಕೊಳ್ಳಲಾಯಿತು.

ಶರಣಪ್ಪ ಸಿಕೇನಪುರ, ಬಿಡಿಎ ಮಾಜಿ ಅಧ್ಯಕ್ಷ ಬಾಬುವಾಲಿ, ಡಾ. ರಘು ಕೃಷ್ಣಮೂರ್ತಿ, ಕಲ್ಯಾಣ ಕರ್ನಾಟಕ ಖಾಸಗಿ ಶಾಲಾ ಆಡಳಿತ ಮಂಡಳಿ ಸಂಘದ ಜಿಲ್ಲಾ ಘಟಕದ ಗೌರವಾಧ್ಯಕ್ಷ ರೇವಣಸಿದ್ದಪ್ಪ ಜಲಾದೆ, ಅಧ್ಯಕ್ಷ ರಾಜೇಂದ್ರ ಮಣಗೆರೆ, ಗಣಪತಿ ಸೋಲಪುರ, ಸಂತೋಷಕುಮಾರ ಮಂಗಳೂರೆ ಮತ್ತಿತರರು ಮಕ್ಕಳನ್ನು ಸನ್ಮಾನಿಸಿ ಪ್ರೋತ್ಸಾಹಿಸಿದರು.

ನಂತರ ಅಲಂಕೃತ ರಥದಲ್ಲಿ ರೈಲು ನಿಲ್ದಾಣದಿಂದ ಅಕಾಡೆಮಿ ವರೆಗೆ ಮಕ್ಕಳ ಮೆರವಣಿಗೆ ನಡೆಯಿತು.

# ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಹಿಂದುಳಿವಿಕೆ ಪತ್ತೆಗೆ ಮೌಲ್ಯಮಾಪನ :ಬಿ.ಆರ್.ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.22: ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ರಾಜ್ಯದಲ್ಲಿಯೇ ಅತ್ಯಂತ ಹಿಂದುಳಿದಿದ್ದು, ಹಿಂದುಳಿವಿಕೆ ಪತ್ತೆಗೆ ಮೌಲ್ಯಮಾಪನ ನಡೆಸುವಂತೆ ಮುಖ್ಯಮಂತ್ರಿಗಳಿಗೆ ಕೋರಲಾಗುವುದು ಎಂದು ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್.ಪಾಟೀಲ ಹೇಳಿದರು.

ಮಂಗಳವಾರ ಇಲ್ಲಿನ ಡಿ.ಸಿ. ಕಚೇರಿ ಸಭಾಂಗಣದಲ್ಲಿ ಕಲ್ಯಾಣ ಕರ್ನಾಟಕ ಭಾಗದ 7 ಜಿಲ್ಲೆಗಳ ಪ್ರಗತಿ ಪರಿಶೀಲನಾ ಸಭೆ ನಂತರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕಳೆದ 20 ವರ್ಷದಿಂದ ಮೌಲ್ಯಮಾಪನ ನಡೆದಿಲ್ಲ ಎಂದರು.

ರಾಜ್ಯದಲ್ಲಿ ಸುಸ್ಥಿರ ಅಭಿವೃದ್ಧಿ ನಿಟ್ಟಿನಲ್ಲಿ ಇದೇ ಪ್ರಥಮ ಬಾರಿಗೆ ಜಿಲ್ಲಾ ಹಂತದಲ್ಲಿ ಯೋಜನಾ ಆಯೋಗದಿಂದ ವಿವಿಧ ಇಲಾಖೆಗಳ ಪರಸ್ಪರ ಸಮಾಲೋಚನೆ ಸಭೆ ಕರೆಯಲಾಗಿದೆ. ಕೃಷಿಯಿಂದ ಜನ ವಿಮುಖವಾಗುತ್ತಿದ್ದಾರೆ. ಕೃಷಿ ಪ್ರಧಾನ ವ್ಯವಸ್ಥೆ ನಮ್ಮದಾಗಿದ್ದು, ಇದನ್ನು ಪ್ರೋತ್ಸಾಹಿಸಲು ಕೃಷಿಕಗೆ ಪೂರಕವಾದ ಹೈನುಗಾರಿಕೆ, ತೆ-



ೋಟಗಾರಿಕೆ ಹಾಗೂ ಇತರೆ ಉಪ ಕಸುಬುಗಳನ್ನು ಮಾಡುವತ್ತ ಪ್ರೇರೇಪಿಸುವ ಕೆಲಸಗಳಾಗಬೇಕು ಎಂದರು. ಕಲುಷಿತ ನೀರಿನ ಸೇವನೆಯಿಂದಲೆ ಬಹುತೇಕ ರೋಗಗಳಿಗೆ ಆಹ್ವಾನಿಸಿದಂತಿದೆ. ಹೀಗಾಗಿ ಶುದ್ಧ ಕುಡಿಯುವ ನೀರು ಪೂರೈಕೆಯ ಆದ್ಯತೆ ನಮ್ಮದಾಗಬೇಕಿದೆ. ವಾಟರ್ ಶೆಡ್ ನಿರ್ಮಾಣ ಹೆಚ್ಚುಗೊಳಿಸಿ ಅಂತರ್ಜಲ ಹೆಚ್ಚಿಸುವ ಕೆಲಸ ಮಾಡಬೇಕು. ನಿರಿಲ್ಲದೆ ಯಾವುದೇ ಯೋಜನೆ ಸಾಕಾರವಾಗುವುದಿಲ್ಲ ಎಂದರು. ಯೋಜನಾ ಸಮಿತಿಗೆ ಚುನಾವಣೆ ನಡೆಸಿ: ಪಂಚಾಯತ್ ರಾಜ್ ವ್ಯವಸ್ಥೆಗೆ 73-74ರ ತಿದ್ದುಪಡಿ ತಂದು ಪ್ರತಿ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ಸಮಿತಿ ಸಭೆ ರಚಿಸಲಾಗಿದ್ದರು ಅದು ರಾಜ್ಯದಲ್ಲಿ ಸಕ್ರಿಯವಾಗಿ ಸಭೆ ನಡೆಸುತ್ತಿಲ್ಲ. ಪರಿಣಾಮ ಜಿಲ್ಲೆಗಳಲ್ಲಿ ಸುಸ್ಥಿರ ಅಭಿವೃದ್ಧಿಗೆ ಪೂರಕ ಯೋಜನೆಗಳು ರೂಪಗೊಳ್ಳುತ್ತಿಲ್ಲ.

ಇನ್ನು ಕೆಲವೆಡೆ ಯೋಜನಾ ಸಮಿತಿಗಳಿಗೆ ಚುನಾವಣೆಯೇ ನಡೆದಿಲ್ಲ. ಕೂಡಲೆ ಸಂವಿಧಾನಬದ್ಧ ಸಂಸ್ಥೆಗೆ ಚುನಾವಣೆ ನಡೆಸಬೇಕು. ಚುನಾವಣಾ ನಡೆಯದ ಕಡೆ ಜಿಲ್ಲಾ ಉಸ್ತುವಾರಿ ಸಚಿವರು ಸಭೆ ಕರೆಯಬೇಕು ಎಂದು ಬಿ.ಆರ್. ಪಾಟೀಲ ತಿಳಿಸಿದರು.

# ಬೀದರ್ ನಲ್ಲಿ ಧಾರಾಕಾರ ಮಳೆ:

## ಕೆರೆಯಂತಾದ ರಸ್ತೆಗಳು, ಜನಜೀವನ ಅಸ್ತವ್ಯಸ್ತ!



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 22 : ನಗರದಲ್ಲಿ ಒಂದು ಗಂಟೆ ಸುರಿದ ಧಾರಾಕಾರ ಮಳೆಗೆ ಜನಜೀವನ ಅಸ್ತವ್ಯಸ್ತಗಂಡಿತ್ತು.

ಸತತ ಒಂದು ಗಂಟೆಗಳ ಕಾಲ ಸುರಿದ ಧಾರಾಕಾರ ಮಳೆಗೆ ಗಡಿಜಿಲ್ಲೆ ಬೀದರ್‌ನಲ್ಲಿ ಅವಾಂತರ ಸೃಷ್ಟಿಯಾಗಿದೆ. ಧಾರಾಕಾರ ಮಳೆಗೆ ಬೀದರ್ ನಗರದಲ್ಲಿ ಅವಾಂತರ ಸೃಷ್ಟಿಯಾಗಿದ್ದು, ಮಳೆಯ ಅಬ್ಬರಕ್ಕೆ ನಗರ ಪ್ರಮುಖ ರಸ್ತೆಗಳು ಕೆರೆಯಂತಾಗಿವೆ.

ಬೀದರ್ ನಗರದ ಬೊಮ್ಮಗೊಂಡೇಶ್ವರ ವೃತ್ತದಿಂದ ಕಮಠಾಣ ಸ್ಕೂಲ್‌ವರೆಗೆ ರಸ್ತೆ ಮೇಲೆ 3-4 ಅಡಿ ನೀರು ನಿಂತು ರಸ್ತೆ ಸಂಪೂರ್ಣವಾಗಿ ಜಲಾವೃತಗೊಂಡಿದೆ.

ಧಾರಾಕಾರ ಮಳೆಗೆ ಬೀದರ್ ನಗರದಲ್ಲಿ ಅವಾಂತರ ಸೃಷ್ಟಿಯಾಗಿದ್ದು, ಮಳೆಯ ಅಬ್ಬರಕ್ಕೆ ನಗರ ಪ್ರಮುಖ ರಸ್ತೆಗಳು ಕೆರೆಯಂತಾಗಿವೆ. ಬೀದರ್ ನಗರದ ಬೊಮ್ಮಗೊಂಡೇಶ್ವರ ವೃತ್ತದಿಂದ ಕಮಠಾಣ ಸ್ಕೂಲ್‌ವರೆಗೆ ರಸ್ತೆ ಮೇಲೆ 3-4 ಅಡಿ ನೀರು ನಿಂತು ರಸ್ತೆ ಸಂಪೂರ್ಣವಾಗಿ ಜಲಾವೃತಗೊಂಡಿದೆ

ಕೆರೆಯಂತಾದ ರಸ್ತೆ ಮೇಲೆ ಸಂಚರಿಸಲು

ವಾಹನ ಸವಾರರು ಪರದಾಡುತ್ತಿದ್ದು, ಬೈಕ್‌ಗಳನ್ನು ತಳ್ಳಿಕೊಂಡು ಹೋಗುತ್ತಿದ್ದಾರೆ. ಇನ್ನೂ ಹಾಸನ ಜಿಲ್ಲೆಯ ವಿವಿಧೆಡೆ ಧಾರಾಕಾರ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ.

# ಚಂದ್ರಕಾಂತಗೆ ಶಂಕರ ಪ್ರಸಾದ ದುಬೆ ಪ್ರಶಸ್ತಿ ಪ್ರದಾನ

## ನಕಲಿ ಪತ್ರಕರ್ತರ ಹಾವಳಿ ಕಳವಳ ವ್ಯಕ್ತಪಡಿಸಿದ ತಗಡೂರು



ಬಸವಕಲ್ಯಾಣ:ಜು.22:ಹೆಚ್ಚುತ್ತಿರುವ ನಕಲಿ ಪತ್ರಕರ್ತರ ಹಾವಳಿಯ ನಡುವೆ ನೈಜ ಪತ್ರಕರ್ತರು, ನೈಜ ಪತ್ರಿಕೊದ್ಯಮ ಉಳಿಸಿಕೊಂಡು ಹೋಗುವ ಸಂದರ್ಭ ಎದುರಾಗಿದೆ, ಸುದ್ದಿ ಮನೆಗೆ ನುಗ್ಗುವ ಕ್ರಿಮಿನಲ್ ಪತ್ರಕರ್ತರನ್ನು ಹೊರ ದಬ್ಬುವ ಕೆಲಸ ನಡೆಯಬೇಕಾದ ಅಗತ್ಯವಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ತಿಳಿಸಿದರು.

ಕರ್ನಾಟಕಕಾರ್ಯನಿರತಪತ್ರಕರ್ತರ ಸಂಘದ ತಾಲೂಕು ಘಟಕದಿಂದ ನಗರದ ತ್ರಿಪುರಾಂತ ಯಾತ್ರಿ ನಿವಾಸದಲ್ಲಿ ಅಯೋಜಿಸಲಾಗಿದ್ದ ಪತ್ರಿಕಾ ದಿನಾಚರಣೆ ಮತ್ತು ಶಂಕರಪ್ರಸಾದ ದುಬೆ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಾನು ಪತ್ರಕರ್ತ ಎಂದು ಹೇಳಿಕೊಂಡು ಬರುವವರ ಸಂಖ್ಯೆ ದಿನೆ,ದಿನೆ ಹೆಚ್ಚಾಗುತ್ತಿದೆ. ಅಸಲಿ ಪತ್ರಕರ್ತರಿಗಿಂತ ನಕಲಿ ಪತ್ರಕರ್ತರ ಸಂಖ್ಯೆ ಜಾಸ್ತಿ ಆಗಿದೆ. ಬ್ಲ್ಯಾಕ್ ಮೇಲ್ ಪತ್ರಕರ್ತರ, ವಿಜಿಟಿಂಗ್ ಕಾರ್ಡ್ ಹಿಡಿದು ಬರುವ ನಕಲಿ ಪತ್ರಕರ್ತರ ಹಾವಳಿ ಹೆಚ್ಚಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಮಾದ್ಯಮದಲ್ಲಿ ಕೆಲಸ ಮಾಡುವರ ಜವಾಬ್ದಾರಿ ಮಹತ್ವದ್ದಾಗಿದೆ. ವೃತ್ತಿಗೆ ಬದ್ಧತೆಯಿಂದ ಪ್ರಾಮಾಣಿಕವಾಗಿ ಕೆಲಸ ಮಾಡುವ ಪತ್ರರ್ತರ ಸಂಖ್ಯೆಯಲ್ಲಿ ಹೆಚ್ಚಾಗಬೇಕಿದೆ. ಸಮಾಜ ನಮ್ಮನ್ನು ಗಮನಿಸುತ್ತಿದೆ ಎನ್ನುವ ಎಚ್ಚರಿಕೆಯಿಂದ ಸದಾ ಕಾರ್ಯನಿರ್ವಹಿಸಸಬೇಕಿದೆ. ವೃತ್ತಿಗೆ ಕಳಂಕ ಬಾರದ ರೀತಿಯಲ್ಲಿ ನಡೆದುಕೊಳ್ಳಬೇಕಿದೆ. ಕಾರ್ಯ ನಿರತರಿಗೆ ಮಾತ್ರ ನಮ್ಮ ಸಂಘಟನೆ ಇದೆಯೇ ಹೊರತು ಮರೆತವರಿಗಲ್ಲ ಎಂದರು.

ಪ್ರಶಸ್ತಿ ಪ್ರದಾನ ಮಾಡಿದ ಶಾಸಕ ಶರಣು ಸಲಗರ ಮಾತನಾಡಿ, ಪತ್ರಿಕೋದ್ಯಮದ ಮೆರಗು ಹೆಚ್ಚಿಸುವ ಕೆಲಸ ಪತ್ರಕರ್ತರಿಂದ ಅಗಬೇಕು. ಸಮಾಜದ ತಿದ್ದುವ ಕೆಲಸ ಮಾಡಬೇಕು. ಪತ್ರಿಕಾ ಭವನ ಸೇರಿ ಅಗತ್ಯವಿರುವ ಕಲ್ಪಿಸಲು ಪ್ರಯತ್ನಿಸುತ್ತೇನೆ ಎಂದು ಭರವಸೆ ನೀಡಿದ ಅವರು, ಎರಡು ದಿನಗಳ ಹಿಂದೆ ತಾವು ಆಡಿದ ಮಾತಿನಿಂದ ನೋವು ಆಗಿದ್ದಲ್ಲಿ ಪ್ರಾಮಾಣಿಕ ಪತ್ರಕರ್ತರಲ್ಲಿ ನಾನು ಕ್ಷಮೆ ಕೋರುತ್ತೇನೆ ಎಂದರು.

ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ಅಧ್ಯಕ್ಷ ಬಿ.ವಿ.ಮಲ್ಲಿಕಾರ್ಜುನಯ್ಯ ಮಾತನಾಡಿ, ವರ್ಷದಲ್ಲಿ ನಾವು ಮಾಡಿದ ಕೆಲಸದ ಬಗ್ಗೆ ಅತ್ಮಾವಲೋಕನ ಮಾಡಿಕೊಂದು ತಪ್ಪುಗಲನ್ನು ತಿದ್ದಿಕೊಳ್ಳುವದೇ ಪತ್ರಿಕಾ ದರ್ಮ. ಇದು ಪತ್ರಿಕಾ ದಿನ ಆಚರಣೆಯ ಉದ್ದೇಶವೂ ಆಗಿದೆ. ನಿಷ್ಪಕ್ಷಪಾತವಾಗಿ ಪ್ರಮಾಣಿಕವಾಗಿ ಕೆಲಸ ಮಾಡಲು ಮುಂದಾಗಬೇಕು ಎಂದರು.

ಜಿಲ್ಲಾ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಮಾತನಾಡಿ, ಕೋವಿಡ್ ಕಾಲದಲ್ಲಿ ಪ್ರಾಣ ಕಳೆದುಕೊಂಡ 52 ಜನ ಪತ್ರಕರ್ತರ ಕುಟುಂಬಕ್ಕೆ ಸಿಎಂ ಪರಿಹಾರ ನಿಧಿಯಿಂದ ತಲಾ 5 ಲಕ್ಷ ಪರಿಹಾರ, ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ಇತರ ಸೌಲಭ್ಯವನ್ನು ಕೊಡಿಸುವಲ್ಲಿ ಯಶಸ್ವಿಯಾದ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಅವರಿಗೆ ಅಭಿನಂದಿಸುವುದದಾಗಿ ತಿಳಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ, ನಗರಸಭೆ ಅಧ್ಯಕ್ಷ ಎಂಡಿ ಸಗೀರೋದ್ದಿನ್, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಭವಾನಿಸಿಂಗ್ ಠಾಕೂರ, ಜಿಲ್ಲಾಧ್ಯಕ್ಷ ಡಿ.ಕೆ.ಗಣಪತಿ, ರಾಜ್ಯ ಪ್ರತಿನಿಧಿ ಬಸವರಾಜ ಕಾಮಶೆಟ್ಟಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ದಿಲೀಪಕುಮಾರ ಉತ್ತಮ, ನಿವೃತ್ತ ಅಭಿಯಂತರ ಚಂದ್ರಶೇಖರ್ ದುಬೆ ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿದ ಸಂಘದ ತಾಲೂಕು ಅಧ್ಯಕ್ಷ ಜೋಶಿ ಪ್ರಾಸ್ತಾವಿಕ ಮಾತನಾಡಿದರೆ, ಪ್ರಧಾನ ಕಾರ್ಯದರ್ಶಿ ಉದಯಕುಮಾರ ಮುಳೆ ಸ್ವಾಗತಿಸಿದರು. ಉಪಾಧ್ಯಕ್ಷ ಡಿಕೆ.ಪ್ರಲ್ಹಾದ ವಂದಿಸಿದರು. ಪತ್ರಕರ್ತ ದೀಪಕ ಠಮಕೆ ನಿರೂಪಿದರು.

ಇದೆ ಸಂದರ್ಭದಲ್ಲಿ ಕಲಬುರಗಿಯ ಹಿರಿಯ ಪತ್ರಕರ್ತ ಚಂದ್ರಕಾಂತ ಹುಣಸಗಿ ಅವರಿಗೆ ಶಂಕರಪ್ರಸಾದ ದುಬೆ ವಿಭಾಗ ಮಟ್ಟದ ಪ್ರಶಸ್ತಿಯನ್ನು ಪ್ರದಾನ ಮಾಡಿ ಗೌರವಿಸಲಾಯಿತು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರತಿಭಾ ಪುರಸ್ಕಾರ ಪಡೆದ ಪ್ರತಿಭಾನ್ವಿತ ವಿದ್ಯಾರ್ಥಿನಿ ಕೃತಿ ಕಲ್ಯಾಣರಾವ ಮದರಗಾಂವಕರ್ ಅವರಿಗೆ ವಿಶೇಷ ಸನ್ಮಾನ ಮಾಡಲಾಯಿತು.

**ಪತ್ರಕರ್ತರಿಗೆ ಸನ್ಮಾನ**

ಬಸವಕಲ್ಯಾಣ: ಸಮಾರಂಭದಲ್ಲಿ ಹಿರಿಯ ಪತ್ರಕರ್ತ ಶಶಿಕಾಂತ ಶಂಬೆಳ್ಳಿ, ಐಎಸ್‌ಡಬ್ಲೂಜೆ ಸದಸ್ಯ ದೀಪಕ ಮನ್ನಳ್ಳಿ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಉಪಾಧ್ಯಕ್ಷ ನಾಗಶೆಟ್ಟಿ ಧರಂಪುರ, ಕಾರ್ಯದರ್ಶಿಗಳಾದ ಪ್ರಥ್ವಿರಾಜ್ ಎಸ್. ಸುನೀಲ ಕುಲ್ಕರ್ಣಿ, ತಾಲೂಕು ಪ್ರಧಾನ ಕಾರ್ಯದರ್ಶಿ ಉದಯಕುಮಾರ ಮುಳೆ, ಉಪಾಧ್ಯಕ್ಷರಾದ ಡಿಕೆ ಪ್ರಲ್ಹಾದ, ಎಂಡಿ ನಯಿಮೋದ್ದಿನ್, ಕಾರ್ಯದರ್ಶಿ ಶಿವಪುತ್ರ ಪಾಟೀಲ್, ಖಜಾಂಚಿ ಪ್ರದೀಪ ವಿಸಾಜಿ, ಗೌರವ ಸಲಹೆಗಾರ ವೀರಶೆಟ್ಟಿ ಮಲಶೆಟ್ಟಿ, ಸದಸ್ಯರಾದ ರಾಜೇಂದ್ರ ಗೋಖಲೆ, ಕಲ್ಯಾಣರಾವ ಮದರಗಾಂವಕರ್, ಧನರಾಜ ರಾಜೋಳೆ, ಎಂಡಿ ಖುತಬೊದ್ದಿನ್, ಪತ್ರಕರ್ತರಾದ ನಾಗಪ್ಪ ನಿಣ್ಣೆ, ಖಾಜಾ ಸರ್ತಾಜೋದ್ದಿನ್, ಸೈಯದ ಅಕ್ಬರಲಿ, ಜಾಕಿರ ಸೊಂಡ-ಕೆ, ವಸೀಮ ಅಕ್ರಮ, ಮೊಹ್ಮದ ಮಿಯ್ಯಾ ಸೇರಿದಂತೆ ಭಾಗವಹಿಸಿದ ಹುಲಸೂರು ತಾಲೂಕು ಘಟಕದ ಪದಾಧಿಕರಿಗಳು, ಪತ್ರಕರ್ತರು ಹಾಗೂ ಪತ್ರಿಕಾ ವಿತರಕರನ್ನು ಸನ್ಮಾನಿಸಿ ಗೌರವಿಸಲಾಯಿತು.

**2 ಲಕ್ಷ ರೂ. ಧನ ಸಹಾಯ**


ಬಸವಕಲ್ಯಾಣದಲ್ಲಿ ಪತ್ರಕರ್ತರ ಕ್ಷೇಮಾಭಿವೃದ್ದೀ ನಿಧಿ ಅರಂಭಿಸಿದರೆ 2 ಲಕ್ಷರೂ ವಯಕ್ತಿಕವಾಗಿ ನೀಡುತ್ತೇನೆ ಎಂದು ಶಾಸಕ ಸರಣು ಸಲಗರ ಭರವಸೆ ನೀಡಿದರು.

ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ತಗಡೂರು ಅವರು ಈ ಕುರಿತು ಪ್ರಸ್ತಾಪಿಸಿದ ಹಿನ್ನೆಲ್ಲಿ ಶಾಸಕರು ಭರವಸೆ ನೀಡಿದರು.

# ಭೀಮಾ ನದಿಯಲ್ಲಿ ಈಜಲು ಹೋದ ಬಾಲಕ ನಾಪತ್ತೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜು.22: ಭೀಮಾ ನದಿಯಲ್ಲಿ ಈಜಲು ಹೋದ 14 ವರ್ಷದ ಬಾಲಕ ನಾಪತ್ತೆಯಾಗಿರುವ ಘಟನೆ ಜೇವರ್ಗಿ ತಾಲ್ಲೂಕಿನ ಕೂಟನೂರ್ ಗ್ರಾಮದಲ್ಲಿ ಸೋಮವಾರ ಸಂಭವಿಸಿದೆ.



ಎಂಟನೇ ತರಗತಿ ಓದುತ್ತಿರುವ ಕೂಟನೂರ್ ಗ್ರಾಮದ ಮೌನೇಶ್ ಸಿದ್ದರಾಮ್ ತುರಾಯಿ (14) ಎಂಬ ಬಾಲಕನೇ ನಾಪತ್ತೆಯಾಗಿದ್ದಾನೆ.

ಸೋಮವಾರ ಮನೆಯವರೆಲ್ಲ ಹೊಲಕ್ಕೆ ಹೋದ ಕಾರಣ, ಮೌನೇಶ್ ಕೂಡ ಹೊಲಕ್ಕೆ ಹೋಗಿ ಭೀಮಾ ನದಿಯ ದಡದಲ್ಲಿ ಈಜಲು ಹೋಗಿ ನೀರು ಪಾಲಾಗಿದ್ದಾನೆ ಎನ್ನಲಾಗುತ್ತಿದೆ.

ಸ್ಥಳಕ್ಕೆ ನೆಲೋಗಿ ಠಾಣೆಯ ಪೊಲೀಸರು ಹಾಗೂ ಜೇವರ್ಗಿ ಅಗ್ನಿಶಾಮಕ ಸಿಬ್ಬಂದಿಗಳು ಭೇಟಿ ನೀಡಿದ್ದು, ಮೃತದೇಹಕ್ಕಾಗಿ ಶೋಧನಾ ಕಾರ್ಯ ನಡೆಯುತ್ತಿದೆ.


**ಕರ್ನಾಟಕ ನೀರಾವರಿ ನಿಗಮ ನಿಯಮಿತ**

(ಕರ್ನಾಟಕ ಸರ್ಕಾರದ ಉದ್ಯಮ)

ಸಂಖ್ಯೆ:ಕಾಅ/ಕ.ನೀ.ನಿ.ನಿ/ಕೆಪಿಸಿ-2/ಭಾಲ್ಕಿ/ಪಿಬಿ-1/ಟೆಂಡರ/2025-26/402 ದಿನಾಂಕ:21-07-2025

**ಶೇಕಡಾವಾರು ಟೆಂಡರ ಅಧಿಸೂಚನೆ. (ಅಲ್ಪಾವಧಿ)**

**(ಇ-ಪ್ರೋಕ್ಯೂರಮೆಂಟ್ ಮುಖಾಂತರ ಮಾತ್ರ).(ದ್ವಿ -ಲಕೋಟೆಯಲ್ಲಿ)**

ವ್ಯವಸ್ಥಾಪಕ ನಿರ್ದೇಶಕರು, ಕ.ನೀ.ನಿ.ನಿ, ಬೆಂಗಳೂರು ಇವರ ಪರವಾಗಿ ಕಾರ್ಯಪಾಲಕ ಅಭಿಯಂತರರು, ಕ.ನೀ.ನಿ.ನಿ ಕಾರಂಜಾ ಯೋಜನೆ ನಿರ್ಮಾಣ ವಿಭಾಗ ನಂ-2 ಭಾಲ್ಕಿ, ವಿಭಾಗದಿಂದ, ಕರ್ನಾಟಕ ನೀರಾವರಿ ನಿಗಮ ನಿಯಮಿತ ಕಛೇರಿಯಲ್ಲಿ ನೊಂದಾಯಿತ ಅರ್ಹಗುತ್ತಿಗೆದಾರರಿಂದ ಏಕ-ಲಕೋಟೆಯಲ್ಲಿ ಕೆಪಿಪಿ ಪ್ರೋಕ್ಯೂರಮೆಂಟ್ ಮುಖಾಂತರ ಆಹ್ವಾನಿಸಲಾಗಿರುತ್ತದೆ, ವಿವರಗಳು ಈ ಕೆಳಗಿನಂತೆ ಇರುತ್ತವೆ.

**ಕಾಲಾವಧಿ:** ಕಾಮಗಾರಿಯ ಇಂಡೆಂಟ್ ಸಂ.1) 3048/Call-2, 2) 3049/Call-2 & 2843/Call-2 ಇರುತ್ತದೆ. ಹಾಗೂ **ಟೆಂಡರಿಗಿಟ್ಟ ಮೊತ್ತ** 1) 29.29 ಲಕ್ಷಗಳು, 2) 33.76 ಲಕ್ಷಗಳು & 3) 1.75 ಲಕ್ಷಗಳು, ಇ.ಎಂ.ಡಿ ಮೊತ್ತ ಕೆಪಿಪಿಪೋರ್ಟಲ್‌ನ ಪ್ರಕಾರ ಇರುತ್ತದೆ. ಅರ್ಹ ಗುತ್ತಿಗೆದಾರರ ವಿವರ ಕೆಪಿಪಿಪೋರ್ಟಲ್‌ನಂತೆ ಇರುತ್ತದೆ. ಟೆಂಡರ್ ಪ್ರಕ್ರಿಯೆಗಳ ವೇಳಾಪಟ್ಟಿ , ಅ) ಗುತ್ತಿಗೆದಾರರು ಕೆಪಿಪಿಪೋರ್ಟಲ್ ಅಡಿಯಲ್ಲಿ ಟೆಂಡರ್ ಹಾಕುವ ದಿನಾಂಕ: 22-07-2025, ಆ) ಅರ್ಜಿ ಸಲ್ಲಿಸುವ ಕೋನೆಯ ದಿನಾಂಕ :29-07-2025 ಹಾಗೂ ಟೆಂಡರ್ ತೆರೆಯುವ ದಿನಾಂಕ:30-07-2025 ಇರುತ್ತದೆ.Website www.kppp.karnataka.gov.in ನೋಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಈ ಕೆಳಗೆ ಸಹಿ ಮಾಡಿದವರಿಗೆ ಕಛೇರಿ ಸಮಯದಲ್ಲಿ ದೂರವಾಣಿ ಸಂಖ್ಯೆ 08484-262257 ಸಂಪರ್ಕಿಸುವುದು.

**ಸಹಿ/- ಕಾರ್ಯಪಾಲಕ ಅಭಿಯಂತರರು**

**ಕನೀನಿನಿ, ಕಾರಂಜಾಯೋಜನೆ ನಿರ್ಮಾಣ ವಿಭಾಗ ನಂ-2 ಭಾಲ್ಕಿ**

ವಾ.ಸಾ.ಸಂ.ಇ/ಬೀದರ/104/ಕೆ.ಎಸ್.ಎಂ.ಸಿ.&ಎ/2025-26


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.